ಸಂಪುಟ : 13 Volume | ಸಂಚಿಕೆ : 231 Issue | ಪುಟಗಳು : 08 Pages | ಗುರುವಾರ 30 ಅಕ್ಟೋಬರ್ 2025 | ₹2 | PRGINO.120927(RNINO:KARKAN/2011/48371) | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

'ಇರುವೆಗಳು ಸಂಗ್ರಹಿಸಿದ ಕಾಳು, ಜೇನುನೊಣಗಳು ಕೂಡಿಟ್ಟ ಜೇನುತುಪ್ಪ, ಜಿಪುಣನ ಸಂಪತ್ತು ಇವೆಲ್ಲಾ ಸಂಪೂರ್ಣ ನಾಶವಾಗುವವು'

– ಸುಭಾಷಿತ .

2. ಮಗನನ್ನು ಕೊಂದ ತಂದೆಗೆ ಜೀವಾವಧಿ ಶಿಕ್ಷೆ

8 ಅಪ್ರಾಪ್ತರಿಗೆ ಬೈಕ್ ಕೊಡಬೇಡಿ

4 ಕಾನೂನು ಅರಿವು, ನೆರವು ಕಾರ್ಯಕ್ರಮ

# ಹಣೆಯಲ್ಲಿದ್ದರೆ ಡಿ.ಕೆ.ಶಿ. ಸಿಎಂ

## 2028 ಕ್ಕೆ ಸಿದ್ದರಾಮಯ್ಯ ಸ್ಪರ್ಧೆ ತಪ್ಪಿಲ್ಲ: ಡಿ.ಕೆ.ಸುರೇಶ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.29: ನಮ್ಮ ಸಹೋದರ ಡಿ.ಕೆ.ಶಿವಕುಮಾರ್ ಅವರ ಹಣೆಯಲ್ಲಿ ಬರೆದಿದ್ದರೆ ಸಿಎಂ ಆಗುತ್ತಾರೆ, ಇಲ್ಲದಿದ್ದರೆ ಇಲ್ಲ. ಅದಕ್ಕೆ ಏಕೆ ತಲೆಕೆಡಿಸಿಕೊಳ್ಳಬೇಕು ಎಂದು ಬಮೂಲ್ ಅಧ್ಯಕ್ಷ, ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದ್ದಾರೆ. ಸದಾಶಿವನಗರದ ತಮ್ಮ ನಿವಾಸದಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಬುಧವಾರ ಮಾತನಾಡಿದ ಅವರು, ಸಹೋದರನ ರಾಜಕೀಯ ಭವಿಷ್ಯ ಬದಲಾಗಲಿದೆ ಹಾಗೂ ಅಣ್ಣನನ್ನು ಮುಖ್ಯಮಂತ್ರಿ ಸ್ಥಾನದಲ್ಲಿ ನೋಡುವ ಆಸೆಯಿದೆ ಎನ್ನುವ ಹಿಂದಿನ ಹೇಳಿಕೆ ಬಗ್ಗೆ ಕೇಳಿದಾಗ, ಆಸೆಯಿದೆ ಎಂದು ಹೇಳಿದ್ದೆ. ಅವರ ಹಣೆಯಲ್ಲಿ ಬರೆದಿದ್ದರೆ ಅದು ಆಗುತ್ತದೆ, ಇಲ್ಲದಿದ್ದರೆ ಇಲ್ಲ. ಪಕ್ಷ ಹೇಳಿದಂತೆ ಅವರು ನಡೆದುಕೊಳ್ಳುತ್ತಾರೆ. ಪಕ್ಷದ ಅಧ್ಯಕ್ಷರಾಗಿ, ಡಿಸಿಎಂ ಆಗಿ ಪಕ್ಷದ ಏಳಿಗೆಗೆ, ಘನತೆಗೆ ಚ್ಯುತಿ ಬರದಂತೆ



ಅವರು ನಡೆದುಕೊಳ್ಳುತ್ತಿದ್ದಾರೆ ಎಂದರು.

ಪಕ್ಷನಿಷ್ಠರಾಗಿ ಡಿ.ಕೆ.ಶಿವಕುಮಾರ್ ನಡೆದುಕೊಳ್ಳುತ್ತಿದ್ದಾರೆ. ನವೆಂಬರ್ ಕ್ರಾಂತಿ ವಿಚಾರದ ಬಗ್ಗೆ ಅವರು ಗಮನ ಹರಿಸುತ್ತಿಲ್ಲವಲ್ಲ ಎಂದು ಕೇಳಿದಾಗ, ಪಕ್ಷದ ಅಧ್ಯಕ್ಷರಾಗಿ ಎಲ್ಲರನ್ನೂ ಸಮಾನವಾಗಿ ನೋಡಬೇಕಿರುವುದು ಅವರ ಕರ್ತವ್ಯ ಎಂದು ಹೇಳಿದರು. ನವೆಂಬರ್ 15 ರ ನಂತರ ಏನಾದರೂ ಬದಲಾವಣೆ ಆಗುತ್ತದೆಯೇ ಎಂಬ ಪ್ರಶ್ನೆಗೆ, ನನಗೆ ನವೆಂಬರ್ ಎಂದರೆ ಕನ್ನಡ ರಾಜ್ಯೋತ್ಸವ ನೆನಪಾಗುತ್ತದೆ. ನಾವು, ನೀವೆಲ್ಲರೂ ಸೇರಿ ಈ ಹಬ್ಬವನ್ನು ಆಚರಣೆ ಮಾಡೋಣ. ಮಿಕ್ಕ ವಿಚಾರಗಳ ಬಗ್ಗೆ ನನಗೆ ತಿಳಿದಿಲ್ಲ. ಈ ಪ್ರಶ್ನೆಯನ್ನು ಪಕ್ಷದ ಅಧ್ಯಕ್ಷರು, ಮುಖ್ಯಮಂತ್ರಿಯವರು, ಎಐಸಿಸಿ ನಾಯಕರಿಗೆ ಕೇಳಬೇಕು ಎಂದು ತಿಳಿಸಿದರು.

2028 ಕ್ಕೆ ಸಿದ್ದರಾಮಯ್ಯ ಅವರ ಸ್ಪರ್ಧೆ ತಪ್ಪಿಲ್ಲ:

ರಾಜಕೀಯದಲ್ಲಿ 95–98 ವರ್ಷ ಆದವರೂ ಇದ್ದಾರೆ. ಸಿದ್ದರಾಮಯ್ಯ ಅವರು ಸ್ಪರ್ಧಿಸುತ್ತೇನೆ ಎನ್ನುವುದರಲ್ಲಿ ಯಾವ ತಪ್ಪೂ ಇಲ್ಲ. ಅವರು ನಮ್ಮ ನಾಯಕರು. ಮುಂದಿನ ಚುನಾವಣೆಯನ್ನು ಅವರ ನೇತೃತ್ವದಲ್ಲಿ ಎದುರಿಸುತ್ತೇವೆ. ಒಬ್ಬ ನಾಯಕನಿಗೆ ಇರಬೇಕಾದ ಎಲ್ಲಾ ಅವಕಾಶಗಳು ಅವರಿಗಿದೆ. ಎಲ್ಲರಿಗಿಂತ ಗಟ್ಟಿಯಾಗಿ, ಚೆನ್ನಾಗಿ ಓಡಾಡುತ್ತಿದ್ದಾರೆ. ದಿನನಿತ್ಯ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. ಉತ್ತಮವಾಗಿ ಆಡಳಿತ ನಡೆಯುತ್ತಿದೆ. ಅವರ 2ನೇ ಪುಟನೋಡಿ

# ಮೋದಿ ನಾಟಕಕ್ಕೆ ಮಾರುಹೋಗಬೇಡಿ: ರಾಹುಲ್ ಗಾಂಧಿ




ಮಲ್ಲಮ್ಮ ನುಡಿ ವಾರ್ತೆ

ಮುಜಾಫರ್‌ಪುರ್:ಅ.29: ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರ ಮುಖವನ್ನು ಬಳಸಿಕೊಳ್ಳುವ ಮೂಲಕ ಬಿಜೆಪಿ ಬಿಹಾರದಲ್ಲಿ ಸರ್ಕಾರವನ್ನು 'ರಿಮೋಟ್ ಕಂಟ್ರೋಲ್ ಮೂಲಕ' ನಡೆಸುತ್ತಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಆರೋಪಿಸಿದ್ದಾರೆ.

ಲೋಕಸಭೆಯ ವಿರೋಧಪಕ್ಷದ ನಾಯಕ, ಮುಜಾಫರ್‌ಪುರ ಜಿಲ್ಲೆಯಲ್ಲಿ ತಮ್ಮ ಮೊದಲ ಚುನಾವಣಾ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದರು.

'ಬಿಹಾರದಲ್ಲಿ ಸರ್ಕಾರವನ್ನು ರಿಮೋಟ್ ಕಂಟ್ರೋಲ್ ಮೂಲಕ ನಡೆಸಲಾಗುತ್ತಿದೆ ಎಂಬ ತೇಜಸ್ವಿ ಯಾದವ್ ಅವರ ಹೇಳಿಕೆಗೆ ನಾನು ಸಹಮತ ವ್ಯಕ್ತಪಡಿಸುತ್ತೇನೆ. ಬಿಜೆಪಿಯು ನಿತೀಶ್ ಕುಮಾರ್ ಅವರ ಮುಖವನ್ನು ಬಳಸಿಕೊಳ್ಳುತ್ತಿದೆ. ಕೇಂದ್ರದಲ್ಲಿ ಆಡಳಿತಾರೂಢ ಬಿಜೆಪಿ ಸರ್ಕಾರವು 'ಸಾಮಾಜಿಕ ನ್ಯಾಯಕ್ಕೆ 2ನೇ ಪುಟನೋಡಿ

# ಮಾತಾಡಿದಷ್ಟು ಪಕ್ಷಕ್ಕೆ ಡ್ಯಾಮೇಜ್: ರಾಮಲಿಂಗಾ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ರಾಮನಗರ:ಅ.29: ಸಂಪುಟ ವಿಸ್ತರಣೆ, ಸಿಎಂ ಬದಲಾವಣೆ ವಿಚಾರ ಯಾವುದನ್ನೂ ನಾನು ಮಾತನಾಡಲ್ಲ. ನಾವು ಮಾತನಾಡಿದಷ್ಟು ಪಕ್ಷಕ್ಕೆ ಡ್ಯಾಮೇಜ್ ಆಗುತ್ತದೆ ಎಂದು ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.

ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆಯಲ್ಲಿ ಹಿರಿಯ ಸಚಿವರಿಗೆ ಕೋಕ್ ಕೊಡುವ ವಿಚಾರ ಕುರಿತು ರಾಮನಗರದಲ್ಲಿ ಮಾತನಾಡಿದ ಅವರು, ಯಾರು ಏನು ಮಾತನಾಡಿದ್ದಾರೋ ಗೊತ್ತಿಲ್ಲ. ಎಲ್ಲರಿಗೂ ಸೇರಿ ಹೇಳ್ತೀನಿ, ಮಾತನಾಡಿದಷ್ಟು ಪಕ್ಷಕ್ಕೆ ಹಾನಿ. ಸಾಧ್ಯವಾದಷ್ಟು ಎಲ್ಲರೂ ಸೈಲೆಂಟ್ ಆಗಿ ಇರಿ. ಬಿಜೆಪಿಯಲ್ಲಿರುವಷ್ಟು ಬಣ ನಮ್ಮಲ್ಲಿ ಇಲ್ಲ. ನಮ್ಮಲ್ಲಿ ಏನೇ ಇದ್ದರೂ ನಾಲ್ಕು ಗೋಡೆ ಮಧ್ಯೆ ಚರ್ಚೆ ಮಾಡಬೇಕು. ಮಾಧ್ಯಮಗಳ ಮುಂದೆ ಮಾತನಾಡಿದ್ರೆ 2ನೇ ಪುಟನೋಡಿ

# ಬಿಹಾರ ಚುನಾವಣೆಗೆ ಸಿಎಂ 300 ಕೋಟಿ ರೂ.ಸಂಗ್ರಹ: ರಾಮುಲು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.29: ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಪ್ರಚಾರಕ್ಕೆ ಹಣಕಾಸು ಒದಗಿಸಲು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಸಚಿವರಿಂದ 300 ಕೋಟಿ ರೂ.ಗಳನ್ನು ಸಂಗ್ರಹಿಸಿದ್ದಾರೆ ಎಂದು ಬಿಜೆಪಿ ಹಿರಿಯ ನಾಯಕ ಬಿ. ಶ್ರೀರಾಮುಲು ಗಂಭೀರ ಆರೋಪ ಮಾಡಿದ್ದಾರೆ.

ಬುಧವಾರ ಮಾಧ್ಯಮಗಳಿಗೆ ಹೇಳಿಕೆ ನೀಡಿರುವ ಶ್ರೀರಾಮುಲು, ಈ ಹಣ ಸಿದ್ದರಾಮಯ್ಯ ಕುರ್ಚಿಯನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಹೈಕಮಾಂಡ್‌ಗೆ ಸಂದಾಯವಾಗಿದೆ ಎಂದು ಆರೋಪಿಸಿದ್ದಾರೆ.

ಮುಖ್ಯಮಂತ್ರಿ ತಮ್ಮ ಸಂಪುಟ ಸಹೋದ್ಯೋಗಿಗಳಿಗೆ ಇತ್ತೀಚೆಗೆ ಆಯೋಜಿಸಿದ್ದ ಭೋಜನ ಸಭೆಯಲ್ಲಿ ಈ ಮೊತ್ತವನ್ನು ಸಂಗ್ರಹಿಸಲಾಗಿದೆ ಎಂದು ಶ್ರೀರಾಮುಲು ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುರ್ಚಿ ಬಹುಶಃ ಅಲುಗಾಡುತ್ತಿದೆ. ಅವರು ನವೆಂಬರ್ 15 ರಂದು ದೆಹಲಿಗೆ ಹೋಗಲಿದ್ದಾರೆ. ಅವರು ತಮ್ಮ ಕುರ್ಚಿಯನ್ನು ಉಳಿಸಿಕೊಳ್ಳಲು 2ನೇ ಪುಟನೋಡಿ

# ವಿದ್ಯುತ್ ಸ್ಪರ್ಶದಿಂದ ಕಬ್ಬಿಗೆ ಬೆಂಕಿ - ಅಪಾರ ಹಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29 – ಜಿಲ್ಲೆಯ ಬಾದಾಮಿ ತಾಲ್ಲೂಕಿನ ಬೀರನೂರ ಗ್ರಾಮದ ಜಮೀನುಗಳಲ್ಲಿ ಬೆಳೆದ ಕಟಾವಿಗೆ ಸಿದ್ದವಾಗಿದ್ದ ಕಬ್ಬಿಗೆ ವಿದ್ಯುತ್ ತಂತಿ ತಗುಲಿ ಸುಮಾರು 15 ಎಕರೆಯಲ್ಲಿ ಬೆಳೆದ ಕಬ್ಬು ಸುಟ್ಟಿದೆ. ಬೀರನೂರ ಹಾಗೂ ಖಾನಾಪೂರ ಎಸ್‌ಕೆ ಗ್ರಾಮದ ಯಮನಪ್ಪ ಲೋಕಾಪೂರ, ದೊಡ್ಡಹನಮಂತ ಲೋಕಾಪೂರ, ಬಸವರಾಜ ಬೀರನೂರ, ಸಣ್ಣಹನಮಂತ ಲೋಕಾಪೂರ, ನಿಂಗಪ್ಪ ಅಂಬನ್ನವರ, ಕಲ್ಲಪ್ಪ ತೆಗ್ಗಿನಮನಿ ರೈತರಿಗೆ ಸೇರಿದ ಅಂದಾಜು 15 ಎಕರೆ 2ನೇ ಪುಟನೋಡಿ

# ಜನರ ಸೇವೆಯೇ ನಮ್ಮ ಆದ್ಯ ಕರ್ತವ್ಯ : ನ್ಯಾ. ಬಿ. ವೀರಪ್ಪ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಅ.29: ಸರ್ಕಾರದ ಸೇವೆ ಮತ್ತು ಸೌಲಭ್ಯಗಳು ಜನರಿಗೆ ಸರಿಯಾದ ರೀತಿಯಲ್ಲಿ ದೊರೆಯುತ್ತಿವೆಯೇ ಅಥವಾ ಇಲ್ಲವೋ ಎಂಬುದನ್ನು ಗಮನಿಸಲು ಲೋಕಾಯುಕ್ತ ಸಂಸ್ಥೆಯಿದ್ದು, ಜನರ ಸೇವೆಯೇ ನಮ್ಮ ಆದ್ಯ ಕರ್ತವ್ಯವಾಗಿದೆ ಎಂದು ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಹೇಳಿದರು. ಅವರು ಬುಧವಾರ ಕೊಪ್ಪಳ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಪ್ರವಾಸ ಕಾರ್ಯಕ್ರಮ ನಿಮಿತ್ತ ಕೊಪ್ಪಳ ಜಿಲ್ಲಾ ಆಸ್ಪತ್ರೆ ಹಾಗೂ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಿಢೀರ ಭೇಟಿ ನೀಡಿ ಪರಿಶೀಲನೆ ಕೈಗೊಂಡ ನಂತರ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು. ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿನ ಬೆಡ್‌ಗಳು ತುಂಬಾ ಹಳೆಯದ್ದಾಗಿವೆ. ತಲೆದಿಂಬುಗಳು ಕೂಡ ಸರಿಯಾಗಿಲ್ಲ. ತಕ್ಷಣ ಅವುಗಳನ್ನು ಬದಲಾಯಿಸಬೇಕು. ಔಷಧಿಗಳನ್ನು ಹೊರಗಡೆಯಿಂದ ತರಲು ವೈದರು ಬರೆದುಕೊಡುತ್ತಿದ್ದಾರೆಂದು ಜನರು ಹೇಳುತ್ತಿದ್ದಾರೆ. ಔಷಧಗಳನ್ನು ಹೊರಗಡೆ ಬರೆದುಕೊಡಲು ಸರ್ಕಾರಿ ಆಸ್ಪತ್ರೆಗಳಲ್ಲಿ ಅವಕಾಶವಿಲ್ಲ. ಪ್ರತಿ ದಿನ ಸರ್ಕಾರದಿಂದ ಜಿಲ್ಲಾ ಆಸ್ಪತ್ರೆಗೆ 2ನೇ ಪುಟನೋಡಿ

# ದಲಿತ ಸಿಎಂ ಚರ್ಚೆ ಅನಗತ್ಯ : ಡಿಕೆಶಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಅ.29: ಮುಖ್ಯಮಂತ್ರಿ ಬದಲಾವಣೆ ಅಥವಾ 'ನವೆಂಬರ್ ಕ್ರಾಂತಿ' ಮತ್ತು ದಲಿತ ಸಿಎಂ ವಿಚಾರವಾಗಿ ಸಚಿವರ ಚರ್ಚೆ ಬಗ್ಗೆ ಅನಗತ್ಯ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಬುಧವಾರ ಹೇಳಿದ್ದಾರೆ.

ಪಕ್ಷದ ನಾಯಕರು ಮುಖ್ಯಮಂತ್ರಿ ಬದಲಾವಣೆ ಅಥವಾ ದಲಿತ ಸಿಎಂ ಕುರಿತು ಚರ್ಚಿಸುತ್ತಿರುವ ಬಗ್ಗೆ ವರದಿಗಾರರಿಗೆ ಪ್ರತಿಕ್ರಿಯಿಸಿದ ಡಿಸಿಎಂ, ಅಂತಹ ಯಾವುದೇ ವಿಷಯಗಳ ಬಗ್ಗೆ ಅನಗತ್ಯ ಮಾತನಾಡಿ ಯಾರೂ ದಣಿಯುವುದು ಬೇಡ ಎಂದು ಮನವಿ ಮಾಡುತ್ತೇನೆ ಎಂದರು. ಏತನ್ಮಧ್ಯೆ, ರಾಜ್ಯ ಕಾಂಗ್ರೆಸ್ ಘಟಕದ ಮುಖ್ಯಸ್ಥರೂ ಆಗಿರುವ ಶಿವಕುಮಾರ್, ಶಿಕ್ಷಕರ ಮತ್ತು ಪದವೀಧರರ ಕ್ಷೇತ್ರಗಳಲ್ಲಿ ಮುಂಬರುವ ಎಂಎಲ್‌ಸಿ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಕುರಿತು ಪಕ್ಷದ ನಾಯಕರೊಂದಿಗೆ ಸಭೆ ನಡೆಸಿದರು.

ಪ್ರತಿಕ್ಷೇತ್ರಕ್ಕೂ ನಾಲ್ಕರಿಂದ ಐದು ಜನ ಉಮೇದುವಾರಿಕೆಗೆ ಅರ್ಜಿ ಸಲ್ಲಿಸಿದ್ದಾರೆ. ನಾನು 8–10 ದಿನಗಳಲ್ಲಿ ಹೆಸರುಗಳನ್ನು ಅಂತಿಮಗೊಳಿಸುತ್ತೇನೆ. ಮುಂದಿನ ಸುತ್ತಿನಲ್ಲಿ, ನಾನು ಜಿಲ್ಲಾ ಸಚಿವರು ಮತ್ತು ಶಾಸಕರೊಂದಿಗೆ ಚರ್ಚಿಸಿ ಅವರ ಅಭಿಪ್ರಾಯವನ್ನು ಪಡೆಯುತ್ತೇನೆ ಎಂದು ಅವರು ಹೇಳಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನವೆಂಬರ್ 20 ರಂದು ರಾಜ್ಯಕ್ಕೆ ಭೇಟಿ ನೀಡಿ, ಸುಮಾರು 100 'ಕಾಂಗ್ರೆಸ್ ಭವನ'ಗಳಿಗೆ ಶಂಕುಸ್ಥಾಪನೆ ಮಾಡುವ



ಬಗ್ಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, 'ಇನ್ನೂ ದಿನಾಂಕ ಅಂತಿಮವಾಗಿಲ್ಲ ಎಂದರು. ನಾನು ವಿನಂತಿಸಿದ್ದೇನೆ. ಕಟ್ಟಡಕ್ಕಾಗಿ ಕೆಲವು ಸ್ಥಳಗಳಲ್ಲಿ ಕಾಗದಪತ್ರಗಳು ಸಿದ್ಧವಾಗುತ್ತಿವೆ ಮತ್ತು ಸಿದ್ಧತೆಗಳು ನಡೆಯುತ್ತಿವೆ.

ಎಲ್ಲರಿಗೂ ಟಾರ್ಗೆಟ್ ನೀಡಲಾಗಿದೆ ಎಂದು ಶಿವಕುಮಾರ್ ಹೇಳಿದರು. ಈ ಕಾಂಗ್ರೆಸ್ ಭವನ ನಿರ್ಮಾಣ ವಿಚಾರದಲ್ಲಿ ಸಚಿವರು, ಸಂಸದರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಸೇರಿದಂತೆ ಯಾರ‍್ಯಾರು ಆಸಕ್ತಿ ತೋರಿದ್ದಾರೆ,

ಯಾರು ತೋರಿಲ್ಲ ಎಂದು ವರದಿ ನೀಡುವಂತೆ ಹೈಕಮಾಂಡ್ ನಾಯಕರು ಕೇಳಿದ್ದಾರೆ. ನಾನು ವರದಿ ಸಿದ್ಧಪಡಿಸುತ್ತಿದ್ದು, ಅದನ್ನು ಕಳುಹಿಸಬೇಕು. ಆನಂತರ ಅವರು ದಿನಾಂಕ ನಿಗದಿ ಮಾಡುತ್ತಾರೆ ಎಂದು ವಿವರಿಸಿದರು.

# ಆರೋಗ್ಯಕರ ದೇಹಕ್ಕೆ ವ್ಯಾಯಾಮವೇ ಔಷಧಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ,29: ನಾವು ದಿನ ನಿತ್ಯ ವ್ಯಾಯಾಮ ಮಾಡುವುದರಿಂದ ನಮ್ಮ ದೇಹದಲ್ಲಿ ಯಾವ ರೋಗವು ಸುಳಿಯುವುದಿಲ್ಲ ಎಂದು ಕಲಬುರಗಿ ಜಿಲ್ಲಾ ಕುಷ್ಠರೋಗ ಅಧಿಕಾರಿ ಡಾ. ವಿವೇಕಾನಂದ ರೆಡ್ಡಿ ಅವರು ಹೇಳಿದರು.

ಬುಧವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಜಿಲ್ಲಾ ಆಸ್ಪತ್ರೆ, ಜಿಮ್ಸ್ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಮ್ಸ್ ಮೆಡಿಕಲ್ ಕಾಲೇಜಿನ ಮೈಕ್ರೋ ಬಯೋಲೋಜಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ಪಾರ್ಶ್ವವಾಯು ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ನಾವು ಆರೋಗ್ಯವಾಗಿ ಇರಬೇಕಾದರೆ ದಿನಾಲು ವ್ಯಾಯಾಮ ಮಾಡುವುದನ್ನು ರೂಢಿಸಿಕೊಳ್ಳಬೇಕು. ಮಧ್ಯಪಾನ ಧೂಮಪಾನದಿಂದ ದೂರವಿರಬೇಕು. ಒಳ್ಳೆಯ ಆಹಾರ ಸೇವನೆ ಮಾಡಬೇಕು. ನಮ್ಮ ದೇಹದ ಅಂಗಾಂಗಳು ಚಲಿಸದೆ ಇದ್ದಾಗ ನಮ್ಮ ಮೆದುಳಿನ ಭಾಗಕ್ಕೆ ಸರಿಯಾಗಿ ರಕ್ತ ಸಂಚಾರ ಆಗದೆ ಇದ್ದಾಗ ಸ್ಟ್ರೋಕ್ ಹೊಡೆಯುತ್ತದೆ ಎಂದರು. ಈ ರೋಗ ಅತಿ ಹೆಚ್ಚು ಬಿಪಿ 2ನೇ ಪುಟನೋಡಿ

# ಮೂರು ತಿಂಗಳು ಮೊದಲೇ ಯೋಜನೆ ರೂಪಿಸಿ: ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 29 : ಯಾವುದೇ ಕೃಷಿ ಉತ್ಪನ್ನ ಮಾರುಕಟ್ಟೆಗೆ ಆವಕವಾಗುವ ಮೂರು ತಿಂಗಳು ಮುಂಚಿತವಾಗಿ ಮಾರುಕಟ್ಟೆ ಕಲ್ಪಿಸಲು ಯೋಜನೆ ರೂಪಿಸಬೇಕು ಎಂದು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮೆಕ್ಕೆಜೋಳ ಮತ್ತು ಈರುಳ್ಳಿ ಬೆಲೆ ಕುಸಿತದ ಹಿನ್ನೆಲೆಯಲ್ಲಿ ಕೃಷಿ ಮಾರುಕಟ್ಟೆ ಇಲಾಖೆ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿದ ಸಚಿವರು, ಹಿಂದೆ ಕೊಬ್ಬರಿ ಬೆಲೆ ಕುಸಿತದ ಸಂದರ್ಭದಲ್ಲಿ ತಕ್ಷಣ ಕನಿಷ್ಠ ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ಆರಂಭಿಸಿದ ಪರಿಣಾಮ ಮಾರುಕಟ್ಟೆಯಲ್ಲಿ ಕೊಬ್ಬರಿ ಬೆಲೆ ಕುಸಿತ ನಿಯಂತ್ರಿಸಲು ಸಾಧ್ಯವಾಯಿತು. ಕೇಂದ್ರ ಸರ್ಕಾರ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿ ಮಾಡಿ ಎಂದು ಸಭೆಯಲ್ಲಿ ಭಾಗವಹಿಸಿದ್ದ ಕೆಎಂಎಫ್ ನ ವ್ಯವಸ್ಥಾಪಕ ನಿರ್ದೇಶಕರಾದ ಶಿವಸ್ವಾಮಿ ಅವರಿಗೆ ಮನವಿ ಮಾಡಿದರು. ನಾಫೆಡ್ ಅಧಿಕಾರಿಗಳಿಗೂ ಕೂಡ ಕಳೆದ ವರ್ಷದಂತೆ ಖರೀದಿಗೆ ಅನುಮತಿ ಪಡೆಯಲು ಪ್ರಯತ್ನಿಸಿ ಎಂದು ಸೂಚನೆ ನೀಡಿದರು. ಈರುಳ್ಳಿ ಬೆಳೆಗಾರರನ್ನು ಬೆಲೆ ಕುಸಿತದಿಂದ ಪಾರು ಮಾಡಲು ಪಿಡಿಪಿಎಸ್ ಅಡಿಯಲ್ಲಿ ಖರೀದಿ ಮಾಡುವುದೇ ಈಗ ಇರುವ ಏಕೈಕ ಪರಿಹಾರ ಮಾರ್ಗವಾಗಿದ್ದು, ಕೇಂದ್ರದ ಅನುಮತಿ ಪಡೆಯಬೇಕು ಎಂದು ಹೇಳಿದರು. ಸಭೆಯಲ್ಲಿ ಸಹಕಾರ ಇಲಾಖೆಯ ಕಾರ್ಯದರ್ಶಿಗಳಾದ ಎಸ್.ಬಿ.ಶೆಟ್ಟೆಣ್ಣವರ್, ಕೃಷಿ ಮಾರುಕಟ್ಟೆ ಇಲಾಖೆ ನಿರ್ದೇಶಕರಾದ ಶಿವಾನಂದ ಕಾಪಸೆ ಹಾಗೂ ತೋಟಗಾರಿಕೆ, ಕೃಷಿ ಇಲಾಖೆ, ನಾಫೆಡ್, ಮಾರ್ಕೆಟಿಂಗ್ ಫೆಡರೇಷನ್ ಅಧಿಕಾರಿಗಳು ಭಾಗವಹಿಸಿದ್ದರು.

# 'ಮೊಂಥಾ' ಚಂಡಮಾರುತದ ಪ್ರಭಾವ ಬೀದರ್ ಜಿಲ್ಲೆಯಲ್ಲಿ ಧಾರಾಕಾರ ಮಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್.ಅ.29: ಬಂಗಾಳಕೊಲ್ಲಿಯಲ್ಲಿ ಸೃಷ್ಟಿಯಾಗಿರುವ 'ಮೊಂಥಾ' ಚಂಡಮಾರುತದ ಪ್ರಭಾವದಿಂದ ಬೀದರ್ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿಯಿಂದ ಧಾರಾಕಾರ ಮಳೆ ಸುರಿಯುತ್ತಿದೆ. ಮೊಂಥಾ' ಚಂಡಮಾರುತವು ಆಂಧ್ರ ಪ್ರದೇಶ ಮತ್ತು ಒಡಿಶಾ ರಾಜ್ಯಗಳ ಮೇಲೆ ಹೆಚ್ಚು ಪರಿಣಾಮ ಬಿರುತ್ತಿದೆ. ಬೀದರ್ ಜಿಲ್ಲೆಯು ತೆಲಂಗಾಣ ರಾಜ್ಯದ ಗಡಿ ಜಿಲ್ಲೆಯಾಗಿದ್ದು, ಚಂಡಮಾರುತ ಜಿಲ್ಲೆಯಲ್ಲೂ ಹವಾಮಾನ ಬದಲಾವಣೆಗೆ ಕಾರಣವಾಗಿದೆ. ಮಂಗಳವಾರ ಇಡೀ ದಿನ ಮೋಡ ಕವಿದ 2ನೇ ಪುಟನೋಡಿ

**ಸೂರ್ಯಕುಮಾರ್ ಯಾದವ್: ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿಯ ಮೊದಲ ಪಂದ್ಯದಲ್ಲಿ ಅಂತಾರಾಷ್ಟ್ರೀಯ ಟಿ20 ಕ್ರಿಕೆಟ್‌ನಲ್ಲಿ 150 ಸಿಕ್ಸರ್ ಸಿಡಿಸಿದ ಸಾಧನೆ**

# ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ

## ಸ್ವೀಪ್ ಚಟುವಟಿಕೆ ಮೂಲಕ ಜನರಲ್ಲಿ ಅರಿವು ಮೂಡಿಸಿ : ವಸ್ತ್ರದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ವಿಶೇಷ ಮತದಾರ ಪಟ್ಟಿ ಪರಿಷ್ಕರಣೆ ಕುರಿತು ಎಲ್ಲ ಹಂತದಲ್ಲಿ ಜನಸಾಮಾನ್ಯರಿಗೆ ಮಾಹಿತಿ ತಿಳಿಸುವ ನಿಟ್ಟಿನಲ್ಲಿ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು ಎಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಿದ್ದತೆ, ಸ್ವೀಪ್ ಹಾಗೂ ಇ.ಎಲ್.ಸಿ ಚಟುವಟಿಕೆಗಳ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಬ್ಯಾನರ್, ಕರಪತ್ರ, ಗೋಡೆ ಬರಹ ಸೇರಿದಂತೆ ವಿವಿಧ ಚಟುವಟಿಗಳ ಮೂಲಕ ಜನರಿಗೆ ಮಾಹಿತಿ ತಲುಪಿಸುವ ನಿಟ್ಟಿನಲ್ಲಿ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿದರು. ಚುನಾವಣೆ ಸಂದರ್ಭದಲ್ಲಿ ವಿಶೇಷ ಮತದಾರ ಪಟ್ಟಿ ಪರಿಷ್ಕರಣೆ, ಸ್ವೀಪ್ ಚಟುವಟಿಕೆ ಬಹುಮುಖ್ಯವಾಗಿದೆ. ದೋಷರಹಿತ ಹಾಗೂ ಪರಿಶುದ್ದವಾದ ಮತದಾರರ ಪಟ್ಟಿ ಪಡೆಯಲು ಪರಿಷ್ಕರಣೆ ಅನಿವಾರ್ಯವಾಗಿದೆ. ಈ ಪರಿಷ್ಕರಣೆ ಕಾರ್ಯದಲ್ಲಿ ಎಲ್ಲ ಹಂತದಲ್ಲಿಯೂ ಜನ ಸಾಮಾನ್ಯರಿಗೆ ಮಾಹಿತಿ ತಲುಪಿಸಲು ಸೂಕ್ತ ಕ್ರಮವಹಿಸಬೇಕು. ಪ್ರತಿಯೊಬ್ಬ ಅರ್ಹ ನಾಗರಿಕನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವುದನ್ನು ಖಚಿತಪಡಿಸಿಕೊಳ್ಳಲು ಜಾಗೃತಿ ಅಗತ್ಯವಾಗಿದೆ ಎಂದು ವಸ್ತ್ರದ ತಿಳಿಸಿದರು.

ಜಿಲ್ಲಾ ಪಂಚಾಯತ ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷ ಶಶಿಧರ ಕುರೇರ ಮಾತನಾಡಿ, ಸ್ವೀಪ್ ಮತ್ತು ಎಲೆಕ್ಟೋರಲ್ ಲೀಟರಸಿ ಕ್ಲಬ್‌ಗಳ ಅಡಿಯಲ್ಲಿ ಶಾಲಾ–ಕಾಲೇಜುಗಳಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದ ಬಗ್ಗೆ ಸಮಗ್ರ ಮಾಹಿತಿಯನ್ನು ಸಭೆಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಆಯೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ.ಎನ್, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಎಸ್.ಎಂ.ಕಾಂಬಳೆ, ಸಹಾಯಕ ಯೋಜನಾ ನಿರ್ದೇಶಕ ಭೀಮಪ್ಪ ತಳವಾರ ಸೇರಿದಂತೆ ಆಯಾ ತಾಲೂಕಿನ ತಹಶೀಲ್ದಾರರು ಉಪಸ್ಥಿತರಿದ್ದರು.

### ಪಟೇಲ್ ಜಯಂತಿ ಅಂಗವಾಗಿ ಪ್ರಬಂಧ ಸ್ಪರ್ಧೆ:

## 'ಕಲ್ಯಾಣ ಕರ್ನಾಟಕ ವಿಮೋಚನೆಯ ಧೀಮಂತ ನಾಯಕ ಸರ್ದಾರ್ ಪಟೇಲ್' – ಎಸ್.ಪಿ. ಪುಟ್ಟ ಮಾದಯ್ಯ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ರಾಯಚೂರು ಭಾರತ ರತ್ನ, ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ರವರ 150ನೇ ಜಯಂತಿ ಅಂಗವಾಗಿ ಪ್ರಬಂಧ ಸ್ಪರ್ಧೆ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆ, ಪಶ್ಚಿಮ ಪೊಲೀಸ್ ಠಾಣೆ ಹಾಗೂ ತಾರನಾಥ ಶಿಕ್ಷಣ ಸಂಸ್ಥೆ ಸಂಚಾಲಿತ ಚನ್ನಬಸಮ್ಮ ಎಂ. ನಾಗಪ್ಪ ಬಾಲಕಿಯರ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ಸಂಯುಕ್ತಾಶ್ರಯದಲ್ಲಿ ಬುಧವಾರ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟ ಮಾದಯ್ಯ, ಐಪಿಎಸ್ ಸಸಿಗೆ ನೀರುಣಿಸುವುದರ ಮೂಲಕ ಉದ್ಘಾಟಿಸಿದರು. ನಂತರ ಸರ್ದಾರ್ ಪಟೇಲ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಪೊಲೀಸ್ ಉಪಾಧೀಕ್ಷಕ ಶಾಂತವೀರ ಕೆ.ಎಸ್.ಪಿ.ಎಸ್., ವೃತ್ತ ನಿರೀಕ್ಷಕ ನಾಗರಾಜ ಮೇಕಾರ ಹಾಗೂ ಪಿ.ಎಸ್.ಐ. ಮಂಜುನಾಥ ಐಡಿರ ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಚಾರ್ಯ ವೆಂಕಟೇಶ ದೊಡ್ಡಮನಿ ರವರು ಮಾತನಾಡಿ, "ದೇಶದ ಏಕೀಕರಣದ ನಾಯಕ ಸರ್ದಾರ್ ಪಟೇಲ್ ರವರ ಜಯಂತಿಯನ್ನು ಪೊಲೀಸ್ ಇಲಾಖೆಯ ಆಶ್ರಯದಲ್ಲಿ ವಿದ್ಯಾರ್ಥಿನಿಯರೊಂದಿಗೆ ಆಚರಿಸುವುದು ಗೌರವದ ಸಂಗತಿ" ಎಂದರು.

ಉದ್ಘಾಟಕರಾದ ಎಸ್.ಪಿ. ಪುಟ್ಟ ಮಾದಯ್ಯ, ಐಪಿಎಸ್ ರವರು ಮಾತನಾಡಿ, "ಉಕ್ಕಿನ ಮನುಷ್ಯ ಸರ್ದಾರ್ ಪಟೇಲ್ ರವರು ದೇಶದ ಏಕತೆಯ ಚಿಹ್ನೆ. 1875 ಅಕ್ಟೋಬರ್ 31ರಂದು ಗುಜರಾತಿನ ನಾಡಿಯಾಡ್‌ನಲ್ಲಿ ಜನಿಸಿದ ಅವರು, ದೇಶದ ಮೊದಲ ಗೃಹ ಸಚಿವರಾಗಿದ್ದರು. 562 ಸಂಸ್ಥಾನಗಳನ್ನು ಭಾರತದಲ್ಲಿ ವಿಲೀನಗೊಳಿಸಿ ಏಕೀಕರಣದ ಹೊಸ ಅಧ್ಯಾಯ ಬರೆದವರು. 1948ರಲ್ಲಿ ಅಪರೇಷನ್ ಪೋಲೋ ಮೂಲಕ ಹೈದರಾಬಾದ್ ಸಂಸ್ಥಾನವನ್ನು ವಿಲೀನಗೊಳಿಸಿ, ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ನಿಜಾಮರ ಆಡಳಿತದಿಂದ ವಿಮೋಚನೆ ನೀಡಿದರು," ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಉಪನ್ಯಾಸಕ ಗೋವಿಂದರಾಜ್ ರವರು ವಿದ್ಯಾರ್ಥಿನಿಯರಿಗೆ ರಾಷ್ಟ್ರೀಯ ಏಕತಾ ಪ್ರತಿಜ್ಞೆ ಬೋಧಿಸಿದರು.

ಪ್ರಬಂಧ ಸ್ಪರ್ಧೆ ಫಲಿತಾಂಶ: "ಸರ್ದಾರ್ ವಲ್ಲಭಭಾಯಿ ಪಟೇಲ್ ರವರ ಜೀವನ ಮತ್ತು ಕಲ್ಯಾಣ ಕರ್ನಾಟಕ ಏಕೀಕರಣದಲ್ಲಿ ಅವರ ಪಾತ್ರ" ಎಂಬ ವಿಷಯದ ಮೇಲೆ ನಡೆದ ಪ್ರಬಂಧ ಸ್ಪರ್ಧೆಯಲ್ಲಿ,

ಪ್ರಥಮ ಬಹುಮಾನವನ್ನು ಕು. ಅರ್ಚನಾ ಹನುಮಂತ (ಬಂಗಾರದ ಪದಕ, ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ),

ದ್ವಿತೀಯ ಬಹುಮಾನವನ್ನು ಕು. ಅಶ್ವಿನಿ ಉರುಕುಂದ ಬೆಳ್ಳಿ ಪದಕ, ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ),

ತೃತೀಯ ಬಹುಮಾನವನ್ನು ಕು. ಲಕ್ಷ್ಮೀ ಕೊರವಯ್ಯ (ಕಂಚಿನ ಪದಕ, ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ) ಪಡೆದರು.

ಇದಲ್ಲದೆ ಪ್ರವಳಿಕಾ, ಊರ್ಮಿಳಾ, ರೇಣುಕಾ, ತೇಜಸ್ವಿನಿ, ಮಧುಶ್ರೀ, ಕೀರ್ತಿ, ಅಂಬಿಕಾ, ಯಲ್ಲಮ್ಮ, ಹಬೀಬಾ, ಪಾರ್ವತಿ, ನಾಗರತ್ನ, ಹಿಮಬಿಂದು ಸೇರಿದಂತೆ ಹಲವು ವಿದ್ಯಾರ್ಥಿನಿಯರಿಗೆ ಸಮಾಧಾನ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದ ನಿರೂಪಣೆಯನ್ನು ಉಪನ್ಯಾಸಕಿ ಶಿವಲೀಲಾ ಮೇಡಂ ನಿರ್ವಹಿಸಿದರು. ಮಂಜುಳಾ ಮೇಡಂ ಪ್ರಾರ್ಥನೆ ಸಲ್ಲಿಸಿದರು, ಸಲ್ಮಾ ಭಾನು ಮೇಡಂ ಸ್ವಾಗತಿಸಿದರು ಮತ್ತು ಗೋವಿಂದರಾಜ್ ವಂದನೆ ಸಲ್ಲಿಸಿದರು. ಕಾಲೇಜಿನ ಉಪನ್ಯಾಸಕರಾದ ರೇಣುಕಾ, ಅನ್ನಪೂರ್ಣ, ರಾಘಮ್ಮ, ಮಹೇಶ್, ಇಮ್ರಾನ್ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಚಿಟಗುಪ್ಪ:– ಕಲ್ಬುರ್ಗಿ ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹೇಶ ಮೇಘಣ್ಣನವರಿಗೆ ಸಮಾಜ ಕಾರ್ಯಕರ್ತರು ಹಾಗೂ ಪರಿಸರವಾದಿ ಮಹಮ್ಮದ್ ಅಸ್ಲಾಂಮಿಯಾ ಅವರು ಬುಧವಾರ ಕಲ್ಬುರ್ಗಿ ಜಿಲ್ಲೆಯ ಡಿವೈಎಸ್ಪಿ ಕಚೇರಿಯಲ್ಲಿ ಶಾಲು ಹೊದಿಸಿ ಸಸಿ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಡಿವೈಎಸ್ಪಿ ಬಸವೇಶ್ವರ ಹೀರಾ, ಓಂಕಾರ, ಜಗದೀಶ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಪಟೇಲ್ ರಾಷ್ಟ್ರದ ಐಕ್ಯತೆ,ಅಖಂಡತೆ ದುಡಿದ ಧೀಮಂತ : ಸಿಪಿಐ ಅಲಿಸಾಬ್.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಅ 29 ರಾಷ್ಟ್ರದ ಸ್ವಾತಂತ್ರ್ಯೋತ್ಸವದ ಜೊತೆಗೆ ಐಕ್ಯತೆ, ಅಖಂಡತೆ, ಸಮಗ್ರತೆಗಾಗಿ ಶ್ರಮಿಸಿದ ಧೀಮಂತ ಸರ್ದಾರ್ ವಲ್ಲಭಭಾಯ್ ಪಟೇಲರು ಎಂದು ಸಿಪಿಐ ಅಲಿಸಾಬ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನ್ಮದಿನ ಪ್ರಯುಕ್ತ 'ರಾಷ್ಟ್ರೀಯ ಏಕತಾ ದಿನಾಚರಣೆ' ವಿಷಯದ ಪ್ರಬಂಧ ಸ್ಪರ್ಧೆ ಮತ್ತು ಬಹುಮಾನ ವಿತರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಹರಿದು ಹಂಚಿ ಹೋದ ಇಡೀ ದೇಶದ ಏಕತೆಗಾಗಿ ಪಟೇಲ್ ಶ್ರಮಿಸಿದ್ದರು ಎಂದರು. ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರ ಜೀವನ ಮತ್ತು ಮೌಲ್ಯಗಳನ್ನು ಅರಿವ ಅಗತ್ಯವಿದೆ. ನಮ್ಮ ದೇಶ, ನಮ್ಮ ದೇಶದ ಸಂಸ್ಕೃತಿಕ ಏಕತೆಗಾಗಿ ದುಡಿವ ಅಗತ್ಯವಿದೆ. ಅಪರಾಧ ರಹಿತ ಸಮಾಜ ನಿರ್ಮಾಣಕ್ಕೆ ಯುವಜನತೆ ಮುಂದಾಗಬೇಕು ಎಂದರು.

ಕನ್ನಡ ಈ ನಾಡಿನ ಭಾಷೆ. ಬಸವಾದಿ ಶರಣರು, ತತ್ವಪದಕಾರರು ಸೇರಿ ಹಲವರು ಕನ್ನಡ ಜಗತ್ತು ಕಟ್ಟಿದ್ದಾರೆ. ನಮ್ಮ ಮೊದಲ

ಸಂಸ್ಥೆಯ ಆಡಳಿತಾಧಿಕಾರಿ ಡಾ. ಮಲ್ಲಿಕಾರ್ಜುನ ಲಕಶೆಟ್ಟೆ ಮಾತನಾಡಿ, ಫ್ರೆಂಚ್ , ಡಚ್, ಬ್ರಿಟಿಷ್ ಅಧಿಕಾರದಲ್ಲಿ ಹಲವು ಪ್ರಾಂತ್ಯಗಳಲ್ಲಿ ಹರಿದು ಹಂಚಿದ ಭಾರತವನ್ನು ಒಗ್ಗೂಡಿಸುವ ಮೂಲಕ ದೇಶಕ್ಕೆ ಐಕ್ಯತೆ ತಂದು ಕೊಟ್ಟವರು ಸರ್ದಾರ್ ಪಟೇಲರು. ಅದಕ್ಕಾಗಿಯೇ ಅವರ ಜನ್ಮದಿನ ರಾಷ್ಟ್ರೀಯ ಏಕತಾ ದಿವಸವಾಗಿ ಆಚರಿಸಲಾಗುತ್ತದೆ ಎಂದರು. ಶ್ರೀ ಬಸವೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಭಾಷಿಕ, ಪ್ರಾದೇಶಿಕ, ಸಾಂಸ್ಕೃತಿಕ ವೈವಿಧ್ಯ ಹೊಂದಿರುವ ಭಾರತ ತನ್ನ ಬಹುತ್ವ ಮತ್ತು ತಾತ್ವಿಕ ಬಹುಧಾರೆಗಳ ಮೂಲಕ ಬಹು ಸಾಂಸ್ಕೃತಿಕ ಪರಿಪರೆ ಉಳಿಸಿಕೊಂಡಿದೆ. ಪಟೇಲ್ ಅವರ ರಾಷ್ಟ್ರೀಯತೆ ಬಹುತ್ವದ ಐಕ್ಯತೆಯ ಪ್ರತಿಪಾದನೆಯಲ್ಲಿದೆ ಎಂದರು .

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿಗಳಾದ ವಿವೇಕಾನಂದ ಹೊದಲೂರೆ, , ಶ್ರೀ ಬಸವೇಶ್ವರ ಪಿಜಿ ಕಾಲೇಜು ಪ್ರಾಚಾರ್ಯೆ ಡಾ. ಶಾಂತಲಾ ಪಾಟೀಲ,

ಶ್ರೀ ಬಸವೇಶ್ವರ ಪಿಯು ಕಾಲೇಜು ಪ್ರಾಚಾರ್ಯ ಡಾ ರುದ್ರಮಣಿ ಮಠಪತಿ, ಅಕ್ಕಮಹಾದೇವಿ ಮಹಿಳಾ ಕಾಲೇಜು ಪ್ರಾಚಾರ್ಯೆ ಡಾ ಮಾಯಾ ಮುರಾಳೆ ಡಾ. ಬಸವರಾಜ ಖಂಡಾಳೆ, ವಿವೇಕಾನಂದ ಶಿಂದೆ, ಅಶೋಕರೆಡ್ಡಿ, ಗುರುದೇವಿ ಕಿಚಡೆ, ಶೀತಲ್ ರೆಡ್ಡಿ, ನಾಗರಾಜ ನಾಸೆ, ಕೃಷ್ಣಗೌಳಿ, ಮೊದಲಾದವರಿದ್ದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಏಕತಾ ದಿನಾಚರಣೆ ಕುರಿತು ಪ್ರಬಂಧ ಸ್ಪರ್ಧೆಯಲ್ಲಿ ಕನ್ನಡ, ಇಂಗ್ಲಿಷ್, ಹಿಂದಿ ಮತ್ತು ಉರ್ದು ಭಾಷೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಸಿಪಿಐ ಅಲಿಸಾಬ್ ಅವರು ಪ್ರಥಮ 500, ದ್ವಿತೀಯ 200 ರುಪಾಯಿಗಳು ಮತ್ತು ಶ್ರೀ ಬಸವೇಶ್ವರ ಪದವಿ ಕಾಲೇಜು ವತಿಯಿಂದ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪುಸ್ತಕ ರೂಪದಲ್ಲಿ ಬಹುಮಾನ ನೀಡಲಾಯಿತು.

ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್, ಸ್ವಾಮಿ ವಿವೇಕಾನಂದ, ರವೀಂದ್ರನಾಥ ಠಾಗೋರ್ ಅವರ ಭಾವಚಿತ್ರಗಳನ್ನು ಬಿಎಸ್ಸಿ ಮತ್ತು ಬಿಸಿಎ ವಿದ್ಯಾರ್ಥಿಗಳು ಕಾಲೇಜಿಗೆ ಕೊಡುಗೆಯಾಗಿ ನೀಡಿದರು.

ಐಕ್ಯುಎಸಿ ಸಂಯೋಜಕ ಪವನ್ ಪಾಟೀಲ ಸ್ವಾಗತಿಸಿದರು.

ಗಂಗಾಧರ ಸಾಲಿಮಠ ನಿರೂಪಿಸಿದರು.

### ನ.8ಕ್ಕೆ ಭಕ್ತ ಶ್ರೇಷ್ಠ ಕನಕದಾಸರ ಜಯಂತಿ ಅರ್ಥಪೂರ್ಣ ಆಚರಣೆ:

## ಸಕಲ ಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.29–ಸಂತ ಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮ ನವೆಂಬರ್ 8 ರಂದು ಕಲಬುರಗಿ ಜಿಲ್ಲೆಯಾದ್ಯಂತ ಸಂಭ್ರಮದಿಂದ ಆಚರಣೆಗೆ ನಿರ್ಧರಿಸಲಾಗಿದ್ದು, ಸಕಲ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೂಚಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 3 ಗಂಟೆಗೆ ಕಲಬುರಗಿ ನಗರದ ಡಾ.ಎಸ್. ಎಂ.ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾ ಮಟ್ಟದ ಜಯಂತಿ ಕಾರ್ಯಕ್ರಮ ಆಚರಿಸಲಾಗುತ್ತದೆ ಎಂದರು.

ಜಯಂತಿಗೆ ಶಿಷ್ಟಾಚಾರದಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಚುನಾಯಿತ ಜನಪ್ರತಿನಿಧಿಗಳನ್ನು ಆಹ್ವಾನಿಸಲು, ಕನಕದಾಸರ ಜೀವನದ ಕುರಿತು ಬೆಳಕು ಚೆಲ್ಲುವ ಓರ್ವ ತಜ್ಞ ಉಪನ್ಯಾಸಕರಿಂದ ಉಪನ್ಯಾಸ ಆಯೋಜಿಸಲು ಸಹ ಸಭೆ ಒಪ್ಪಿಗೆ ಸೂಚಿಸಿತ್ತು.

ಜಿಲ್ಲಾಡಳಿತದಿಂದ ಆಯೋಜನೆಯ ಕಾರ್ಯಕ್ರಮ ಅರ್ಥಪೂರ್ಣ ಆಚರಿಸಬೇಕಿರುವ ಹಿನ್ನೆಲೆಯಲ್ಲಿ ಅಂದು ರಂಗಮಂದಿರ ಆವರಣ ಸ್ವಚ್ಛತೆ ಕಾಪಾಡಬೇಕು. ಕುಡಿಯುವ ನಿರಿನ ವ್ಯವಸ್ಥೆ ಮಾಡಬೇಕು. ವಿದ್ಯುತ್ ಕಡಿತವಾಗದಂತೆ ನೋಡಿಕೊಳ್ಳಬೇಕು. ಕಾಲೇಜು ಮಕ್ಕಳು ಮತ್ತು ಚುನಾಯಿತ ಪ್ರತಿನಿಧಿಗಳು ಅಗಮಿಸುವುದರಿಂದ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಎ.ಡಿ.ಸಿ ಸೂಚಿಸಿದರು.

ಇನ್ನು ತಾಲೂಕಾ ಮಟ್ಟದಲ್ಲಿಯೂ ಅರ್ಥಪೂರ್ಣವಾಗಿ ಕನಕದಾಸರ ಜಯಂತಿ ಆಚರಣೆಗೆ ತಾಲೂಕಿನ ತಹಶೀಲ್ದಾರರು ಪೂರ್ವಭಾವಿ ಸಭೆ ಕರೆದು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದ ಅವರು, ಎಲ್ಲಾ ಸರ್ಕಾರಿ, ಶಾಲಾ–ಕಾಲೇಜುಗಳಲ್ಲಿ ಕನಕದಾಸರ ಭಾವಚಿತ್ರವಿಟ್ಟು ಪೂಜೆ ಸಲ್ಲಿಸಬೇಕೆಂದರು. ಈ ಬಗ್ಗೆ ಸುತ್ತೋಲೆ ಹೊರಡಿಸುವಂತೆ ಸೂಚಿಸಿದರು.

ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಗುರುನಾಥ ಪೂಜಾರಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವು ಸಂಭ್ರಮದಿಂದ ಕನಕದಾಸರ ಜಯಂತಿ ಆಚರಿಸಬೇಕು. ಮೆರವಣಿಗೆ ಮತ್ತು ವೇದಿಕೆ ಕಾರ್ಯಕ್ರಮದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಕಾಲೇಜು ಮಕ್ಕಳನ್ನು, ಜಿಲ್ಲಾ ಮಟ್ಟದ ಅಧಿಕಾರಿಗಳು ಸಹ ಕಾರ್ಯಕ್ರಮಲ್ಲಿ ಭಾಗಿಯಾಗುವಂತೆ ನಿರ್ದೇಶನ ನೀಡಬೇಕು. ಮೆರವಣಿಗೆಗೆ ಎರಡು ಡೊಳ್ಳು ಕಲಾ ತಂಡ ನಿಯೋಜಿಸಬೇಕು ಎಂದರು. ಸಭೆಯಲ್ಲಿ ಭಾಗವಹಿಸಿದ ಸಮುದಾಯದ ಮುಖಂಡರು ಕನಕದಾಸರರ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಚರಣೆಗೆ ಅನೇಕ ಸಲಹೆ ನೀಡಿದರು.

ಸಭೆಯಲ್ಲಿ ಶಿಷ್ಠಾಚಾರ ತಹಶೀಲ್ದಾರ ಉಮಾಕಂತ ಹಲ್ಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಅ. ನಾಶಿ, ಕರ್ನಾಟಕ ಪ್ರದೇಶ ಕುರುಬರ ಸಂಘದ ಉಪಾಧ್ಯಕ್ಷ ನಾಗೇಂದ್ರ ಪೂಜಾರಿ, ಜಿಲ್ಲಾ ಘಟಕದ ನಿರ್ದೇಶಕರಾದ ಕುಪೇಂದ್ರ ಬರಗಾಲಿ, ಶಿವಲಿಂಗಪ್ಪ ಸಾವಳಗಿ, ಜಗನ್ನಾಥ ನಾಗೂರ, ನಿರ್ಮಲಾ ಬರಗಾಲಿ ಸೇರಿದಂತೆ ಸಮಾಜದ ಅನೇಕ ಮುಖಂಡರು ಭಾಗವಹಿಸಿದ್ದರು.

## ವೀರಮಾತೆ ಒನಕ್ಕೆ ಓಬವ್ವ ಜಯಂತಿ ಸಂಭ್ರಮದಿಂದ ಅಚರಣೆಗೆ ನಿರ್ಧಾರ



ಕಲಬುರಗಿ,ಅ.29– ವೀರ ಮಹಿಳೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ನವೆಂಬರ್ 11 ರಂದು ಜಿಲ್ಲೆಯಾದ್ಯಂತ ಸಂಭ್ರಮದಿಂದ ಆಚರಿಸಲು ಶಿಷ್ಟಾಚಾರ ತಹಶೀಲ್ದಾರರ ಉಮಾಕಾಂತ ಹಲ್ಲೆ ಅವರ ನೇತೃತ್ವದಲ್ಲಿ ಬುಧವಾರ ನಡೆದ ಸಭೆಯಲ್ಲಿ ಸರ್ವಾನುಮತದಿಂದ ನಿರ್ಧಾರ ತೆಗೆದುಕೊಳ್ಳಲಾಯಿತು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ ಉಮಾಕಾಂತ ಅವರು ಮಾತನಾಡಿ, ನ.11 ರಂದು ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ನಗರದ ಡಾ.ಎಸ್. ಎಂ.ಪಂಡಿತ್ ರಂಗಮಂದಿರದಲ್ಲಿ ಜಿಲ್ಲಾ ಮಟ್ಟದ ಜಯಂತಿ ಕಾರ್ಯಕ್ರಮ ಆಚರಿಸಲಾಗುತ್ತಿದ್ದು, ಶಿಷ್ಟಾಚಾರದಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಚುನಾಯಿತ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುತ್ತದೆ. ವೀರ ಮಹಿಳೆ ಜೀವನ ಚರಿತ್ರೆ ವಿವರಿಸಲು ಓರ್ವ ತಜ್ಞ ಉಪನ್ಯಾಸಕರ ಹೆಸರನ್ನು ಸಮಾಜ ಬಾಂಧವರು ನೀಡಬೇಕು ಎಂದರು.

ಜಿಲ್ಲಾಡಳಿತದಿಂದ ಆಯೋಜನೆಯ ಕಾರ್ಯಕ್ರಮ ಅರ್ಥಪೂರ್ಣ ಅಚರಿಸಬೇಕಿರುವ ಹಿನ್ನೆಲೆಯಲ್ಲಿ ಅಂದು ರಂಗಮಂದಿರ ಆವರಣ ಸ್ವಚ್ಛತೆ ಕಾಪಾಡಬೇಕು. ಕುಡಿಯುವ ನಿರಿನ ವ್ಯವಸ್ಥೆ ಮಾಡಬೇಕು. ವಿದ್ಯುತ್ ಕಡಿತವಾಗದಂತೆ ನೋಡಿಕೊಳ್ಳಬೇಕು. ಕಾಲೇಜು ಮಕ್ಕಳು ಮತ್ತು ಚುನಾಯಿತ ಪ್ರತಿನಿಧಿಗಳು ಅಗಮಿಸುವುದರಿಂದ ಸೂಕ್ತ ಪೊಲೀಸ್ ಭದ್ರತೆ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ತಾಲೂಕಾ ಮಟ್ಟದಲ್ಲಿಯೂ ಅರ್ಥಪೂರ್ಣವಾಗಿ ಓಬವ್ವ ಜಯಂತಿ ಆಚರಣೆಗೆ ತಾಲೂಕಿನ ತಹಶೀಲ್ದಾರರು ಪೂರ್ವಭಾವಿ ಸಭೆ ಕರೆದು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದ ಅವರು, ಎಲ್ಲಾ ಸರ್ಕಾರಿ, ಶಾಲಾ–ಕಾಲೇಜುಗಳಲ್ಲಿ ಒನಕೆ ಓಬವ್ವ ಅವರ ಭಾವಚಿತ್ರವಿಟ್ಟು ಪೂಜೆ ಸಲ್ಲಿಸಬೇಕೆಂದರು.

ಸಭೆಯಲ್ಲಿ ಭಾಗವಹಿಸಿದ ಅನೇಕ ಸಮುದಾಯದ ಮುಖಂಡರು, ವೀರ ಒನಕೆ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಚರಿಸಲು ಶಾಲಾ–ಕಾಲೇಜು ಮಕ್ಕಳಿಗೆ ಪ್ರಬಂಧ ಸ್ಪರ್ಧೆ ಆಯೋಜಿಸಿ ವಿಜೇತರಿಗೆ ಪ್ರಶಸ್ತಿ ನೀಡಬೇಕು. ಉತ್ತಮ ಸೇವೆ ಸಲ್ಲಿಸಿದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸಬೇಕು. ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರನ್ನು ಆಹ್ವಾನಿಸಬೇಕೆಂದು ಎಂಬಿತ್ಯಾದಿ ಸಲಹೆ ನೀಡಿದರು.

ಸಭೆಯಲ್ಲಿ ಚುನಾವಣಾ ತಹಶೀಲ್ದಾರ ಪಂಪಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಅ. ನಾಶಿ, ಕರ್ನಾಟಕ ಛಲವಾದಿ ಮಹಾಸಭೆಯ ಜಿಲ್ಲಾಧ್ಯಕ್ಷ ಮಹಾದೇವ ಮೋಘಾ, ಉಪಾಧ್ಯಕ್ಷ ಸಂಪತಕುಮಾರ ವಳಕೇರಿ, ಪ್ರಧಾನ ಕಾರ್ಯದರ್ಶಿ ಅರುಣ ಭರಣಿ, ಕಾರ್ಯದರ್ಶಿ ಚಂದ್ರಕಾಂತಿ ವಾಲಿ, ಎಸ್.ಸಿ–ಎಸ್.ಟಿ. ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಬಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಬಡಿಗೇರ, ಬಸವರಾಜ ರಾವೂರ, ಉಪನ್ಯಾಸಕರಾದ ಸವಿತಾ ನಾಶಿ, ರಾಚಮ್ಮ ಪಾಟೀಲ, ಎಂ.ಡಿ.ಲಿಂಗಪ್ಪ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ದುಶ್ಚಟಗಳ ವ್ಯಸನದಿಂದ ಹೊರಬರಲು ವಿದ್ಯಾರ್ಥಿಗಳಿಗೆ ಪಿಎಸ್ಐ ಸುರೇಶಕುಮಾರ ಕರೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಅ.29–:ತಂಬಾಕು ಸೇವನೆಯನ್ನು ನೇರವಾಗಿ ಅಥವಾ ಪರೋಕ್ಷವಾಗಿ ಮಾಡಿದರೂ ಅದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ತಂಬಾಕು ಅಥವಾ ಮಾದಕ ವಸ್ತುಗಳ ಆಕರ್ಷನೆಗೆ ವಿದ್ಯಾರ್ಥಿಗಳು ಬಲಿಯಾಗಬಾರದು ಎಂದು ಪಟ್ಟಣದ ಸರ್ವೋದಯ ಪದವಿ ಮಹಾವಿದ್ಯಾಲಯದಲ್ಲಿ ಹುಮನಾಬಾದ ಪೊಲೀಸ್ ಠಾಣೆಯ ವತಿಯಿಂದ ಹಮ್ಮಿಕೊಂಡಿದ್ದ ತೆರೆದ ಮನೆ ಕಾರ್ಯಕ್ರಮವನ್ನು ಪಿಎಸ್ಐ ಸುರೇಶಕುಮಾರ ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ಮಕ್ಕಳು ದೇಶದ ಶಕ್ತಿ ಆದ್ದರಿಂದ ತಂಬಾಕು ಸೇವನೆಯ ದುಷ್ಪರಿಣಾಮ ಬಗ್ಗೆ ಅರಿವು ಮೂಡಿಸುವುದು ಅವಶ್ಯ. ತಂಬಾಕಿನ ಉತ್ಪನ್ನಗಳನ್ನು 18 ವರ್ಷದ ಒಳಗಿನ ಮಕ್ಕಳಿಗೆ ಮಾರಾಟ ಮಾಡುವುದು ಅಥವಾ ಶಾಲೆಗಳ ನೂರು ಗಜವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಅಪರಾಧ ಎಂದರು. ಆರೋಗ್ಯಕರ ಜೀವನಶೈಲಿ, ಸಮತೋಲಿತ ಆಹಾರ ಮತ್ತು ನಿಯಮಿತ ವ್ಯಾಯಾಮ ದುಶ್ಚಟಗಳ ವ್ಯಸನದಿಂದ ಹೊರಬರಲು ಸಹಾಯ ಮಾಡುತ್ತದೆ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಹಾಗೂ ಸಮಾಜದಲ್ಲಿ ಯುವತಿಯರ ಮೇಲೆ ಆಗುತ್ತಿರುವ ದೌರ್ಜನ್ಯದ ವಿರುದ್ಧ, ಯುವತಿಯರು ಹೋರಾಡಲು ಮುಂದಾಗಬೇಕೆಂದು ತಿಳಿ ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರು, ಶಿಕ್ಷಕಿಯರು, ಹಾಗೂ ವಿದ್ಯಾರ್ಥಿಗಳಿದ್ದರು. ಗೇಮು ಚೌಹಾಣ್ ಅವರು ಕಾರ್ಯಕ್ರಮವನ್ನು ನಿರೂಪಿಸಿ ಸ್ವಾಗತಿಸಿದರೆ, ಪ್ರಾಚಾರ್ಯರಾದ ಡಾ. ರಾಘವೇಂದ್ರ ಬಿರಾದರ ಅವರು ವಂದಿಸಿದರು.

### ಪರುಷುಕಟ್ಟೆಯ ಪಕ್ಕದಲ್ಲಿದ ಗಣೇಶ ಮಂದಿರ ಮತ್ತು

## ಮಹಾದೇವ ಮಂದಿರ ಪುನರ ನಿರ್ಮಾಣಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಅ 29 ಸಮಸ್ತ ನಾಗರೀಕರ ಪರವಾಗಿ ವಿಶ್ವ ಹಿಂದೂ ಪರಿಷದ ಬಜರಂಗದಳದ ವತಿಯಿಂದ ಕಳೆದ 2022 ರಿಂದ ಇಲ್ಲಿಯವರೆಗೆ ಸುಮಾರು ಮೂರುವರೆ ವರ್ಷಗಳಿಂದ ನಗರದ ಪವಿತ್ರ ಹಾಗೂ ಪುಣ್ಯಸ್ಥಳ, ಜೊತೆಗೆ ಬಸವಣ್ಣನವರ ಸಾಮಾಜಿಕ ನ್ಯಾಯ ನೀಡುವ, ಐತಿಹಾಸಿಕ ಪರಷುಕಟ್ಟೆಯ ಪಕ್ಕದಲ್ಲಿ ಈ ಮೊದಲು ಗಣೇಶ ಮಂದಿರ ಮತ್ತು ಮಹಾದೇವ ಮಂದಿರ ಇದ್ದದ್ದನ್ನು, ಅಭಿವೃದ್ಧಿಯ ನೆಪದಲ್ಲಿ ತೆರವುಗೊಳಿಸಿ, ಅಲ್ಲಿರುವ ಮೂರ್ತಿಗಳನ್ನು ಸ್ಥಳಾಂತರಿಸುವುದಕ್ಕೆ ಖಂಡಿಸಿ, ನಗರದ ಯಾವದಾದರೂ ಪ್ರದೇಶದಲ್ಲಿ ಸರ್ಕಾರವೇ ಸ್ಥಳಾವಕಾಶ ಮಾಡಿ ಗಣೇಶ ಮಂದಿರ ಮತ್ತು ಮಹಾದೇವ ಮಂದಿರ ಅನುದಾನ ನೀಡಿ, ಪುನರ ನಿರ್ಮಾಣ ಮಾಡಿ ,ಅಭಿವೃದ್ಧಿ ಪಡಿಸಬೇಕಾಗಿ ಹಲವು ಸಲ ಬೇಡಿಕೆ ಇಟ್ಟು ಮುಖ್ಯ ಅಧಿಕಾರಿಗಳು ಧಾರ್ಮಿಕ ದತ್ತಿ ಇಲಾಖೆ,ಬೆಂಗಳೂರು ರವರಿಗೂ ಹಾಗೂ ನಮ್ಮ ಬಿಕೆಡಿಬಿ ಆಯುಕ್ತರಿಗೂ ಮನವಿ ಸಲ್ಲಿಸಿಲಾಗಿದೆ, ಇದರ ಪ್ರತ್ಯುತ್ತರವಾಗಿ ಈ ಮನವಿಗೆ ಧಾರ್ಮಿಕ ದತ್ತಿ ಇಲಾಖೆ ಬೆಂಗಳೂರವರು ಅಪರ ಜಿಲ್ಲಾಧಿಕಾರಿಗಳ ಮೂಲಕ ಆದೇಶಿಸಿದರು, ಮನಿವಿ ಪತ್ರದ ಮೂಲಕ ವಿನಂತಿಸಿದರು ಇದರ ಬಗ್ಗೆ ಯಾವ ಕ್ರಮ ಜರುಗಿಸಿರುವುದಿಲ್ಲ. ಹಾಗೂ ಸದರಿ ಪತ್ರದಲ್ಲಿನ ಅಂಶಗಳು ನಿಯಮನುಸಾರವಾಗಿ ಪರಿಶಿಲಿಸಿ ಅಗತ್ಯ ಕ್ರಮ ಕೈಗೊಂಡಿಲ್ಲ ಯಾವದೇ ನಿರ್ಣಯೂ ಸಹ ಕೈಗೊಂಡಿಲ್ಲ. ಇದು ಯಾವ ನ್ಯಾಯ ಈ ವಿಷಯದ ಕುರಿತು ಗಂಭೀರತೆಯನ್ನು ತೆಗೆದುಕೊಳ್ಳುವದು ಇರುವುದೇ ವಿಪರ್ಯಾಸ.

ಈ ವಿಷಯದ ಕೂರಿತು ಸೂಕ್ತ ಕ್ರಮ ಕೈಗೊಂಡು ಇಲ್ಲಿನ ನಗರದ ನಿವಾಸಿಗಳು ಹಾಗೂ ವಿಶ್ವ ಹಿಂದೂ ಪರಿಷದ ಬಜರಂಗದಳದ ವಿನಂತಿಗೆ ಸ್ಪಂದಿಸಿ ಈ ಕೂಡಲೇ ನ್ಯಾಯ ದೂರಕಿಸಿಕೊಡಬೆಕೆಂದು ಮನವಿ ಮೂಲಕ ವಿನಂತಿಸಲಾಗಿದೆ. ಇಲ್ಲವಾದಲ್ಲಿ ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ಮುಂದೆ ಒಂದು ದಿನ ಸಾಂಕೇತಿಕ ಧರಣಿ ಮಾಡಲಾಗುವುದು ಎಂದು ಈ ಮೂಲಕ ಎಚ್ಚರಿಕೆ ನೀಡಲಾಗಿದೆ..

# ಅರ್ಥಪೂರ್ಣವಾಗಿ ವೀರವನಿತೆ ಒಣಕೆ ಓಬವ್ವ ಜಯಂತಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ:29: ಜಿಲ್ಲಾಡಳಿತ , ಜಿಲ್ಲಾ ಪಂಚಾಯತ್, ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ನವೆಂಬರ್ 11 ರಂದು ವೀರ ವನಿತೆ ಒಣಕೆ ಓಬವ್ವ

ಜಯಂತಿಯನ್ನುಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವೀರ ವನಿತೆ ಒಣಕೆ ಓಬವ್ವ ಜಯಂತಿ ಆಚರಿಸುವ ಕುರಿತು ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅಂದು ನಗರದ ಕನ್ನಡ ಸಾಹಿತ್ಯ ಪರಿಷತ್ ಸಭಾಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಈ ಜಯಂತಿ ಆಯೋಜಿಸಲು, ಒಣಕೆ ಓಬವ್ವ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಲು,ವೇದಿಕೆ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು ಆಹ್ವಾನಿಸಲು ನಿರ್ಧರಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಕಾರ್ಯಕ್ರಮದ ಸಂದರ್ಭದಲ್ಲಿ , ಸೂಕ್ತ ಪೋಲಿಸ್ ಬಂದೋಬಸ್ತ್,

ವೇದಿಕೆ ಸಿದ್ಧತೆ ನೋಡಿಕೊಳ್ಳಲು, ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ ಸೂಚಿಸಲಾಯಿತು.

ಕಾರ್ಯಕ್ರಮವನ್ನು ತಾಲೂಕ ಮಟ್ಟದಲ್ಲಿ ಶಾಲಾ, ಕಾಲೇಜು, ಗ್ರಾಮ ಪಂಚಾಯತ್, ವಿವಿಧ ಕಚೇರಿ ಗಳಲ್ಲಿ ಈ ಜಯಂತಿ ಆಚರಣೆ, ಮುಖ್ಯ ಕಾರ್ಯಕ್ರಮಕ್ಕೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲು

ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಸಮಾಜದ ಮೂಲಕ ಹಮ್ಮಿಕೊಳ್ಳಲಾಗುವ ಮೆರವಣಿಗೆ ಕಾರ್ಯಕ್ರಮ ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಈ ಕುರಿತು ಮಾಹಿತಿ ನೀಡಲು ಸೂಚಿಸಿದರು. ಕಲಾತಂಡಗಳ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಉತ್ತರಾದೇವಿ ಮಠಪತಿ, ಮರೆಪ್ಪ ಚಟ್ಟರ್ಕರ್,ಕಾಶಿನಾಥ್ ನಾಟೇಕರ್, ನಿಂಗಪ್ಪ ಬೀರನಾಳ, ರಾಹುಲ್ ಕೊಲ್ಲೂರ್,ಸೈದಪ್ಪ ಕುಲೂರ್, ಗೋಪಾಲ್ ತೆಲಿಗೇರಿ, ಭೀಮಣ್ಣ ಹೊಸಮನಿ ಇತರರು ಉಪಸ್ಥಿತರಿದ್ದರು.

# ರಾಜ್ಯಮಟ್ಟಕೆ ಮೋನಿಕಾ ಯರಗಗೋಡಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಸುರಪುರ:ಅ.29: ತಾಲೂಕಿನ ಕುರೇಕನಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಮೋನಿಕಾ ಯರಗೋಡಿ ಜಿಲ್ಲಾ ಮಟ್ಟದ 400 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ..13.10.25.ರಂದು ಜಿಲ್ಲಾಡಳಿತ & ಜಿಲ್ಲಾ ಪಂಚಾಯತ ಉಪ ನಿರ್ದೇಶಕರ ಕಾರ್ಯಾಲಯ ಶಾಲಾ ಶಿಕ್ಷಣ ಇಲಾಖೆ ಯಾದಗಿರಿ ಹಾಗೂ ಕರ್ನಾಟಕ ರಾಜ್ಯ ದೈಹಿಕ ಶಿಕ್ಷಕರ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಜಿಲ್ಲಾ ಮಟ್ಟದ ಓಟದ ಸ್ಪರ್ಧೆಯಲ್ಲಿ ಒಟ್ಟು 06 ಜನ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಅದರಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕುರೆಕಾನಾಳದ 6ನೇ ತರಗತಿ ವಿದ್ಯಾರ್ಥಿನಿ ಮೋನಿಕಾ ಹ ಯರಗೋಡಿ ಪ್ರಥಮ ಸ್ಥಾನ ಗಿಟ್ಟಿಸಿಕೊಂಡು ಜಿಲ್ಲಾ ಮಟ್ಟದಿಂದ ರಾಜ್ಯಮಟ್ಟಕ್ಕೆಆಯ್ಕೆಯಾಗಿದ್ದಾಳೆ ಎಂದು ತಿಳಿಸಿದ್ದಾರೆ. ಮುಖ್ಯಗುರುಗಳಾದ ಭೀಮನಗೌಡ ಬಿರಾದಾರ ನಮ್ಮ ಪತ್ರಿಕೆ ಜೊತೆ ಮಾತನಾಡಿ ಈ ವಿದ್ಯಾರ್ಥಿ ಬಡವಳಿದ್ದು ಅವರ ತಂದೆ ತಾಯಿ ಕೂಲಿ ಕೆಲಸ ಮಾಡಿ ನನ್ನ ಮಗಳು ಮುಂದೊಂದು ದಿನ ದೊಡ್ಡ ಮಟ್ಟದಲ್ಲಿ ನಿಲ್ಲಬೇಕೆಂದು ಕನಸು ಇಟ್ಟಕೊಂಡು ಕಲಿಸುತ್ತಿದ್ದಾರೆ, ಆದರೆ ಹಿಂದುಳಿದ ಸಮಾಜದ ಒಬ್ಬ ವಿದ್ಯಾರ್ಥಿನಿ ಈ ಮಟ್ಟಕ್ಕೆ ಬೆಳೆದು ನಮ್ಮ ಶಾಲೆಯ ಹೆಸರು ರಾಜ್ಯ ಮಟ್ಟಕ್ಕೆ ಕೊಂಡೋಗಿದ್ದಾಳೆ. ನಮಗೆ ಸಂತೋಷವಾಗಿದೆ ಮುಂದೆ ರಾಷ್ಟ ಮಟ್ಟಕ್ಕೆ ಆಯ್ಕೆಯಾಗಲಿ, ನಮ್ಮ ಶಾಲೆಯ ಹೆಸರು ಅವಳ ಹೆಸರು ರಾಷ್ಟಮಟ್ಟದಲ್ಲಿ ಬೆಳೆಯಬೇಕೆಂದು ಶುಭಹಾರೈಸಿದರು..

ವಿದ್ಯಾರ್ಥಿನಿ ಮೋನಿಕಾ ನಮ್ಮ ಪತ್ರಿಕೆ ಜೊತೆ ಮಾತನಾಡಿ ನನಗೆ ಈ ಹಿಂದೆ ತಾಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಲು ಎಲ್ಲಾ ಶಿಕ್ಷಕರು ಪ್ರೋತ್ಸಾಹಿಸಿದ್ದಾರೆ, ನನಗೆ ಮಾರ್ಗದರ್ಶಕರಾಗಿ ಬೆನ್ನಲಬಾಗಿ ನಿಂತು ನಾನು ಜಿಲ್ಲಾ ಮಟ್ಟದಿಂದ ರಾಜ್ಯಮಟ್ಟಕ್ಕೆ ಆಯ್ಕೆಯಾಗಲು ಪಾತ್ರದಾರರು ಮುಖ್ಯಗುರುಗಳು, ಹಾಗೂ ನನ್ನ ಗುರುವೃಂದ ಎಂದು ವಿದ್ಯಾರ್ಥಿನಿ ಪತ್ರಿಕೆ ಜೊತೆ ಮಾತನಾಡಿದಳು.

ಈ ವಿದ್ಯಾರ್ಥಿನಿಗೆ ಶಾಲೆಯ ಮುಖ್ಯಗುರುಗಳಾದ ಭೀಮನಗೌಡ ಬಿರಾದಾರ, ಸಹ ಶಿಕ್ಷಕ ಮಲ್ಲಿಕಾರ್ಜುನ ಎಚ್, ಬಸವರಾಜ ಆರತ್ತಿನವರ,ಮುಸಿಹೊನ್ನೂರಪ್ಪ,ಈರಣ್ಣ ಮಾನಬಾವಿ,ಹರ್ಷ ವ್ಯಕ್ತಪಡಿಸಿದರು. ರಾಜ್ಯ ಮಟ್ಟದ ಓಟದಲ್ಲಿ ಗೆದ್ದು ಮತ್ತೆ ರಾಷ್ಟ ಮಟ್ಟದಲ್ಲಿ ನಮ್ಮ ಶಾಲೆಯ ಹೆಸರು ತರಲೆಂದು ಸನ್ಮಾನಿಸಿ ಅಭಿನಂದನೆಗಳು ತಿಳಿಸಿದರು..ಈ ಸಂದರ್ಭದಲ್ಲಿ ಎಸ್ ಡಿ ಎಂ ಸಿ ಅಧ್ಯಕ್ಷರಾದ ಪರಸು ಹುಡೆದ,ಸರ್ವ ಸದಸ್ಯರು, ಬಸವರಾಜ ಹುಡೇದ, , ಶರಣು ಹುಡೇದ, ಮತ್ತಿತರರು ಅಭಿನಂದನೆಗಳು ತಿಳಿಸಿದರು. ಊರಿನ ಹಿರಿಯರು ಸಮಾಜದ ಮುಖಂಡರು ಅಭಿನಂದನೆಗಳು ತಿಳಿಸಿದರು.

# ನ.1 ರಂದು 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : ಅ 29 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ರಾಜ್ಯೋತ್ಸವ ದಿನಾಚರಣೆ ಸಮಿತಿ ಹಾಗೂ ಭಾವೈಕ್ಯತಾ ಸಮಿತಿ ಸಂಯುಕ್ತಾಶ್ರಯದಲ್ಲಿ

ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 2025ರ ನವೆಂಬರ್ 1ರ ಶನಿವಾರ ರಂದು ಬೆಳಿಗ್ಗೆ 9 ಗಂಟೆಗೆ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ, ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆಸಲ್ಲಿಸಿ ಹಾಗೂ ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ. ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರು ಶ್ರೀ ಶರಣಪ್ಪ ಸಲಾದಪೂರ, ಭೀಮರಾಯನಗುಡಿ ಕಾಡಾ ಅಧ್ಯಕ್ಷರು ಶ್ರೀ ಬಾಬು ಹೊನ್ನಾ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ ಅತಿಥಿಗಳಾಗಿ ಪಾಲ್ಗೊಳ್ಳುವರು.

ಯಾದಗಿರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷರು ಶ್ರೀ ಸಿದ್ದಪ್ಪ ಎಸ್.ಹೊಟ್ಟಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹತ್ತಿ ಖರೀದಿ ಕೇಂದ್ರ ಸ್ಥಾಪನೆ : ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ:29:ಸರ್ಕಾರದ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ರೈತರು ಬೆಳೆದಿರುವ ಹತ್ತಿ ಹುಟ್ಟುವಳಿಯನ್ನು ಖರೀದಿಸುವ ಸಂಬಂಧ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇಂದು ಸಭೆಯನ್ನು ಜರಗಿಸಲಾಯಿತು.

ಸಭೆಯಲ್ಲಿ ಜಿಲ್ಲೆಯ ಹತ್ತಿ ಗಿರಣಿಯ ಮಾಲೀಕರು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಸಹಾಯಕ ನಿರ್ದೇಶಕರುಗಳು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಸಹಾಯಕ ನಿರ್ದೇಶಕರು, ಸಮಿತಿಯ ಕಾರ್ಯದರ್ಶಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಹತ್ತಿ ನಿಗಮದ ಅಧಿಕಾರಿಗಳೊಂದಿಗೆ ಚರ್ಚಿಸಿ ಜಿಲ್ಲೆಯಲ್ಲಿ ಬೆಳೆದಿರುವ ರೈತರಿಂದ ಹತ್ತಿಯನ್ನು ಕರದಿ ಖರೀದಿಸಲು ಸೂಕ್ತ ಕ್ರಮವಹಿಸುವುದು ಮತ್ತು ವ್ಯಾಪಾರಸ್ಥರ ಮಧ್ಯವರ್ತಿ ಗಳು ರೈತರ ಹೆಸರಿನಲ್ಲಿ ಹತ್ತಿ ಉತ್ಪನ್ನವನ್ನು ಮಾರಾಟ ಮಾಡದಂತೆ ಎಲ್ಲಾ ಮುಂಜಾಗ್ರತೆ ಕ್ರಮಗಳನ್ನು ವಹಿಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಒಟ್ಟು 29 ಖರೀದಿ ಕೇಂದ್ರಗಳನ್ನು ತೆರೆದಿದ್ದು ಸದರಿ ಖರೀದಿ ಕೇಂದ್ರಗಳಲ್ಲಿ ಕೇವಲ ನಾಲ್ಕು ಖರೀದಿ ಕೇಂದ್ರಗಳನ್ನು ಹತ್ತಿ ನಿಗಮದ ಅಧಿಕಾರಿಗಳು ತೆರೆದಿದ್ದು ,ಎಲ್ಲಾ ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮವಹಿಸುವಂತೆ ಭಾರತೀಯ ಹತ್ತಿ ನಿಗಮದ ಉಪ ಪ್ರಧಾನ ವ್ಯವಸ್ಥಾಪಕರು ಹುಬ್ಬಳ್ಳಿಯವರಿಗೆ ಪ್ರಸ್ತಾವನೆ ಸಲ್ಲಿಸಲಾಯಿತು ಮತ್ತು ರೈತರು ಕಪಸ್ ಕಿಸಾನ್ ಆಪಿನ ಮೂಲಕ ನೋಂದಣಿ ಮಾಡಲು ಸ್ವಯಂಸೇವಕರು ಸಹಾಯ ಮಾಡಲು ಮತ್ತು ಅತ್ತಿ ಗಿಣಿಯ ಮಾಲೀಕರು ರೈತರಿಗೆ ನೋಂದಣಿ ಮಾಡಲು ಸಹಾಯ ಮಾಡಲು ಸೂಚಿಸಿದರು.

ಕೃಷಿ ಇಲಾಖೆ ಅಧಿಕಾರಿಗಳು ರೈತರು ಜಮೀನಿನಲ್ಲಿ ಹತ್ತಿ ಬೆಳೆಯನ್ನು ಬೆಳೆ ಸಮೀಕ್ಷೆಯ ವರದಿಯನ್ನು ಪರಿಗಣಿಸಿ ಕಿಸಾನ್ ಕಪಾಸೆ ಆಪ್

ನಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರುಗಳು ದೃಢೀಕರಿಸಲು ಸೂಚಿಸಿದರು. ಒಟ್ಟಾರೆ-ಯಾಗಿ ಯಾವುದೇ ಕಾರಣಕ್ಕೂ ವ್ಯಾಪಾರಸ್ಥರು ಮಧ್ಯವರ್ತಿಗಳು ರೈತರ ಹೆಸರಿನಲ್ಲಿ ಹತ್ತಿ ಉತ್ಪನ್ನವನ್ನು ಮಾರಾಟ ಮಾಡದೆ ಇರುವಂತೆ ನೋಡಿಕೊಳ್ಳಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಿದರು.

# ಜಾನುವಾರುಗಳಿಗೆ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮ ಯಶಸ್ವಿಯಾಗಿ ಹಮ್ಮಿಕೊಳ್ಳಿ:ಜಿಲ್ಲಾಧಿಕಾರಿ ಹರ್ಷಲ್ ಭೋಯರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ನ:29:ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುವ ಎತ್ತು,ಹೋರಿ,ಹಸು ಹಾಗೂ ಎಮ್ಮೆ ಗಳಿಗೆ ತಗಲುವ ಮಾರಕ ಕಾಲು ಬಾಯಿ ರೋಗ ನಿಯಂತ್ರಣ ಕಾರ್ಯಕ್ರಮ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಎಂಟನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮ–2025 ಕುರಿತು ಪಶುಸಂಗೋಪನೆ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆ ಸಿ ಅವರು ಮಾತನಾಡಿದರು.

ಈ ಕಾರ್ಯಕ್ರಮದ ಅಂಗವಾಗಿ 2025 ನೇ ಸಾಲಿನ ಎಂಟನೇ ಸುತ್ತಿನ ಕಾಲು ಬಾಯಿ ರೋಗ ನಿಯಂತ್ರಣಕ್ಕಾಗಿ ಜಾನುವಾರುಗಳಿಗೆ ಇದೇ ನವೆಂಬರ್ 3 ರಿಂದ ಡಿಸೆಂಬರ್ 2 ರವರೆಗೆ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ಗುರುತಿಸಿದ 2.19 ಲಕ್ಷ ದನಕರು, ಎಮ್ಮೆ, ಹಸುಗಳಿಗೆ ಲಸಿಕೆ ಹಾಕಿಸುವಂತೆ ಸೂಚನೆ ನೀಡಿದರು.

ರೈತರು ಹಾಗೂ ಹೈನುಗಾರರಿಗೆ ಆರ್ಥಿಕ ಸಂಕಷ್ಟ ಉಂಟುಮಾಡುವ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮದ ಅಂಗವಾಗಿ ತಾಲೂಕುವಾರು ಪ್ರತಿ ಮನೆಗೆ ಭೇಟಿ ನೀಡಿ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ಅವಶ್ಯಕ ಔಷಧಿ,ಇಟ್ಟುಕೊಳ್ಳಬೇಕು. ಪಶುವೈದ್ಯರು,ಪಶುಸಖಿಯರು ಕಾಳಜಿಯಿಂದ ಕಾರ್ಯನಿರ್ವಹಿಸಿ ಜಾನುವಾರುಗಳಿಗೆ ಲಸಿಕೆ ಹಾಕಲು ಅವಲು ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ರಾಜು ದೇಶಮುಖ ಅವರು, ಜಿಲ್ಲೆಯ 2.19 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಇದಕ್ಕಾಗಿ 2.25 ಲಸಿಕೆ ಸರಬರಾಜು ಮಾಡಲಾಗುತ್ತಿದ್ದು,265 ಲಸಿಕೆ ದಾರರನ್ನು ನೇಮಿಸಲಾಗಿದೆ.

ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮುಂಚೂಣಿಯಲ್ಲಿದೆ.

8 ನೇ ಸುತ್ತಿನಲ್ಲಿರುವುದು ರಾಷ್ಟದ ಏಕೈಕ ರಾಜ್ಯ ಕರ್ನಾಟಕ ಮಾತ್ರ.ಗ್ರಾಮಗಳಲ್ಲಿ ಲಸಿಕೆ ಮಾಡುವ ವೇಳಾಪಟ್ಟಿ ನೀಡಲಾಗುತ್ತದೆ.

ಕಾಲು ಬಾಯಿ ರೋಗದಿಂದ ಜಾನುವಾರು ಗುಣ ಮುಖವಾದರೂ ಮುಂದೆ ಗರ್ಭ ಕಟ್ಟುವಿಕೆಯಲ್ಲಿ ವಿಳಂಬ, ಸಾಮರ್ಥ್ಯ ಮತ್ತು ಇಳುವರಿಯಲ್ಲಿ ಇಳಿಮುಖವಾಗುವುದರಿಂದ ರೈತರಿಗೆ ಆರ್ಥಿಕ ನಷ್ಟ ಉಂಟಾಗುತ್ತದೆ.

ಮೂರು ತಿಂಗಳು ಮೇಲ್ಪಟ್ಟ ಎತ್ತು ,ಹೋರಿ,ಹಸು, ಎಮ್ಮೆ ಗಳಿಗೆ ಉಚಿತ ಲಸಿಕೆ ಹಾಕಲಾಗುತ್ತದೆ. ಸುರಕ್ಷತೆಗೆ ಕನಿಷ್ಠ ಎರಡು ಬಾರಿ ಲಸಿಕೆ ಹಾಕಿಸಬೇಕು. ಜಾತ್ರೆ ಅಥವಾ ಸಂತೆಗಳಲ್ಲಿ ಜಾನುವಾರುಗಳಿಗೆ ಕನಿಷ್ಠ 21ದಿನಗಳ ಹಿಂದೆ ಲಸಿಕೆ ಮಾಡಿದ ಪ್ರಮಾಣ ಪತ್ರ ಕಡ್ಡಾಯವಾಗಿದೆ. ಪ್ರತಿ ಆರು ತಿಂಗಳಿಗೊಮ್ಮೆ ಕೈಗೊಳ್ಳುವ ಸಾಮೂಹಿಕ ಲಸಿಕಾ ಕಾರ್ಯಕ್ರಮದಲ್ಲಿ ತಪ್ಪದೇ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು ಎಂದು ಅವರು ರೈತರಲ್ಲಿ ಕೋರಿದರು.

ಸಭೆಯಲ್ಲಿ ಪಶುವೈದ್ಯರು, ಪಶುಸಂಗೋಪನೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿದರಿ ವೃತ್ತಕ್ಕೆ ಜೀವ ಕಳೆ ತುಂಬಲು ಹೊರಟ ಸಿಲ್ವರ್ ಸ್ಟಾರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್.ಅ.29:ನಗರದ ಯುವ ಮನಸ್ಸುಗಳನ್ನು ಒಳಗೊಂಡಿರುವ ಬೀದರ್ ರೋಟರಿ ಕ್ಲಬ್ ಸಿಲ್ವರ್ ಸ್ಟಾರ್, ನಗರವನ್ನು ಸುಂದರೀಕರಣಗೊಳಿಸುವ ಕಾರ್ಯಕ್ಕೆ ಮುಂದಾಗಿದ್ದು, ನಗರದ ಬಿದರಿ ವೃತ್ತದ ಸುತ್ತ ಸಸಿಗಳನ್ನು ನೆಡುವ ಮೂಲಕ ಈ ಮಹತ್ತರ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದ್ದಾರೆ.

ಬೀದರ್ ಜಿಲ್ಲೆಯ ಹೆಮ್ಮೆಯ ಪ್ರತೀಕವಾದ ಬಿದರಿ ಕಲೆಯ ಸ್ಮರಣಾರ್ಥವಾಗಿ ಐತಿಹಾಸಿಕ ನಗರದ ಹೈದರಾಬಾದ್ ರಸ್ತೆಯಲ್ಲಿ ನಿರ್ಮಿಸಿರುವ ಬಿದರಿ ವೃತ್ತ ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ನಿರ್ಲಕ್ಷದಿಂದಾಗಿ ತನ್ನ ಕಳೆಯನ್ನು ಕಳೆದುಕೊಂಡಿತ್ತು. ಈ ಹಿನ್ನೆಲೆಯಲ್ಲಿ ರೋಟರಿ ಸಿಲ್ವರ್ ಸ್ಟಾರ್ ಅಧ್ಯಕ್ಷ ಆದಿಶ್ ವಾಲಿಯವರ ನೇತೃತ್ವದಲ್ಲಿ ವೃತ್ತವನ್ನು ಶುಚಿಗೊಳಿಸಿ, ವೃತ್ತದ ಸುತ್ತ ಸಸಿಗಳನ್ನು ನೆಟ್ಟು, ಬಿದರಿ ವೃತ್ತಕ್ಕೆ ಜೀವ ಕಳೆ ತುಂಬಲು ಹೊರಟಿದ್ದಾರೆ.

ಇದೇ ವೇಳೆ ವೃತ್ತದ ಸುಂದರಿಕರಣದ ಮಾಡಲ್ ಪೋಸ್ಟರ ಬಿಡುಗಡೆ ಮಾಡಿದ ರೋಟರಿ ಇಂಟರ್ನ್ಯಾಷನಲ್ 3160 ಜಿಲ್ಲಾ ಗವರ್ನರ್ ಎಂ.ಕೆ ರವೀಂದ್ರ ಮಾತನಾಡಿ, ನಮ್ಮ ಸಿಲ್ವರ್ ಸ್ಟಾರ್ ವತಿಯಿಂದ ಬಿದರಿ ವೃತ್ತವನ್ನು ಸುಂದರಿಕರಣಗೊಳಿಸಲು ಹೊರಟಿರುವುದು ಖುಷಿಯ ವಿಚಾರ. ಸಾಮಾಜಿಕ,ಶೈಕ್ಷಣಿಕ ಸೇವೆಗಳ ಮೂಲಕ ಗುರುತಿಸಿಕೊಂಡಿರುವ ನಮ್ಮ ರೋಟರಿ ಸಂಸ್ಥೆಯು, ಇಂತಹ ಮಹತ್ತರ ಕೆಲಸಗಳ ಮೂಲಕ ನಗರವನ್ನ ಸುಂದರವಾಗಿಡಲು ಪರಿಶ್ರಮವಹಿಸುತ್ತದೆ ಎಂದರು.

ರೋಟರಿ ಸಿಲ್ವರ್ ಸ್ಟಾರ್ ನ ಅಧ್ಯಕ್ಷ ಆದಿಶ್ ವಾಲಿ ಮಾತನಾಡಿ,ಮಹಾನಗರ ಪಾಲಿಕೆಯ ಒಡಂಬಡಿಕೆಯೊಂದಿಗೆ ನಾವು ಬಿದರಿ ವೃತ್ತದಿಂದ ಹತ್ತಿರದ ಫ್ಲೈ ಓವರ್ ವರೆಗಿನ ರಸ್ತೆಯನ್ನು ಸುಂದರಿಕರಣ ಗೊಳಿಸಲು ಒಂದು ಮಾಡೆಲ್ ತಯಾರಿಸಿದ್ದೇವೆ. ಈ ಕಾರ್ಯವನ್ನು ಮೂರು ಹಂತಗಳಲ್ಲಿ ವಿಂಗಡಿಸಲಾಗಿದ್ದು, ಮೊದಲ ಹಂತದಲ್ಲಿ ವೃತ್ತದ ಸುತ್ತ ಸಸಿ ನೆಟ್ಟಿದ್ದೇವೆ. ಎರಡನೇ ಹಂತದಲ್ಲಿ ವೃತ್ತಕ್ಕೆ ಬಣ್ಣ ಹಚ್ಚುವ ಕೆಲಸ ಮಾಡುತ್ತೇವೆ. ಮೂರನೇ ಹಂತದಲ್ಲಿ ಫ್ಲೈ ಓವರ್ ಕೆಳಗಡೆ ಬಿದರಿ ಕಲೆ ಹಾಗೂ ಜಿಲ್ಲೆಯ ಇನ್ನಿತರ ಸಾಂಸ್ಕೃತಿಕ ಚಟುವಟಿಕೆಗಳ ಪೇಂಟಿಂಗ್ ಮಾಡಿಸುವ ಮೂಲಕ ಅಂತರಾಜ್ಯದಿಂದ ಆಗಮಿಸುವ ಜನರಿಗೆ ಜಿಲ್ಲೆಯ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡುತ್ತೇವೆ ಎಂದರು.

ಕಾರ್ಯದರ್ಶಿ ಕಿರಣ್ ಸ್ಯಾಮವೆಲ್ ಮಾತನಾಡಿ, ಬಿದರಿ ವೃತ್ತದ ಬ್ಯೂಟಿಫಿಕೇಷನ್ ಗಾಗಿ ವಿನೂತನ ಕಾರ್ಯಕ್ರಮ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ. ಜಿಲ್ಲೆಯ ಜನರ ಸಹಕಾರದೊಂದಿಗೆ ನಗರದ ಅಂದವನ್ನು ಹೆಚ್ಚಿಸುವ ಕೆಲಸ ಮಾಡುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ರೋಟರಿಯ ಅಸಿಸ್ಟೆಂಟ್ ಗವರ್ನರ್ ಹಾವಶೆಟ್ಟಿ ಪಾಟೀಲ್, ಉಪಾಧ್ಯಕ್ಷ ಆನಂದ್ ಕೊಟರ್ಕಿ, ಜಾಯಿಂಟ್ ಸೆಕ್ರೆಟರಿ ಭಾವೇಶ್ ಪಟೇಲ್, ಖಜಾಂಚಿ ಅಮರೇಶ್ ಅಭಸಂಗೆ, ಯೋಜನಾ ನಿರ್ದೇಶಕ ಆನಂದ ಕುಲಕರ್ಣಿ, ಪೂಜಾ ಕೊಂಡಿ, ಕೀರ್ತಿ ವಾಲೆ, ಸದಸ್ಯತ್ವ ಅಭಿವೃದ್ಧಿ ನಿರ್ದೇಶಕಿ ಸ್ಫೂರ್ತಿ ಧನ್ನೂರ, ಮಾಧ್ಯಮ ಸಂಯೋಜಕಿ ಸಹನಾ ಪಾಟೀಲ, ರಾಘವೇಂದ್ರ ರಿಜೆಂತಲ್, ಮನೀಶ್ ಸಿಂಧೋಲ್, ಮಂಜುನಾಥ ಖೂಬಾ, ಮಾಜಿ ಕಾರ್ಯದರ್ಶಿ ಪೂಜಾ ಸ್ಯಾಮವೆಲ್, ಸೇರಿ ಸಿಲ್ವರ್ ಸ್ಟಾರ್ ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.



ನಮ್ಮ ನೆಲದ ಕಲೆ ಸಂಸ್ಕೃತಿಯನ್ನ ರಾಜ್ಯ ಹಾಗೂ ದೇಶದ ಜನರಿಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿ. ಈ ಹಿನ್ನೆಲೆಯಲ್ಲಿ ರೋಟರಿ ಸಿಲ್ವರ್ ಸ್ಟಾರ್ ವತಿಯಿಂದ ಬಿದರಿ ವೃತ್ತವನ್ನು ಸುಂದರೀಕರಣಗೊಳಿಸಲು ಹೊರಟಿರುವುದು ಶ್ಲಾಘನೀಯ ಎಂದರು.

**ಹಾವಶೆಟ್ಟಿ ಪಾಟೀಲ್**
**ರೋಟರಿ ಕಲ್ಯಾಣ ವಲಯದ ಗವರ್ನರ್**

# ಕಾನೂನು ಅರಿವು, ನೆರವು ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.29 : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿಕಲಚೇತನರ ಕ್ಷೇತ್ರದಲ್ಲಿ ಶ್ರಮಿಸುತ್ತಿರುವ ಸಂಘ ಸಂಸ್ಥೆಗಳು ಬೀದರ ಅವರುಗಳ ಸಂಯುಕ್ತಾಶ್ರಯದಲ್ಲಿಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೀದರನಲ್ಲಿ ಜಾಗೃತಿ ಅರಿವು ಸಪ್ತಾಹ 2025 ಹಾಗೂ ವಿಶ್ವ ಆರೈ-ಕೆದಾರರ ದಿನಾಚರಣೆ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಅವರು ಸಸಿಗೆ ನೀರು ಎರೆಯುವುದರ ಮೂಲಕ ಉದ್ಘಾಟಿಸಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳ ಬಗ್ಗೆ ಮತ್ತು ಜಾಗೃತಿ ಅರಿವು ಸಾಪ್ತಾಹ ಕುರಿತು ತಿಳಿಸಿದರು.

ಬೀದರ ಮಹಿಳಾ ಮತ್ತು ಮಕ್ಕಳ ಅಭಿವೃಧ್ಧಿ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ ಎಮ್ ಅವರು ಅಧ್ಯಕ್ಷತೆಯ ಭಾಷಣವನ್ನು ಮಾಡಿದ್ದರು. ಉಪನ್ಯಾಸಕರಾಗಿ ಜಿ .ಡಿ ಶ್ರೀಮಾಳೆ, ವಕೀಲರು ಬೀದರ ಅವರು ವಿಶ್ವ ಆರೈಕೆದಾರರ ಕುರಿತು ಮಾತನಾಡಿದ್ದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ ಸ್ವಾಮಿ, ಲೋಕಾಯುಕ್ತ ಇಲಾಖೆಯ ಡಿ .ಎಸ್.ಪಿ ಹಣಮಂತರಾಯ, ಬೀದರ ಜಿಲ್ಲಾ ನಿರುಪಣಾ ಅಧಿಕಾರಿ ಶ್ರೀಕಾಂತ, ರತ್ನ ಸುಭಾಷ, ಜಿಲ್ಲಾ ಅಂಗವಿಕಲ

ಕಲ್ಯಾಣ ಇಲಾಖೆ, ಬೀದರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂಧಿ ಆಕಾಶ ಸಜ್ಜನಶೇಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆ ಬೀದರ ಸಿಬ್ಬಂಧಿ ವರ್ಗದವರು ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೀದರ ಸಿಬ್ಬಂಧಿ ವರ್ಗದವರು ಹಾಗೂ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಹಾಗೂ ಆರೈಕೆದಾರರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದ 1,82,000 ಜನರಿಗೆ ದಂಡ: ವಿ.ಎಸ್.ಉಗ್ರಪ್ಪ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 29– ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನನಿಷೇಧಕಾಯಿದೆಯನ್ನು ಉಲ್ಲಂಘಿಸಿದ 1,82,000 ಜನರಿಗೆ ದಂಡ ವಿಧಿಸಿ ಎಚ್ಚರಿಕೆ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಅಧ್ಯಕ್ಷರಾದ ವಿ.ಎಸ್.ಉಗ್ರಪ್ಪ ಅವರು ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಕುರಿತು ಇತ್ತೀಚೆಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿಸುವ, ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ–2003 ಅಡಿಯಲ್ಲಿ ಏಪ್ರಿಲ್‌ನಿಂದ ಸೆಪ್ಟೆಂಬರ್–2025 ತಿಂಗಳವರೆಗೆ ಸುಮಾರು 1,82,000 ಜನರಿಗೆ ದಂಡ ವಿಧಿಸಲಾಗಿದೆ. ಶಾಲಾ/ಕಾಲೇಜುಗಳಲ್ಲಿ 100 ಮೀಟರ್ ವ್ಯಾಪ್ತಿಯಲ್ಲಿ 2470 ಜನರು ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದ್ದು ಅವರೆಲ್ಲರಿಗೂ ದಂಡ ವಿಧಿಸಲಾಗಿದೆ. ಇದರಿಂದಾಗಿ ಪ್ರತಿ ವರ್ಷ 45 ಲಕ್ಷ ರೂ.ದಂಡ ಸಂಗ್ರಹವಾಗುತ್ತಿದೆ. ಈ ಪೈಕಿ, 21 ವರ್ಷದೊಳಗಿನ ಯುವಜನರ ದತ್ತಾಂಶ ನೀಡಬೇಕು ಎಂದು ವಿ.ಎಸ್. ಉಗ್ರಪ್ಪ ಅವರು ಆರೋಗ್ಯ ಇಲಾಖೆಗೆ ಸೂಚನೆ ನೀಡಿದ್ದಾರೆ. 21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವೆಯಂತಹ ಮಾದಕ ವಸ್ತುಗಳ ಸೇವನೆಯಿಂದ ವ್ಯಸನ ಮುಕ್ತರನ್ನಾಗಿಸಲು ಮಾದಕವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಏಪ್ರಿಲ್ ನಿಂದ ಸೆಪ್ಟೆಂಬರ್–2025ರವರೆಗೆ ಸುಮಾರು 1 ಲಕ್ಷ ಯುವಜನರಿಗೆ ಸಮಾಲೋಚನೆ ನೀಡಲಾಗಿದೆ. ಆರೋಗ್ಯ ಇಲಾಖೆ ಮತ್ತು ನಿಮಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14,416 ಸಹಾಯವಾಣಿಯನ್ನು ತೆರೆಯಲಾಗಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಈ ಸುಧಾರಿಸಲು ಅಗತ್ಯ ಸಹಾಯ ಮತ್ತು ಸಮಾಲೋಚನೆ ಪಡೆಯಬಹುದಾಗಿದೆ.

ಅತ್ಯಾಚಾರ, ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ದೃಶ್ಯ ಮಾಧ್ಯಮಗಳು ನಿಯಂತ್ರಿಸಬೇಕು. ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಗಳಿಗೆ ಪ್ರಚಾರ ನೀಡುತ್ತಾರೋ ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ(ನಿಷೇಧ) ಕಾಯ್ದೆ–1986 (IndescentRepresentation ofWomen(Prohibition) Act-1986) ರಡಿಯಲ್ಲಿ ಸ್ವಯಂ ಪ್ರೇರಿತವಾಗಿ ಕ್ರಮ ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು ಅಥವಾ ಫಿಲ್ಮ್ ಆ್ಯಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ಈ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಯಿತು.

# ಶ್ರೀ ಭಕ್ತ ಕನಕದಾಸ ಜಯಂತಿ ಆಚರಣೆ ಸಿದ್ಧತೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು ಅಕ್ಟೋಬರ್ 29– ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಮಟ್ಟದಲ್ಲಿ ನವೆಂಬರ್ 8 ರಂದು ನಡೆಯಲಿರುವ ಶ್ರೀ ಭಕ್ತ ಕನಕದಾಸರ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಅಕ್ಟೋಬರ್ 29ರ ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಭಕ್ತ ಕನಕದಾಸರ ಜಯಂತಿಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ನಗರದ ರಂಗಮಂದಿರದವರೆಗೆ ಕನಕದಾಸರ ಭಾವಚಿತ್ರ ರಥಯಾತ್ರೆ ಮೆರವಣಿಗೆ ಹೊರಡಲಿದ್ದು, ಪ್ರಮುಖ ಮಾರ್ಗದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು. ಎಲ್ಲಾ ವೃತ್ತಗಳಲ್ಲಿ ದೀಪಾಲಂಕಾರ ಮಾಡಬೇಕು.

ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು ರಂಗಮಂದಿರದ ಸುತ್ತಲಿನ ಎಲ್ಲಾ ರಸ್ತೆಗಳಲ್ಲಿ ಮತ್ತು ಆವರಣದಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಕಾರ್ಯಕ್ರಮಕ್ಕೆ ಆಗಮಿಸಲಿರುವ ಸಾರ್ವಜನಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಕರ್ಯ ಕಲ್ಪಿಸಬೇಕು. ಮೆರವಣಿಗೆ ಮಾರ್ಗದಲ್ಲಿ ಪೊಲೀಸ್ ಭದ್ರತಾ ವ್ಯವಸ್ಥೆಯಾಗಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ, ಕಲಾವಿದರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮದ ಬಗ್ಗೆ ಚರ್ಚಿಸಲಾಯಿತು.

ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳು, ಹಾಸ್ಟೆಲ್‌ಗಳಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಕನಕದಾಸ ಜಯಂತಿ ಆಚರಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರಿಗೆ ವಿತರಿಸಬೇಕು ಎಂದು ತಿಳಿಸಿದರು.

ಈ ಜಯಂತ್ಯುತ್ಸವಕ್ಕೆ ಸಾರ್ವಜನಿಕರು, ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನಾಗೇಂದ್ರಪ್ಪ ಮತಮಾರಿ, ಹನುಮಂತಪ್ಪ ಜಾಲಿಬೆಂಚಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಬಿ ಬಸವರಾಜ, ಟಿ ನರಸಿಂಹ, ಕೆ ವೇಣುಗೋಪಾಲ, ಕೆ ಲಕ್ಷ್ಮಣಸ್ವಾಮಿ, ಗುರುಪ್ರತಾಪ, ಕೆ ನಾಗರಾಜ, ಎಸ್ ರಾಮಣ್ಣ, ಕೆ ರಮೇಶ ಮಾಡಲದಿನ್ನಿ, ಕೆ ತಿಮ್ಮಪ್ಪ ಮರ್ಚಟ್ಹಾಳ, ನಾಗರಾಜ ವಕೀಲರು, ಕೆ ಬಡೆಪ್ಪ ಮತಮಾರಿ, ಹನುಮಂತಪ್ಪ ವಕೀಲರು, ಶೇಖರ ವಾರದ, ಮಹಾದೇವಪ್ಪ ಮಿರ್ಜಾಪುರ, ಎಪಿಎಂಸಿ ಸದಸ್ಯರಾದ ಜಿ.ಹನುಮಂತ, ವಿವಿಧ ಇಲಾಖೆಯ ಅಧಿಕಾರಿಗಳಾದ ಜಿ.ಯು.ಹುಡೇದ, ಸದಾಶಿವಪ್ಪ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ನಿವೃತ್ತಿ ಅಂಗನವಾಡಿ ಕಾರ್ಯಕರ್ತರಿಗೆ ಗ್ರಾಚ್ಯುಟಿ ನೀಡುವಂತೆ ಒತ್ತಾಯಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಅ.29–ನಿವೃತ್ತಿಯಾದ ಎಲ್ಲಾ ಅಂಗನವಾಡಿ ಕಾರ್ಯಕತೆ–ರ್ಯಯರು ಹಾಗೂ ಸಹಾಯಕಿಯರಿಗೆ ಗ್ರಾಚ್ಯುಯಿಟಿಮೊತ್ತ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತರ ಸಂಘದ ಪದಾಧಿಕಾರಿಗಳು ಇಂದು ನಗರದ ಟಿಪ್ಪುಸುಲ್ತಾನ್ ಉದ್ಯಾನದಲ್ಲಿ ಪ್ರತಿಭಟನೆ ನಡೆಸಲಾಯಿತು. ಸುಮಾರು 20 ಸಾವಿರ ವಯೋವೃದ್ಧರು ಯಾವುದೇ ಆರ್ಥಿಕ ಆಸರೆ ಇಲ್ಲದೇ ಜೀವನ ನಡೆಸುತ್ತಿದ್ದಾರೆ. ಅವರೆಲ್ಲರಿಗೂ ಗ್ರಾಚ್ಯುಯಿಟಿ ನೀಡಬೇಕು. ಗ್ರಾಚ್ಯುಟಿ ಜಾರಿಗೊಳಿಸಬೇಕು ಎಂದು ಆಗ್ರಹಿಸಲಾಯಿತು. 2011–23 ಸಾಲಿನ ಬಳಿಕ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಪೈಕಿ ಈಗಾಗಲೇ ಬಹಳಷ್ಟು ಜನ ಮೃತಪಟ್ಟಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಸಂಬಳ ಹಾಗೂ ಇತರೆ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಕನಿಷ್ಠ ವೇತನಕ್ಕಿಂತ ಕಡಿಮೆ ಗೌರವ ಧನದಲ್ಲಿ ದುಡಿಸಿಕೊಳ್ಳುತ್ತಿದ್ದಾರೆ ಎಂದು ದೂರಿದರು. 1975 ಅಕ್ಟೋಬರ್ 2 ರಂದು ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಶಿಶುವಿನಂತೆ ಇತ್ತು. ಇಂಉ ಈ ಯೋಜನೆ ಹೆಮ್ಮರವಾಗಿ ಬೆಳೆದು ರಾಜ್ಯದಲ್ಲಿ ಸುಮಾರು 50 ಲಕ್ಷ ಫಲಾನುಭವಿಗಳಿದ್ದಾರೆ ಮಾತ್ರವಲ್ಲದೇ ಮಾನವಸಂಪನ್ಮೂಲಗಳ ಬೆಳವಣಿಗೆಯನ್ನು ಖಾತ್ರಿಪಡಿಸುವ ಯೋಜನೆಯಾಗಿ ಬೆಳೆದಿದೆ. ಇಂತಹ ಯೋಜನೆಯ ಅಭಿವೃದ್ಧಿಗೆ 150, 75 ರೂ.ಗಳಿಂದ ಹಿಡಿದು ಸಾವಿರಾರು ಜನ ಅಂಗನವಾಡಿ ಕಾರ್ಯಕತೆ–ರ್ಯಯರು ಮತ್ತು ಸಹಾಯಕಿಯರು ದುಡಿದಿದ್ದಾರೆ..ಈ ಆದೇಶ 2011 ರಿಂದ 2023 ಮಾರ್ಚ್ ತನಕ ನಿವೃತ್ತಿಯಾದ 10,311 ಅಂಗನವಾಡಿ ಕಾರ್ಯಕರ್ತೆಯರು, 11.980 ಅಂಗನವಾಡಿ ಸಹಾಯಕಿಯರಿಗೂ ಅನ್ವಯಿಸಬೇಕು. ಹಿಂದಿನವರೆಗೂ ಅನ್ವಯಿಸಬೇಕು ಎಂಬ ಸತತ ಒತ್ತಾಯಗಳಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಸುಮಾರು ರೂ. 183 ಕೋಟಿ ಅನುದಾನದ ಬಿಡುಗಡೆಗಾಗಿ ಹಣಕಾಸು ಇಲಾಖೆಗೆ ಕಳುಹಿಸಲಾಗಿದೆ. ಆದರೆ ಹಣಕಾಸು ಇಲಾಖೆ ಈ ಅನುದಾನ ಬಿಡುಗಡೆ ಮಾಡದೇ ಸತಾಯಿಸುತ್ತಿದೆ ಎಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಹೆಚ್ ಪದ್ಮಾ, ನರ್ಮದಾ, ಗಂಗಮ್ಮ, ಶಕುಂತಲಾ ಜಯಮ್ಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರಾಯಚೂರು ಜಿಲ್ಲೆಯಲ್ಲಿ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ

# ಅಚ್ಚುಕಟ್ಟಾಗಿ ನಡೆಯಲಿ: ಜಿಪಂ ಸಿಇಓ ಈಶ್ವರ ಕಾಂದೂ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 29 – ಸ್ಪರ್ಶಜ್ಞಾನವಿಲ್ಲದ ತಿಳಿಬಿಳಿ ತಾಮ್ರವರ್ಣದ ಮಚ್ಚೆಗಳು ದೇಹದ ಮೇಲೆ ಕಂಡುಬಂದಲ್ಲಿ ನಿರ್ಲಕ್ಷಿಸದೆ ಕೂಡಲೇ ವೈದ್ಯರ ಬಳಿ ಖಚಿತ ಪಡಿಸಿಕೊಳ್ಳಬೇಕು. ಈ ಬಗ್ಗೆ ಸಾರ್ವಜನಿಕರು ಹೆದರಬಾರದು. ಇದು ಸಂಪೂರ್ಣ ಗುಣಪಡಿಸಬಹುದಾಗಿದ್ದು, ಇದಕ್ಕಾಗಿ ಸರಕಾರದಿಂದ ಉಚಿತ ಚಿಕಿತ್ಸೆ ನೀಡಲಾಗುತ್ತದೆ. ಈ ಬಗ್ಗೆ ಜನತೆಗೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಪಂಚಾಯತ್‌ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ, ನವೆಂಬರ 03 ರಿಂದ 19ರವರೆಗೆ ಜಿಲ್ಲೆಯಾದ್ಯಂತ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ ಕುರಿತು ನಗರದ ಜಿಲ್ಲಾ ಪಂಚಾಯತಿಯ ಜಲನಿರ್ಮಲ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೈಕ್ರೋಬ್ಯಾಕ್ಟೀರಿಯಂ ಲೇಪ್ರೆ ಎಂಬ ಸೂಕ್ಷ್ಮಾಣುವಿನಿಂದ ಬರುವ ಚರ್ಮ ಮತ್ತು ನರದ ಖಾಯಿಲೆಯಾಗಿದೆ. ವ್ಯಕ್ತಿಯ ದೇಹದ ಮೇಲೆ ದಪ್ಪನಾದ ಅಥವಾ ಹೊಳೆಯುವ ಎಣ್ಣೆಯುಕ್ತ ಚರ್ಮ, ಗಂಟುಗಳು, ಕಣ್ಣಿನ ರೆಪ್ಪೆ ಮುಚ್ಚಲು ಸಾಧ್ಯವಾಗದಿರುವುದು, ಕೈ ಅಥವಾ ಕಾಲುಗಳಲ್ಲಿ ವಾಸಿಯಾಗದ ಹುಣ್ಣು, ಬೆರಳುಗಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವುದು ಅಥವಾ ಮರಗಟ್ಟುವಿಕೆ ಮುಂತಾದವುಗಳು ಕುಷ್ಠರೋಗದ ಲಕ್ಷಣಗಳಾಗಿದ್ದು, ರೋಗದ ತೀವ್ರತೆಯಾಧರಿಸಿ 6 ತಿಂಗಳು ಅಥವಾ 01 ವರ್ಷ ಅವಧಿಯ ಚಿಕಿತ್ಸೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿದೆ ಎಂಬುದನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಬೇಕೆಂದು ಸಿಇಓ ಅವರು ಸೂಚನೆ ನೀಡಿದರು.

ವ್ಯಾಪಕ ಪ್ರಚಾರ: ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ತಾಲೂಕಾಡಳಿತ, ಗ್ರಾಮ ಪಂಚಾಯತಗಳ ಸಹಯೋಗದಲ್ಲಿ ವ್ಯಾಪಕ ಪ್ರಚಾರ ಮಾಡಬೇಕು. ಶಾಲಾ ತರಗತಿಗೆ ತೊಂದರೆ–ಯಾಗದಂತೆ ಶಿಕ್ಷಣ ಇಲಾಖೆಯಿಂದ ಮಕ್ಕಳಿಗೆ ಜಾಗೃತಿ ಮೂಡಿಸಬೇಕು. ಅಂಗನವಾಡಿ ಶಿಕ್ಷಕಿಯರಿಂದಲು ಸಹ ಜಾಗೃತಿ ಮೂಡಿಸಬೇಕು. ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಕುಷ್ಠರೋಗದ ಬಗ್ಗೆ ಪ್ರಚಾರ ನಡೆಸಬೇಕು ಎಂದು ತಿಳಿಸಿದರು. ಸಭೆಯಲ್ಲಿ, ಕುಷ್ಠರೋಗ ಪತ್ತೆಹಚ್ಚುವ ಅಭಿಯಾನದ ಅಂಗವಾಗಿ ಜನಜಾಗೃತಿಯ ಭಿತ್ತಿಪತ್ರ ಬಿಡುಗಡೆ ನಡೆಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್. ಎನ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹ್ಮದ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಕುಮಾರ್, ತಾಲೂಕ ಆರೋಗ್ಯ ಅಧಿಕಾರಿ ಡಾ.ಬನದೇಶ್ ಗಬ್ಬೂರು, ಡಾ.ಫರಹಾ ನಸ್ರಿನ್ ಖಾಜಿ, ಡಾ.ಮಲ್ಲಿಕಾರ್ಜುನ ರೆಡ್ಡಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ರಂಗಸ್ವಾಮಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ದೊಡ್ಡಮನಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗುರುಪ್ರಸಾದ್ ಸೇರಿದಂತೆ ನವೋದಯ ವೈದ್ಯಕೀಯ ಕಾಲೇಜ್‌ನ ಚರ್ಮರೋಗ ತಜ್ಞ ವೈದ್ಯರು ಹಾಗೂ ಇನ್ನಿತರರು ಇದ್ದರು.

# ಸಿಜೆಐ ಮೇಲೆ ದಾಳಿ ಖಂಡಿಸಿ ನ.1 ಹೈದ್ರಾಬಾದ್ ನಲ್ಲಿ ಬೃಹತ್ ರ್‍ಯಾಲಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಅ.29– ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿ ಅವರ ಮೇಲಿನ ದಾಳಿಯನ್ನು ಖಂಡಿಸಿ ನ.1ರಂದು ಹಲೋ ಮಾದಿಗರೇ ಚಲೋ ಹೈದರಾಬಾದ್ ಹೋರಾಟದ ಮೂಲಕ ಸಂವಿಧಾನ ವಿರೋಧಿ ವಕೀಲ ರಾಕೇಶ ಕಿಶೋರ ಅವರ ಮೇಲೆ ದೇಶದ್ರೋಹಿ ಪ್ರಕರಣ ದಾಖಲಿಸುವಂತೆ ಆಗ್ರಹಿಸಿ ಬೃಹತ್ ರ್‍ಯಾಲಿ ನಡೆಯಲಿದೆ ಎಂದು ಮಾದಿಗ ದಂಡೋರ ತಾಲೂಕ ಅಧ್ಯಕ್ಷರಾದ ದುಳ್ಳಯ್ಯ ಗುಂಜಳ್ಳಿ ಅವರು ಹೇಳಿದರು. ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಮಂದಕೃಷ್ಣ ಮಾದಿಗ ಅವರ ನೇತೃತ್ವದಲ್ಲಿ ಹೈದ್ರಾಬಾದ್ ನಲ್ಲಿ ಬೃಹತ್ ಹೋರಾಟ ನಡೆಸಲಾಗುವುದು ಎಂದರು. ಈ ಹೋರಾಟದಲ್ಲಿ ಎರಡು ಲಕ್ಷ ಅಧಿಕ ಜನರು ಭಾಗವಹಿಸಲಿದ್ದಾರೆ ಎಂದರು. ಸಿಜೆಐ ಮೇಲಿನ ದಾಳಿ ನ್ಯಾಯಾಂಗ ಮತ್ತು ಪ್ರಜಾಪ್ರಭುತ್ವದ ಮೇಲಿನ ದಾಳಿಯಾಗಿದೆ. ಇದು ನ್ಯಾಯಾಂಗದ ಸ್ವಾತಂತ್ರ್ಯವನ್ನು ದುರ್ಬಲಗೊಳಿಸುವ ಗುರಿಯೊಂದಿಗೆ ನಡೆಸಿರುವ ಅತಿ ದೊಡ್ಡ ಪಿತೂರಿಯಾಗಿದೆ ಎಂದು ಅವರು ಆರೋಪಿಸಿದರು. ದಲಿತರು ಉನ್ನತ ಸ್ಥಾನಮಾನ ಅಲಂಕರಿಸಬಾರದು ಎಂಬ ಉದ್ದೇಶದ ಮನುವಾದಿಗಳು ಸಿಜೆಐ ಮೇಲೆ ನಡೆದಿರುವ ದಾಳಿಯಾಗಿದೆ. ಪ್ರಜಾಪ್ರಭುತ್ವ ಹೆಬ್ಬಾಗಿಲು ಸುಪ್ರೀಂ ಕೋರ್ಟ್ ಗೆ ರಕ್ಷಣೆ ಇಲ್ಲದಿದ್ದರೆ ಈ ದೇಶದ ಪರಿಸ್ಥಿತಿ ಹೇಗೆ ಎಂಬುದು ಗಂಭೀರವಾಗಿ ಚಿಂತನೆ ನಡೆಸಬೇಕಾಗಿದೆ ಎಂದರು.

ನ್ಯಾಯಮೂರ್ತಿಗಳ ಮೇಲೆ ನಡೆದ ದಾಳಿಯನ್ನು ಇಲ್ಲಿಯವರೆಗೆ ಕೇಂದ್ರ ಮಾನವ ಹಕ್ಕು ಆಯೋಗ ಹಾಗೂ ದೆಹಲಿಯ ಪೊಲೀಸ್ ಇಲಾಖೆಯಾಗಿರಬಹುದು, ನ್ಯಾಯಾಲಯದ ಪೊಲೀಸ್ ಸಿಬ್ಬಂದಿಗಳು ಸಹ ಸುಮೋಟೋ ಕೇಸ್ ದಾಖಲಿಸದೇ ನಿರ್ಲಕ್ಷ್ಯ ವಹಿಸಿರುವುದು ದೇಶದಲ್ಲಿ ನಮ್ಮಂತಹ ಬಡಪಾಯಿ ದಲಿತರಿಗೆ ನ್ಯಾಯ ಸಿಗುವುದಾದರೆ ಹೇಗೆ?

ಸಿಜೆಐ.ಮೇಲೆ ನಡೆದ ದಾಳಿಯನ್ನು ಭಾರತ ಸರ್ಕಾರ ಪ್ರತ್ಯೇಕ ತನಿಖೆ ಕೈಗೊಳ್ಳಬೇಕು. ರಾಕೇಶ್ ಕಿಶೋರ್ ವಕೀಲರ ಮೇಲೆ ದೇಶದ್ರೋಹಿ ಪ್ರಕರಣವನ್ನು ದಾಖಲಿಸಿ ಹಾಗೂ ದೇಶದಿಂದ ಗಡಿಪಾರು ಮಾಡಬೇಕು. ದೇಶದಲ್ಲಿ ನ್ಯಾಯಾಂಗ ವ್ಯವಸ್ಥೆಯಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ನ್ಯಾಯಾಂಗಕ್ಕೆ ಇನ್ನಷ್ಟು ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ರಂಜಿತ್ ದಂಡೋರ, ಸುರೇಶ ದುಗನೂರು, ಜಕ್ರಪ್ಪ ಹಂಚಿನಾಳ, ಗೋವಿಂದ ಈಟೇಕರ್, ನರಸಿಂಹಲು ಗಾಜರಾಳ ಸೇರಿದಂತೆ ಉಪಸ್ಥಿತರಿದ್ದರು.

# ಸಮುದಾಯದ ಭವನ, ಹೈ ಟೆಕ್ ಗ್ರಂಥಾಲಯಕ್ಕೆ ಮೂಲಭೂತ ಸೌಕರ್ಯ ಒದಗಿಸಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಅ.29–ನಗರದ ಹರಿಜನವಾಡದ ಸಮುದಾಯ ಭವನ ಮತ್ತು ನೂತನ ಹೈ ಟೆಕ್ ಗ್ರಂಥಾಲಯಕ್ಕೆ ಮೂಲಭೂತ ಸೌಕರ್ಯ ಒದಗಿಸಬೇಕು ಎಂದು ಆಗ್ರಹಿಸಿ ನವರತ್ನ ಯುವ ಸಂಘದ ಮುಖಂಡರು ಮಹಾನಗರ ಪಾಲಿಕೆ ಮಹಾಪೌರರು ನರಸಮ್ಮ ನರಸಿಂಹಲು ಮಾಡಗಿರಿ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ. ಹರಿಜನವಾಡದಲ್ಲಿ ಇರುವ ಹಳೆ ಸಮುದಾಯ ಭವನವು ಸುಮಾರು ವರ್ಷಗಳಿಂದ ಇಲ್ಲಿಯ ಜನರ ಸಭೆ ಸಮಾರಂಭಗಳಿಗೆ ತುಂಬಾ ಅನುಕೂಲಕರವಾಗಿದೆ. ಅದೇ ರೀತಿ ಆಶಾ ಕಾರ್ಯಕರ್ತರಿಗೆ ಮತ್ತು ಆರೋಗ್ಯ ಸಿಬ್ಬಂದಿಯವರಿಗೂ ಕೂಡಾ ಸಭೆಗಳನ್ನು ನಡೆಸಲು ಅನುಕೂಲವಾಗಿದೆ. ವಿಶೇಷವಾಗಿ ಗರ್ಭಿಣಿ ಸ್ತ್ರೀಯರಿಗೆ ಮತ್ತು ಬಾಣಂತಿಯರ ಕಾರ್ಯಕ್ರಮಗಳನ್ನು ಮಾಡಲು ಅನುಕೂಲವಾಗಿದೆ. ಅಂಬೇಡ್ಕರ್ ಜಯಂತಿ, ಬಾಬು ಜಗಜೀವನ್ ರಾಂ ಜಯಂತಿ ಮತ್ತು ಇನ್ನೂ ಹಲವಾರು ರಾಷ್ಟ್ರೀಯ ನಾಯಕರಗಳ ಜಯಂತಿ ಆಚರಣೆಗೆ ತುಂಬಾ ಅನುಕೂಲವಾಗಲಿದೆ ಎಂದರು. ಆದರೆ ಕೆಲವು ತಿಂಗಳುಗಳಿಂದ ಈ ಒಂದು ಸಮುದಾಯ ಭವನದ ಕಿಟಕಿ ರೀಪೇರಿ, ಬಾಗಿಲು, ಫ್ಯಾನ್ ರೀಪೇರಿ, ಸಭೆ ಮಾಡಲು ಕುರ್ಚಿ, ಮತ್ತು ಟೇಬಲ್‌ಗಳ ಸಮಸ್ಯೆ ಇದೆ. ಅದ್ದರಿಂದ ಈ ಎಲ್ಲಾ ಸಮಸ್ಯೆಗಳನ್ನು ಬಗಹರಿಸಿದರೆ ಈ ಒಂದು ಜನರಿಗೆ ತುಂಬಾ ಅನುಕೂಲವಾಗಲಿದೆ. ಅಲ್ಲದೆ, ಹರಿಜನವಾಡದ ಆರೋಗ್ಯ ಕೇಂದ್ರದ ಮುಂಭಾಗದಲ್ಲಿ ಇರುವ ನೂತನ ಹೈ ಟೆಕ್ ಗ್ರಂಥಾಲಯದಿಂದ ಅನೇಕ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ವಿದ್ಯಾಭ್ಯಾಸಕ್ಕೆ ಅಥವಾ ಜ್ಞಾನರ್ಜನೆಗೆ ತುಂಬಾ ಅನುಕೂಲವಾಗಿದೆ. ಸುಮಾರು ಪ್ರತಿ ದಿನ ನೂರಾರು ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರು ಬೆಳ್ಳಿಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆಯವರಿಗೆ ನಿರಂತರವಾಗಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದು ಅವರ ಗಮನಕ್ಕೆ ತರಲಾಯಿತು. ಮೋಟಾರ್ ಪೈಪ್ ಲೈನ್ ಸೇರಿ ಮೂಲಭೂತ ಸೌಕರ್ಯಗಳನ್ನು ಶೀಘ್ರದಲ್ಲಿ ಒದಗಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶರಣಪ್ಪ,ಎನ್. ನಾಗರಾಜ, ಮಾರುತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಯುವಜನೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.29–2025–26ನೇ ಸಾಲಿನ ಕಲಬುರಗಿ ಜಿಲ್ಲಾ ಮಟ್ಟದ ಯುವಜನೋತ್ಸವ, ವಿಜ್ಞಾನಮೇಳ ಕಾರ್ಯಕ್ರಮವನ್ನು ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ದೊಡ್ಡಪ್ಪ ಅಪ್ಪ ಪದವಿ ಪೂರ್ವ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ವಿನೋದ್ ಕುಮಾರ ಪತಂಗೆ, ಜಿಲ್ಲಾ ವಿಜ್ಞಾನ ಕೇಂದ್ರ ಅಧಿಕಾರಿ ಕೆ.ಎಂ.ಸುನಿಲ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸೋಮಶೇಖರ್ ವೈ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಕಿ ತರಬೇತಿದಾರ ಸಂಜಯ ಬಾಣದ, ಬಾಸ್ಕೆಟ್ ಬಾಲ್ ತರಬೇತಿದಾರರಾದ ಪ್ರವೀಣ್ ಕುಮಾರ್ ಪುಣೆ, ರಾಜು, ಕುಮಾರಿ ಮಮತಾ, ವಿಜ್ಞಾನ ಕೇಂದ್ರ ಎಲ್ಲ ಸಿಬ್ಬಂದಿ ವರ್ಗದವರು, ಬೇರೆ ಬೇರೆ ಶಾಲೆ, ಕಾಲೇಜುಗಳ 26 ತಂಡಗಳು ಭಾಗವಹಿಸಿದ್ದವು. ವಿಜೇತರಿಗೆ ಪ್ರಥಮ ಸ್ಥಾನ 5,000 ದ್ವಿತೀಯ ಸ್ಥಾನ 3000 ದ್ವಿತೀಯ ಸ್ಥಾನ 2000 ಇಲಾಖೆಯಿಂದ ಆನ್ಲೈನ್ ಮೂಲಕ ನೀಡಲಾಗುವುದು ಪ್ರಶಸ್ತಿ ಪತ್ರ ಟ್ರೋಫಿಗಳು ನೀಡಲಾಗುವುದು.




ಕರ್ನಾಟಕ ಸರ್ಕಾರ

(ಮೀನುಗಾರಿಕೆ ಇಲಾಖೆ)

ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರ ಕಛೇರಿ ಬಸವಕಲ್ಯಾಣ

ಇ-ಟೆಂಡರ್ ಪ್ರಕಟಣೆ ಸಂಖ್ಯೆ: BK/ALL/01/02/2025-26 ದಿನಾಂಕ: 27-10-2025

ಇ-ಟೆಂಡರ್ ಪ್ರಕಟಣೆ

ಬೀದರ ಜಿಲ್ಲೆಯ ಬಸವಕಲ್ಯಾಣ, ಹುಮನಾಬಾದ ಹಾಗೂ ಚಿಟ್ಟಗುಪ್ಪಾ ತಾಲ್ಲೂಕಿನ ಕೆಳಕಂಡ ಸರ್ಕಾರಿ ಜಲಸಂಪನ್ಮೂಲಗಳ (ಕೆರೆಗಳ, ಇತ್ಯಾದಿ) ಮೀನು ಪಾಶುವಾರು ಹಕ್ಕನ್ನು 2025-26 ನೇ ಮೀನುಗಾರಿಕೆ ಫಸಲಿ ವರ್ಷದಿಂದ 2029-30ನೇ ಮೀನುಗಾರಿಕೆ ಫಸಲಿ ವರ್ಷದವರೆಗೆ (ಅಂದರೆ ದಿನಾಂಕ 01/07/2025 ರಿಂದ 30/06/2030 ರವರೆಗೆ) ಒಟ್ಟು 5 (ಐದು) ವರ್ಷಗಳ ಅವಧಿಗೆ ಇ-ಟೆಂಡರು ಮೂಲಕ ಈ ಕೆಳಗೆ ನಮೂದಿಸಿರುವ ವೇಳಾಪಟ್ಟಿಯನ್ವಯ ಸರ್ಕಾರದ ಮೀನುಗಾರಿಕೆ ಇಲಾಖೆಯ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟಂತೆ ವಿಲೇವಾರಿ ಮಾಡಲು ಕರ್ನಾಟಕ ಸರ್ಕಾರ ಇ-ಸಂಗ್ರಹಣಾ ಪೋರ್ಟಲ್ (https://kppp.karnataka.gov.in) ಮೂಲಕ ಟೆಂಡರ್ ಆಹ್ವಾನಿಸಲಾಗಿದೆ..

ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲು ಪ್ರಸ್ತಾಪಿಸಿರುವ ಜಲಸಂಪನ್ಮೂಲಗಳ ವಿವರಗಳು

| ಕ್ರ. ಸಂ | ಇ-ಟೆಂಡರ್ ನಂಬರ್ | ಕೆರೆ/ ಜಲಸಂಪನ್ಮೂಲದ ಹೆಸರು | ಗ್ರಾಮದ ಹೆಸರು | ಜಲ ವಿಸ್ತೀರ್ಣ / ಅಚ್ಚುಕಟ್ಟು ಪ್ರದೇಶ ಹೆಕ್ಟೇರ್ ಗಳಲ್ಲಿ | ಭದ್ರತಾ ಠೇವಣಿ (ರೂಗಳಲ್ಲಿ) | ಸರ್ಕಾರಿ ಸವಾಲ್ ಮೊತ್ತ (ರೂಗಳಲ್ಲಿ) | ನಿಗದಿ ಪಡಿಸಿದ ಮೀಸಲಾತಿ |
|---|---|---|---|---|---|---|---|
| 1 | DOF/2025-26/SE3815 | ಬೇಟ್ಟಬಾಲಕುಂದಾ ಕೆರೆ | ಬೇಟ್ಟಬಾಲಕುದಾ | 141.58/1060 | 3185/- | 26168/- | ಸಾಮಾನ್ಯ |
| 2 | DOF/2025-26/SE3816 | ತ್ರಿಪುರಾಂತ ಕೆರೆ | ತ್ರಿಪುರಾಂತ | 90.00 / 144 | 2025/- | 16634/- | ಸಾಮಾನ್ಯ |
| 3 | DOF/2025-26/SE3817 | ಮುಡಬಿ ಕೆರೆ | ಮುಡಬಿ | 19.00 / 150 | 428/- | 2500/- | ಸಾಮಾನ್ಯ |
| 4 | DOF/2025-26/SE3818 | ಫಾತಿಮ್ಮಾಪೂರ ಕೆರೆ | ಫಾತಿಮ್ಮಾಪೂರ | 18.49 / 167 | 416/- | 2774/- | ಪರಿಶಿಷ್ಟ ಪಂಗಡ |
| 5 | DOF/2025-26/SE3819 | ಬೇಳಕೇರಾ ಕೆರೆ | ಬೇಳಕೇರಾ | 37.00/ 278 | 832/- | 3445/- | ಪರಿಶಿಷ್ಟ ಪಂಗಡ |
| 6 | DOF/2025-26/SE3820 | ಚೇನಕೇರಾ ಕೆರೆ | ಚೇನಕೇರಾ | 03.47/ 71 | 78/- | 520/- | ಸಾಮಾನ್ಯ |
| 7 | DOF/2025-26/SE3821 | ಹಂದ್ರಾಳ (ಆರ್) ಕೆರೆ | ಹಂದ್ರಾಳ (ಆರ್) | 06.00/ 40 | 135/- | 900/- | ಸಾಮಾನ್ಯ |
| 8 | DOF/2025-26/SE3822 | ಕೋಹಿನೂರು ಕೆರೆ | ಕೋಹಿನೂರು | 15.12/ 120 | 340/- | 18117/- | ಸಾಮಾನ್ಯ |
| 9 | DOF/2025-26/SE3823 | ಅಟ್ಟೂರು ಕೆರೆ | ಅಟ್ಟೂರು | 9.76/ 76 | 220/- | 1296/- | ಸಾಮಾನ್ಯ |
| 10 | DOF/2025-26/SE3824 | ಮೀನಕೇರಾ ಕೆರೆ | ಮೀನಕೇರಾ | 19.00/ 71 | 427/- | 2850/- | ಸಾಮಾನ್ಯ |
| 11 | DOF/2025-26/SE3825 | ಬನ್ನಳ್ಳಿ ಕೆರೆ | ಬನ್ನಳ್ಳಿ | 8.74/ 154 | 197/- | 1311/- | ಸಾಮಾನ್ಯ |

ಇ-ಟೆಂಡರ್ ವೇಳಾಪಟ್ಟಿ

| | |
|---|---|
| ಇ-ಟೆಂಡರ್ ದಸ್ತಾವೇಜು ಪಡೆಯುವ ದಿನಾಂಕ: | 27-10-2025 |
| ಇ-ಟೆಂಡರ್ ಬಿಡ್ ಸಲ್ಲಿಕೆ ಅಂತಿಮ ದಿನಾಂಕ & ಸಮಯ | 10-11-2025 17:30:00 |
| ತಾಂತ್ರಿಕ ಬಿಡ್ ತೆರೆಯುವ ದಿನಾಂಕ & ಸಮಯ: ಸ್ಥಳ: | 12-11-2025 11:00:00 ಮೀ.ಸ.ನಿ. ಕಚೇರಿ ಬಸವಕಲ್ಯಾಣ |
| ಆರ್ಥಿಕ ಬಿಡ್ ತೆರೆಯುವ ದಿನಾಂಕ & ಸಮಯ: ಸ್ಥಳ: | 14-11-2025 11:00:00 ಮೀ.ಸ.ನಿ. ಕಚೇರಿ ಬಸವಕಲ್ಯಾಣ |
| ಇ-ಟೆಂಡರ್ ಪೂರ್ವ ಸಭೆಯ ದಿನಾಂಕ & ಸಮಯ : ಸ್ಥಳ | 03-11-2025 11:00:00 ಮೀ.ಸ.ನಿ. ಕಚೇರಿ ಬಸವಕಲ್ಯಾಣ |

ಹೆಚ್ಚಿನ ಮಾಹಿತಿಗಾಗಿ (https:// kppp.karnataka.gov.in) ಇ-ಸಂಗ್ರಹಣಾ ಪೋರ್ಟಲ್ ಭೇಟಿ ಮಾಡುವುದು.

ಸಹಿ/-

ಮೀನುಗಾರಿಕೆ ಸಹಾಯಕ ನಿರ್ದೇಶಕರು

ಬಸವಕಲ್ಯಾಣ ತಾಲ್ಲೂಕು, ಬೀದರ ಜಿಲ್ಲೆ

## ಕಾರ್ಮಿಕ ಇಲಾಖೆಯಿಂದ ವಿವಿಧೆಡೆ ದಾಳಿ: ಮೂವರು ಬಾಲಕಾರ್ಮಿಕ ಮಕ್ಕಳ ರಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಬಳ್ಳಾರಿ ನಗರದ ತಾಳೂರು ರಸ್ತೆ, ರೇಣುಕ ನಗರ, ದುರ್ಗಮ್ಮ ಗುಡಿ ಹತ್ತಿರದ ವಿವಿಧ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಟಾಸ್ಕ್ ಪೋರ್ಸ್ ಸಮಿತಿ ಮೂಲಕ ಅನಿರೀಕ್ಷಿತ ದಾಳಿ ನಡೆಸಿ ಕೆಲಸ ನಿರ್ವಹಿಸುತ್ತಿದ್ದ 03 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ನಡೆಸಲಾಗಿದೆ.

ವಶಕ್ಕೆ ಪಡೆದುಕೊಂಡ ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದು ನಂತರ ಶಿಕ್ಷಣ ಇಲಾಖೆಗೆ ಒಪ್ಪಿಸಲಾಯಿತು. ಇದೇ ವೇಳೆ ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ಕುರಿತು ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಮೌನೇಶ್ ಅವರು ತಿಳಿಸಿದ್ದಾರೆ.

ಟಾಸ್ಕ್ ಪೋರ್ಸ್ ಸಮಿತಿಯಲ್ಲಿ ಬಳ್ಳಾರಿಯ 1ನೇ ವೃತ್ತದ ಕಾರ್ಮಿಕ ನಿರೀಕ್ಷಕ ರಮೇಶ್, ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿ ಸೈಯದ್ ಭಾಷಾ, ಆರೋಗ್ಯ ಇಲಾಖೆಯ ಮುಸ್ತಾಕ್ ಅಹಮದ್, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳಾದ ಚಂದ್ರಕಲಾ, ಕಿರಣ್ ಕುಮಾರ್, ರೀಚ್ ಸಂಸ್ಥೆಯ ಸಂಯೋಜಿಕಿ ಲಕ್ಷ್ಮೀ ದೇವಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಡಿ.01 ರಂದು ಸಾರ್ವಜನಿಕ ಪರಿಸರ ಆಲಿಕೆ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಸಂಡೂರು ತಾಲ್ಲೂಕಿನ ತಾರಾನಗರ ಗ್ರಾಮದ ಒಟ್ಟು 41.729 ಹೆಕ್ಟೇರ್ ಅರಣ್ಯ ಪ್ರದೇಶದಲ್ಲಿ ವಾರ್ಷಿಕ 25 ಮಿಲಿಯನ್ ಟನ್ ಸಾಮರ್ಥ್ಯದ (ಖನಿಜ ಥ್ರೋಪುಲ್) ಹೈ ಸಿಲಿಸಿಯಸ್ ಕಬ್ಬಿಣದ ಅದಿರು (ಬಿ.ಹೆಚ್.ಕ್ಯೂ) ಅನ್ನು ಸಂಸ್ಕರಿಸುವ ಮೂಲಕ ವಾರ್ಷಿಕ 10 ಮಿಲಿಯನ್ ಟನ್ ಸಂಸ್ಕರಿಸಿದ ಕಬ್ಬಿಣದ ಅದಿರನ್ನು ಉತ್ಪಾದಿಸುವ ಸಾಮರ್ಥ್ಯದೊಂದಿಗೆ ಗ್ರೀನ್–ಫೀಲ್ಡ್ ಹೈ ಸೊಲಿಸಿಯಸ್ ಕಬ್ಬಿಣದ ಅದಿರು (ಬಿ.ಹೆಚ್.ಕ್ಯೂ) ಸಂಸ್ಕಾರಣಾ ಘಟಕ ಮತ್ತು ಸಂಬಂಧಿತ ಮೂಲಸೌಕರ್ಯವನ್ನು ಸ್ಥಾಪಿಸಲು ಯೋಜನಾ ಪ್ರಸ್ತಾವನೆ ಸಲ್ಲಿಸಿದ್ದು, ಇದರ ಸಂಬಂಧ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಡಿ.01 ರಂದು ಬೆಳಿಗ್ಗೆ 11 ಗಂಟೆಗೆ ಸಂಡೂರು ತಾಲ್ಲೂಕಿನ ತಾರಾನಗರ ಗ್ರಾಮದ ಸರ್ವೆ ನಂ 6/4, 46/2, 7/4, 47/ಬಿ, 47/ಸಿ, 47/ಡಿ ಯೋಜನಾ ಪ್ರದೇಶದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಲು ತೀರ್ಮಾನಿಸಲಾಗಿದೆ.

ಗ್ರಾಮಸ್ಥರು, ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪ್ಪು ಅವರ ಸಾಮಾಜಿಕ ಕಾರ್ಯಗಳು ಯುವಕರಿಗೆ ಸ್ಫೂರ್ತಿ : ವಿಶ್ವನಾಥ ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಕೊಪ್ಪಳ ಮಾರ್ಟ ಆವರಣದಲ್ಲಿ ಅಪ್ಪು ಅಭಿಮಾನಿ ಬಳಗ ಹಾಗೂ ಅಪ್ಪು ಅಜರಾಮರ ಸೇವಾ ಸಂಸ್ಥೆ ವತಿಯಿಂದ ಕರ್ನಾಟಕ ರತ್ನ ದಿ.ಪುನೀತ್ ರಾಜಕುಮಾರ ಅವರ 4ನೇ ವರ್ಷದ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಅಲಂಕೃತ ಪುನೀತ್ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಪುಷ್ಪನಮನದ ಮೂಲಕ ಗೌರವಿಸಿ ಮಾತನಾಡಿದ ವಿಶ್ವನಾಥ ಹಿರೇಮಠ ಅಪ್ಪು ಅವರು ಅಗಲಿಲ್ಲ,ಅವರು ಮಾಡಿದ ಸಾಮಾಜಿಕ ಕಾರ್ಯಗಳಿಂದ ಜೀವಂತವಾಗಿದ್ದಾರೆ.ಸಿನೆಮಾ ಅಷ್ಟೇ ಅಲ್ಲದೆ ಸಾಮಾಜಿಕ ಕ್ಷೇತ್ರದಲ್ಲೂ ಉತ್ತಮ ಸೇವೆ ಮಾಡಿದ ಅಪ್ಪು ಅವರ ಸಾಮಾಜಿಕ ಕಾರ್ಯಗಳು ನಮಗೆ ಸ್ಫೂರ್ತಿಯಾಗಿವೆ ಎಂದರು.

ಇದೇ ವೇಳೆ ವೆಂಕಟೇಶ ಗಂಗಾವತಿ, ಪ್ರಿಯದರ್ಶಿನಿ ಮುಂಡರಗಿಮಠ, ಮಂಜುನಾಥ ಈಡಿಗೇರ,ಸಿದ್ದು,ಚಂದ್ರು ಮತ್ತು ಸರ್ವ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಅಪ್ಪು ಅಭಿಮಾನಿಗಳು ಉಪಸ್ಥಿತಿ ಇದ್ದರು.

## ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 29 ಖರೀದಿ ಕೇಂದ್ರ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅಕ್ಟೋಬರ್ 29–2025–26ನೇ ಸಾಲಿನ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಯಾದಗಿರಿ ಜಿಲ್ಲೆಯ ರೈತ–ರಿಂದ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಹತ್ತಿ ಮದ್ಯಮ ಎಳೆ ಪ್ರತಿ ಕ್ವಿಂಟಾಲಗೆ 7,710 ರೂ. ಗಳ ಹಾಗೂ ಉದ್ದನೆ ಎಳ 8110 ರೂ.ಗಳಂತೆ ಪ್ರತಿ ಎಕರೆಗೆ 8.5 ಕ್ವಿಂಟಾಲ ಖರೀದಿಸಲು ಭಾರತೀಯ ಹತ್ತಿ ನಿಗಮ ಹುಬ್ಬಳ್ಳಿ ಖರೀದಿ ಏಜೇನ್ಸಿಯಾಗಿ ಯಾದಗಿರಿ ಜಿಲ್ಲೆಗೆ ನೇಮಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇತ್ತೀಚಿನ ನಡೆದ ಯಾದಗಿರಿ ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿ ಅಧ್ಯಕ್ಷ ವಹಿಸಿ ಅವರು ಮಾತನಾಡಿದರು.

ಪ್ರಸ್ತುತ ಸಾಲಿನಲ್ಲಿ ರೈತರು ಅಂತರ್ಜಾಲದ ಪ್ಲೇ ಸ್ಟೋರ್‌ನಲ್ಲಿ ಕೀಸಾನ್ ಕಪಾಸ್ ಅಪ್ಲಿಕೇಶನ್ ಅನ್ನು ರೈತರು ಡೌನಲೋಡ್ ಮಾಡಿಕೊಂಡು ತಮ್ಮ ಹೆಸರು ಆಧಾರ್ ಹೆಸರು, ಪಹಣೆಯಲ್ಲಿ ಮತ್ತು ಭಿತ್ತನೆ ಕ್ಷೇತ್ರ (ನಿಖರವಾಗಿರುವಂತೆ) ನಮೂದಿಸಿ ದಾಖಲೆಗಳನ್ನು ಲಗತ್ತಿಸಿ, ಅಪ್ಲೋಡ್ ಮಾಡಬೇಕು, ಒಟ್ಟು 29 ಖರೀದಿ ಕೇಂದ್ರಗಳನ್ನು ಗುರುತಿಸಲಾಗಿರುತ್ತದೆ. ರೈತರು ತಾವು ಬೆಳೆದ ಹತ್ತಿಯನ್ನು ಭಾರತೀಯ ಹತ್ತಿ ನಿಗಮದ ಕೇಂದ್ರಗಳಲ್ಲಿ ಮಾರಾಟ ಮಾಡಿ ಲಾಭ ಪಡೆಯಲು ಜಿಲ್ಲೆಯ ರೈತರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ತಂಬಾಕು ನಿಯಂತ್ರಣ ಕೋಶ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಕಟ್ಟುನಿಟ್ಟಿನ ಸೂಚನೆ

# ಅನಧೀಕೃತ ತಂಬಾಕು ಉತ್ಪನ್ನ ಮಾರಾಟ ಮಾಡುವವರ ಮೇಲೆ ಕ್ರಮ ಜರುಗಿಸಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಜಿಲ್ಲೆಯಲ್ಲಿ ಪರವಾನಿಗೆ ಪಡೆ–ಯದೇ ಅನಧಿಕೃತವಾಗಿ ತಂಬಾಕು ಉತ್ಪನ್ನ ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ಬುಧವಾರ, ನಗರದ ಜಿಲ್ಲಾಧಿಕಾರಿಗಳ ಹಳೆಯ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶ ಅಧೀನದ ವ್ಯಾಪ್ತಿಯಲ್ಲಿ ಬರುವ ಅಂಗಡಿ, ಹೋಟೆಲ್, ವಾಣಿಜ್ಯ ಮಳಿಗೆಗಳಲ್ಲಿ ತಂಬಾಕು ಉತ್ಪನ್ನಗಳ ವ್ಯಾಪಾರಕ್ಕೆ ಸರ್ಕಾರದ ಮಾನದಂಡಗಳಡಿ ಪರವಾನಿಗೆ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಪ್ರಾಥಮಿಕ, ಪ್ರೌಢ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಶಾಲಾ–ಕಾಲೇಜುಗಳನ್ನು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ಘೋಷಿಸಿ ತ್ವರಿತವಾಗಿ ಟಿಒಎಫ್‌ಇಐ ಆಪ್ ನಲ್ಲಿ ನಮೂದಿಸಬೇಕು. ಇಲ್ಲವಾದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಶಾಲಾ–ಕಾಲೇಜು ಮಕ್ಕಳು ಒಂದು ಬಾರಿ ತಂಬಾಕು ಉತ್ಪನ್ನಗಳಿಗೆ ದಾಸರಾದರೆ, ಅದರಿಂದ ಹೊರಬರುವುದು ಕಷ್ಟಕರ. ಹಾಗಾಗಿ ಅಧಿಕಾರಿಗಳು ಹೆಚ್ಚಾಗಿ ಶಾಲಾ–ಕಾಲೇಜುಗಳಲ್ಲಿ, ಗ್ರಾಮೀಣ ಕ್ಷೇತ್ರಗಳಲ್ಲಿ ಮತ್ತು ಸಮುದಾಯಗಳಲ್ಲಿ ತಂಬಾಕು ಉತ್ಪನ್ನಗಳಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿನ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಕಡ್ಡಾಯವಾಗಿ ಧೂಮಪಾನ ವಲಯ ಸ್ಥಾಪಿಸಿ, ಅವುಗಳ ಉಪಯೋಗ, ಕ್ರಮಬದ್ಧತೆ ಕುರಿತು ಅಬಕಾರಿ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸುತ್ತಿರಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಬಸ್ ನಿಲ್ದಾಣಗಳಲ್ಲಿ ತಂಬಾಕು ಸೇವನೆ ಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲು ಕ್ರಮವಹಿಸಬೇಕು. ನಿಲ್ದಾಣ ಅಂದಗೆಡಿಸುವ, ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನ ಸೇವಿಸಿ, ಎಲ್ಲೆಂದರಲ್ಲಿ ಉಗುಳುವವರ ಮೇಲೆ ದಂಡ ವಿಧಿಸಬೇಕು ಎಂದು ಕಕರಾರಸಾ ಸಂಸ್ಥೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, ಜಿಲ್ಲೆಯಲ್ಲಿ 2025ರ ಜುಲೈ ನಿಂದ ಸೆಪ್ಟೆಂಬರ್ ವರೆಗಿನ ಒಟ್ಟು 617 ಕ್ಷಯರೋಗಿಗಳಲ್ಲಿ 86 ತಂಬಾಕು ವ್ಯಸನಿಗಳಾಗಿದ್ದು, ಎಲ್ಲರನ್ನು ತಂಬಾಕು ವ್ಯಸನಮುಕ್ತ ಕೇಂದ್ರದಲ್ಲಿ ದಾಖಲಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ತಂಬಾಕು ವ್ಯಸನದಿಂದ ಮುಕ್ತರಾಗಿ ಬರುವ ವ್ಯಕ್ತಿಗಳಿಂದ ಅದರಿಂದಾಗುವ ಪರಿಣಾಮ ಕುರಿತು ಸಾರ್ವಜನಿಕರಿಗೆ ತಿಳಿಯಪಡಿಸಲು ಮತ್ತು ಅದರ ಜೊತೆಗೆ ಅಧಿಕಾರಿಗಳ ನಿರ್ದೇಶನ ಒಳಗೊಂಡ ವಿಡಿಯೋ ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚಿನ ಪ್ರಚಾರ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ತಂಬಾಕು ಉತ್ಪನ್ನಗಳಿಂದ ದೂರವಿರುತ್ತೇನೆ ಎಂಬ ಪ್ರತಿಜ್ಞಾವಿಧಿ ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಇದರಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಸಹ ಭಾಗವಹಿಸುವಂತೆ ಕ್ರಮವಹಿಸಬೇಕು ಎಂದು ಹೇಳಿದರು.

ಅಧಿಕಾರಿಗಳು ಹೆಚ್ಚಾಗಿ ಕ್ಷೇತ್ರ ಮಟ್ಟದಲ್ಲಿ ಸಂಚರಿಸಿದಾಗ ಮಾತ್ರ ತಂಬಾಕು ಬಳಕೆ ಮೇಲೆ ಕಡಿವಾಣ ಹಾಕಲು ಸಾಧ್ಯವಾಗುತ್ತದೆ ಎಂದು ಅಧಿಕಾರಿಗಳಿಗೆ ಹೇಳಿದರು.

ಇದೇ ವೇಳೆ ಜಿಲ್ಲೆಯಲ್ಲಿ ಡಿ.06 ರ ವರೆಗೆ ನಡೆಯುವ 'ತಂಬಾಕು ಮುಕ್ತ ಯುವ ಅಭಿಯಾನ 3.0' ಗೆ ಚಾಲನೆ ನೀಡಲಾಯಿತು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಜಿಲ್ಲಾ ತಂಬಾಕು ಸಲಹೆಗಾರ ಪ್ರಶಾಂತ್ ಸೇರಿದಂತೆ ಡಿಡಿಪಿಐ, ಡಿಡಿಪಿಯು, ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

## ಕರ್ನಾಟಕ ಮಾಧ್ಯಮ ಅಕಾಡೆಮಿ: ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸಿದೆ.

ಪತ್ರಿಕೋದ್ಯಮದಲ್ಲಿ ಸ್ನಾತ–ಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

2021–2022, 2022–23, 2023–24 ಹಾಗೂ 2024–2025ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಒಟ್ಟು 21 ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಒದಗಿಸಲಾಗುವುದು.

ವಿವರ: ಮಹಿಳಾ ಆಯವ್ಯಯದಡಿ 08 ಮಹಿಳೆಯರು, ಪರಿಶಿಷ್ಟ ಜಾತಿ ಉಪಯೋಜನೆಯಡಿ 09 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶ ಕಲ್ಪಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನ್‌ಶಿಪ್ ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್‌ಶಿಪ್‌ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿ ಪಡಿಸುತ್ತದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20,000/– ರೂ. ಸ್ಟೈಪೆಂಡ್ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವವಿವರದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/Qth3f5FjMHXSxTB68 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಅಗಿರುತ್ತದೆ.

ಅರ್ಜಿ ಸಲ್ಲಿಸಲು ನವೆಂಬರ್ 15 ಕೊನೆಯ ದಿನವಾಗಿದೆ ಎಂದು ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ವ ಆರೈಕೆದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಹೊಸಮನೆ ಹೇಳಿಕೆ

## ವಿಶೇಷ ಚೇತನರ, ಹಿರಿಯರ ಆರೈಕೆ ಸೇವೆ ವಿಶೇಷ ಸೇವೆಯಾಗಿದೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಪ್ರತಿಯೊಬ್ಬರ ಜೀವನದಲ್ಲಿ ಆರೈಕೆದಾರರ ಪಾತ್ರ ಮಹತ್ವದಾಗಿದ್ದು, ವಿಶೇಷ ಚೇತನರ ಹಾಗೂ ಹಿರಿಯರನ್ನು ಆರೈಕೆ ಮಾಡುವುದು ವಿಶೇಷ ಸೇವೆಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಹಾಗೂ ಅನುಗ್ರಹ ವಿಶೇಷ ಮಕ್ಕಳ ವಸತಿ ರಹಿತ ಶಾಲೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಅನುಗ್ರಹ ವಿಶೇಷ ಮಕ್ಕಳ ವಸತಿ ರಹಿತ ಶಾಲೆಯಲ್ಲಿ ಬುಧವಾರ ಆಯೋಜಿಸಿದ್ದ ವಿಶ್ವ ಆರೈಕೆದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶೇಷ ಚೇತನರ ಸೇವೆ ಮಾಡುವ ಅವಕಾಶ ಎಲ್ಲರಿಗೂ ದೊರೆಯುವುದಿಲ್ಲ. ಅವರ ಸೇವೆ ಮಾಡುವಂತಹ ಪೋಷಕರು, ಶಿಕ್ಷಕರು, ಆಯಾಗಳು ದೇವರ ಸಮಾನ ಎಂದು ಆರೈಕೆದಾರರ ಸೇವೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಧರ್ಮ ಕ್ಷೇತ್ರದ ಕೋಶಾಧಿಕಾರಿಗಳಾದ ಫಧಾರ್ ಐವನ್ ಫಿಂಟೊ, ಚೆ–ಂಗಾರೆಡ್ಡಿ, ಬುದ್ದಿಮಾಂದ್ಯ ಮಕ್ಕಳ ವಸತಿಯುತ ಶಾಲೆಯ ಗುರುಮೂರ್ತಿ, ಅನುಗ್ರಹ ಬುದ್ದಿಮಾಂದ್ಯ ಮಕ್ಕಳ ವಸತಿ ರಹಿತ ಶಾಲೆಯ ಮುಖ್ಯ ಗುರುಗಳಾದ ಸಿಸ್ಟರ್ ಪ್ರಜ್ಞಾ, ಅನುಗ್ರಹ ಶಾಲೆಯ ಹಿರಿಯ ಶಿಕ್ಷಕಿ ಸಿಸ್ಟರ್ ಮರ್ಲಿನ್, ಶಿಕ್ಷಕರಾದ ವಸಂತ್ ಕುಮಾರ್, ಆರೈಕೆದಾರರ ಪರವಾಗಿ ಪೋಷಕರಾದ ಶಿವರಾಮ್ ಹಾಗೂ ಇತರರು ಉಪಸ್ಥಿತರಿದ್ದರು.

## ಬಳ್ಳಾರಿ: ಎಲ್ಲಾ ಚಿತ್ರಮಂದಿರಗಳಲ್ಲಿ ಒಂದು ವಾರಗಳ ಕಾಲ ಕನ್ನಡ ಚಿತ್ರಗಳ ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.29–ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯ ಎಲ್ಲಾ ಖಾಯಂ, ಅರೆ ಖಾಯಂ, ತಾತ್ಕಾಲಿಕ ಚಿತ್ರಮಂದಿರಗಳಲ್ಲಿ ಮತ್ತು ವಿಡೀಯೋ ಚಿತ್ರಮಂದಿರಗಳಲ್ಲಿ ಕಡ್ಡಾಯವಾಗಿ ನ.01 ರಿಂದ 07 ರ ವರೆಗೆ ಒಂದು ವಾರಗಳ ಕಾಲ ಕನ್ನಡ ಚಲನಚಿತ್ರಗಳನ್ನು ಜಿಲ್ಲೆಯ ಎಲ್ಲಾ ಚಲನಚಿತ್ರ ಮಂದಿರಗಳ ಮಾಲೀಕರು ಪ್ರದರ್ಶಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ತಿಳಿಸಿದ್ದಾರೆ. ಒಂದು ವೇಳೆ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸದೇ ಇದ್ದಲ್ಲಿ ಚಲನಚಿತ್ರ ಮಂದಿರಗಳ ಪರವಾನಿಗೆಯನ್ನು ನವೀಕರಿಸುವುದಿಲ್ಲ. ಅ.31 ಮತ್ತು ನ.01 ರಂದು ಚಿತ್ರಮಂದಿರಗಳ ಮೇಲೆ ಕಡ್ಡಾಯವಾಗಿ ದೀಪಾಲಂಕಾರ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

## ಸಿರುಗುಪ್ಪ: ಅ.30 ರಂದು ಸಾಮಾನ್ಯ ಸಭೆ

ಬಳ್ಳಾರಿ,ಅ.29–ಸಿರುಗುಪ್ಪ ನಗರಸಭೆಯ ಸಾಮಾನ್ಯ ಸಭೆಯನ್ನು ಅ.30 ರಂದು ಬೆಳಿಗ್ಗೆ 11 ಗಂಟೆಗೆ ಸಿರುಗುಪ್ಪ ನಗರಸಭೆ ಅಧ್ಯಕ್ಷರಾದ ಬಿ.ರೇಣುಕಮ್ಮ ಅವರ ಅಧ್ಯಕ್ಷತೆಯಲ್ಲಿ ನಗರಸಭೆಯ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

### ಎನ್.ಎಚ್.ಎಂ. ಗುತ್ತಿಗೆ ನೇಮಕಾತಿ: ಪರಿಶಿಷ್ಟ ಜಾತಿ ಒಳ ಮೀಸಲಾತಿಯ ಅನ್ವಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.29–ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಆಸ್ಪತ್ರೆ, ತಾಲೂಕಾ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಿವಿಧ ಹುದ್ದೆಗಳನ್ನು ಮೆರಿಟ್–ಕಂ–ರೋಸ್ಟರ್ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈಗಾಗಲೆ ಅರ್ಜಿ ಆಹ್ವಾನಿಸಲಾಗಿದ್ದು, ಸರ್ಕಾರದ ಆದೇಶ ದಿ.25–08–2025 ಮತ್ತು ದಿ.03–09–2025ರಲ್ಲಿ ಪರಿಶಿಷ್ಟ ಜಾತಿ ಮೀಸಲಾತಿಯಲ್ಲಿ ಎ.ಬಿ.ಸಿ. ಎಂದು ಮೀಸಲಾತಿ ವರ್ಗೀಕರಣ ಮಾಡಲಾಗಿರುವುದರಿಂದ ಈ ನೇಮಕಾತಿಗೂ ಒಳ ಮೀಸಲು ಅನ್ವಯಯವಾಗಲಿದೆ ಎಂದು ಕಲಬುರಗಿ ಜಿಲ್ಲಾ ಆರ್.ಸಿ.ಎಚ್. ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿUÉ https://kala-buragi.nic.in ವೆಬ್‌ಸೈಟ್‌ನ್ನು ನೋಡಬಹುದಾಗಿದೆ.

## ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಗೊಂಡಬಾಳಗೆ ಯುವ ಕಾಂಗ್ರೆಸ್ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನೂತನವಾಗಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿ ಎಐಎಂಸಿಸಿಯಿಂದ ನೇಮಕಗೊಂಡ ಜ್ಯೋತಿ ಎಂ.ಗೊಂಡಬಾಳ ಅವರನ್ನು ನಗರದ ಡಿಸಿಸಿ ಕಛೇರಿಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿದ ಜ್ಯೋತಿ ಎಂ.ಗೊಂಡಬಾಳ ಅವರು, ಮುಂದಿನ ದಿನಗಳಲ್ಲಿ ಪಕ್ಷವನ್ನು ಎಲ್ಲಾ ಹಂತದಲ್ಲಿ ಬಲವರ್ಧನೆಗೊಳಿಸುವ ಕೆಲಸವನ್ನು ಎಲ್ಲಾ ಹಂತದ ಕಾರ್ಯಕರ್ತರು, ಪದಾಧಿಕಾರಿಗಳು ಸೇರಿ ಮಾಡಬೇಕಿದೆ. ಬೂತ ಹಂತದ ತರಬೇತಿ, ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮಗಳ ಸಮರ್ಥ ಬಳಕೆ ಮಾಡುವದೂ ಸೇರಿದಂತೆ ಪಕ್ಷದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಯುವ ಕಾಂಗ್ರೆಸ್ ಉಸ್ತುವಾರಿ ಇಲಾಹಿ ಸಿಕಂದರ್, ಐವಾಯ್‌ಸಿಆಪ್ ಉಸ್ತುವಾರಿಗಳಾದ ಆಯೇಷಾ ಬಳ್ಳಾರಿ ಹಾಗೂ ಹುಸೇನ ಭಾಷ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಲಿಂಗೇಶ್ ಕಲ್ಗುಡಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಕೊಪ್ಪಳ ತಾಲೂಕ ಅಧ್ಯಕ್ಷ ಸಂತೋಷ್ ಹೆಚ್. ಬೂದಿಹಾಳ, ಕುಷ್ಟಗಿ ತಾಲೂಕ ಅಧ್ಯಕ್ಷ ಈರಣ್ಣ ಬದಾಮಿ, ಗಂಗಾವತಿ ತಾಲೂಕ ಅಧ್ಯಕ್ಷ ರವಿ ಜೋಗದ ನಾಯಕ, ಕನಕಗಿರಿ ಬ್ಲಾಕ್ ಅಧ್ಯಕ್ಷ ದೇವರಾಜ ಕಟ್ಟಿಮನಿ, ಕುಷ್ಟಗಿ ಬ್ಲಾಕ್ ಅಧ್ಯಕ್ಷ ಅಯ್ಯಣ್ಣ ಹವಾಲ್ದಾರ್, ಜಿಲ್ಲಾ ಉಪಾಧ್ಯಕ್ಷ ಗವಿಸಿದ್ದನಗೌಡ ಮುದ್ದಾಬಳ್ಳಿ, ರಬೇಕಾ ಮುನಿರಾಬಾದ, ಶಿಲ್ಪಾ ಗುಡ್ಲಾನೂರು, ಜಿಲ್ಲಾ ಮಂಜುನಾಥ ವಾಯ ಕೆ, ಪರಶುರಾಮ ಮೆಕ್ಕಿ, ಲಕ್ಷ್ಮಣ, ನಾಗರಾಜ ಭಂಗಿ, ಹನುಮೇಶ ಬೆಣ್ಣಿ ಗುಳದಳ್ಳಿ, ಬೀರಪ್ಪ ಹಳೆಮನೆ, ಪರಶುರಾಮ ದೊಡ್ಡಮನಿ, ಯೂತ್ ಕಾಂಗ್ರೆಸ್ ಅಧ್ಯಕ್ಷರು, ಉಪಾಧ್ಯಕ್ಷರು, ಪಕ್ಷದ ಕಾರ್ಯಕರ್ತ ಉಪಸ್ಥಿತಿರಿದ್ದರು.

## ಕಾರಾಗೃಹದ ಕೈದಿಗಳಿಗೆ ಉಚಿತ ಕಂಪ್ಯೂಟರ್ ತರಬೇತಿಯ ಪ್ರಮಾಣ ಪತ್ರ ಹಾಗೂ ನೂತನ ತರಬೇತಿದಾರರಿಗೆ ಕಿಟ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.29–ಉಚಿತವಾಗಿ ಕಂಪ್ಯೂಟರ್ ತರಬೇತಿ ಪಡೆದಿರುವ ಕಲಬುರಗಿ ಕೇಂದ್ರ ಕಾರಾಗೃಹದ ಕೈದಿಗಳಿಗೆ ಪ್ರಮಾಣ ಪತ್ರ ಹಾಗೂ ನೂತನ ತರಬೇತಿದಾರರಿಗೆ ಕಿಟ್ ವಿತರಿಸುವ ಕಾರ್ಯಕ್ರಮವನ್ನು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಡಗಂಚಿ ಶಾಖೆಯ ಕಾರ್ಮಲ್ ಪಬ್ಲೀಕ್ ಚಾರಿಟೇಬಲ್ ಟ್ರಸ್ಟ್ ಕಾರ್ಯದರ್ಶಿಗಳಾದ ಫಾದರ್ ವಿಲಿಯಂ ಮಿರಿಂದಾ ಅವರು ಮಾತನಾಡಿ, ಕೇಂದ್ರ ಕಾರಾಗೃಹದ ಬಂದಿಗಳ ಜೀವನ ಸುಧಾರಣೆಗಾಗಿ ಈ ಕಂಪ್ಯೂಟರ್ ತರಬೇತಿ ನಿಡಲಾಗುತ್ತಿದೆ. ಈ ತರಬೇತಿಯು ಉತ್ತಮ ಬದುಕು ನಡೆಸಲು ದಾರಿ ದೀಪವಾಗಲಿದ್ದು, ಬಂದಿಗಳು ಈ ಕಂಪ್ಯೂಟರ್ ತರಬೇತಿ ಪಡೆದು ಉತ್ತಮ ಜೀವನ ನಡೆಸಬೇಕು ಎಂದರು. ಅದಾನಿ ಗ್ರೂಪ್ ಸಂಯೋಜಿಕ ಅಶೋಕ ಬಿ ಹಾಲವಿ, ಇಂದಿನ ದಿನಗಳಲ್ಲಿ ಕಂಪ್ಯೂಟರ್ ಶಿಕ್ಷಣ ಮಹತ್ವ ಪಡೆದಿದ್ದು, ಹಾಗಾಗಿ ಇಲ್ಲಿ ನೀಡುವ ಕಂಪ್ಯೂಟರ್ ತರಬೇತಿಯನ್ನು ಪಡೆದು ಉತ್ತಮ ಜೀವನ ನಡೆಸಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಪ್ರಮಾಣ ಪತ್ರ ಹಾಗೂ ಕಿಟ್ ವಿತರಿಸಿ ಮಾತನಾಡಿದ ಮುಖ್ಯ ಅಧೀಕ್ಷಕರಾದ ಡಾ॥ ಅನಿತಾ ಆರ್. ಅವರು, ಕಾರಾಗೃಹದಲ್ಲಿರುವ ಎಲ್ಲಾ ಬಂದಿಗಳು ಸರದಿ ಪ್ರಕಾರವಾಗಿ ಕಂಪ್ಯೂಟರ್ ಶಿಕ್ಷಣ ನೀಡುವುದರ ಜೊತೆಗೆ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ಸಹ ನೀಡಲಾಗುತ್ತಿದೆ. ಪ್ರತಿಯೊಬ್ಬ ಬಂದಿಯು ವೃತ್ತಪರ ತರಬೇತಿಗಳನ್ನು ಪಡೆದು ಇಲ್ಲಿಂದ ಬಿಡುಗಡೆಹೊಂದಿ ಸಮಾಜದೊಂದಿಗೆ ಬೆರೆತು ಈ ಕಾರಾಗೃಹದಲ್ಲಿ ಪಡೆದ ತರಬೇತಿಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಇನ್ನೊಬ್ಬರಿಗೆ ಮಾದರಿಯಾಗಿ ಬದುಕಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ 30 ಜನ ತರಬೇತಿ ಪಡೆದ ಪ್ರಶಿಕ್ಷಣಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಹಾಗೂ 30 ಜನ ನೂತನ ಪ್ರಶೀಕ್ಷಣಾರ್ಥಿಗಳಿಗೆ ಕಿಟ್ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಈ ಸಂಸ್ಥೆಯ ಅಧೀಕ್ಷಕರಾದ ಎಂ.ಹೆಚ್. ಆಶೇಖಾನ್, ಸಂಸ್ಥೆಯ ಸಹಾಯಕ ಅಧೀಕ್ಷಕರಾದ ಚನ್ನಪ್ಪ ಯಟಗ್ಲ್, ಕಾರ್ಮಲ್ ಜ್ಯೋತಿ, ಪಬ್ಲೀಕ್ ಚಾರಿಟೇಬಲ್ ಟ್ರಸ್ಟ್, ಕಡಗಂಚಿ ಶಾಖೆಯ ಸದಸ್ಯರಾದ ಫಾದರ್ ದೀಪಕ್ ಥಾಮಸ್, ಬ್ರದರ್ ಫ್ಲೇಮಿಂಗ್ ಹಾಗೂ ಕಂಪ್ಯೂಟರ್ ಶಿಕ್ಷಕ ಹರೀಶ್ ದತ್ತಾತ್ರೇಯ ಗೌಳಿ ಉಪಸ್ಥಿತರಿದ್ದರು.

# ತಾಳಿಕೋಟಿ ಪಟ್ಟಣ ಬಂದ್ ಸಂಪೂರ್ಣ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಸರ್ವೋಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿಗಳ ಮೇಲೆ ಶೂ ಎಸೆದ ಪ್ರಕರಣ,ದಲಿತ ಬಾಲಕಿ ಮೇಲೆ ಅತ್ಯಾಚಾರ ಎಸಗಿ ಕೊಲೆಗೈದ ಆರೋಪಿಗಳಿಗೆ ಗಲ್ಲು ಶಿಕ್ಷೆ ಹಾಗೂ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿದ ವ್ಯಕ್ತಿಯ ಗಡಿಪಾರಿಗೆ ಆಗ್ರಹಿಸಿ ವಿವಿಧ ದಲಿತ ಪರ ಸಂಘಟನೆಗಳ ಒಕ್ಕೂಟವು ಬುಧವಾರ ಕರೆ ನೀಡಿದ್ದ ತಾಳಿಕೋಟಿ ಪಟ್ಟಣ ಬಂದ್ ಸಂಪೂರ್ಣ ಯಶಸ್ವಿಯಾಗಿದೆ. ಪಟ್ಟಣದ ಬಹುತೇಕ ಅಂಗಡಿ ಮುಗ್ಗಟ್ಟುಗಳು, ಖಾಸಗಿ ಶಾಲಾ ಕಾಲೇಜುಗಳು ಸಂಪೂರ್ಣವಾಗಿ ಬಂದ ಆಗಿದ್ದು ಪೆಟ್ರೋಲ್ ಬಂಕ್, ಔಷಧಿ,ಆಸ್ಪತ್ರೆ, ಬ್ಯಾಂಕ್ ವ್ಯವಹಾರಗಳು ಹೊರತುಪಡಿಸಿ ಉಳಿದೆಲ್ಲ ಚಟುವಟಿಕೆಗಳು ಸ್ಥಗಿತಗೊಂಡಿದ್ದವು. ಇಲ್ಲಿನ ಮಹಾತ್ಮ ಗಾಂಧೀಜಿ ರಸ್ತೆಯಲ್ಲಿರುವ ಪ್ರಮುಖ ಮಾರುಕಟ್ಟೆ, ಕಿರಣಾ ಬಜಾರ್, ಜವಳಿ ಅಂಗಡಿಗಳು, ಎಪಿಎಂಸಿ ಮಾರುಕಟ್ಟೆ ತರಕಾರಿ ಮಾರುಕಟ್ಟೆ ಹೀಗೆ ಎಲ್ಲ ವ್ಯಾಪಾರ ವಹಿವಾಟುಗಳು ಬಂದ್ ಆಗಿದ್ದವು. ಪ್ರತಿಭಟನೆ ಕಾವು ಜೋರಾಗುವ ಹಿನ್ನೆಲೆಯಲ್ಲಿ ಸಾರಿಗೆ ಸಂಚಾರ ಸಹ ಸಂಪೂರ್ಣ ಸ್ತಬ್ಧವಾಗಿತ್ತು. ಸಾರಿಗೆ ಇಲಾಖೆ ಬಸ್ಸುಗಳೂ ರಸ್ತೆಗೆ ಇಳಿಯಲಿಲ್ಲ. ಯಾವಾಗಲೂ ಜನಸಂದಣಿಯಿಂದ ಕೂಡಿರುತ್ತಿದ್ದ ಬಸ್ಸು ನಿಲ್ದಾಣ, ಶಿವಾಜಿ ವೃತ್ತದ ಹತ್ತಿರ ಇರುವ ಮಾರುಕಟ್ಟೆ, ಕತ್ರಿ ಬಜಾರ್ ದ ಮಾರುಕಟ್ಟೆ, ಶ್ರೀ ಬಸವೇಶ್ವರ, ಅಂಬೇಡ್ಕರ್ ವೃತ್ತ ಹೀಗೆ ಅನೇಕ ಪ್ರದೇಶಗಳು ಜನರಿಲ್ಲದೆ ಬಿಕೋ ಎನ್ನುವಂತಾಯಿತು. ಬೆಳಿಗ್ಗೆಯಿಂದಲೇ ಪ್ರತಿಭಟನಾಕಾರರು ಹೋರಾಟ ಕೇಂದ್ರ ಸ್ಥಳವಾದ ಶ್ರೀ ಅಂಬೇಡ್ಕರ್ ಭವನಕ್ಕೆ ಹೋಗುತ್ತಿರುವ ದೃಶ್ಯ ಸಾಮಾನ್ಯವಾಗಿ ಕಂಡುಬಂದಿತು. ಮಧ್ಯಾಹ್ನ 12 ಗಂಟೆ ಹೊತ್ತಿಗೆ ಪಟ್ಟಣದಲ್ಲಿ ಪ್ರತಿಭಟನೆ ಕಾವು ಜೋರಾಗಿತ್ತು, ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ಪ್ರತಿಭಟನಾಕಾರರು ಆರಂಭದಲ್ಲಿ ಶ್ರೀ ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿಯನ್ನು ನಿರ್ಮಿಸಿ, ಟೈಯರ್ ಸುಟ್ಟು ಪ್ರಕರಣವನ್ನು ಖಂಡಿಸಿ ತಮ್ಮ ಆಕ್ರೋಶವನ್ನು ಹೊರ ಹಾಕಿದರು. ಶ್ರೀ ಬಸವೇಶ್ವರ ಮೂರ್ತಿಗೆ ಹೂಮಾಲೆ ಹಾಕುವುದರೊಂದಿಗೆ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಡಾ.ಬಿ. ಆರ್.ಅಂಬೇಡ್ಕರ್ ವೃತ್ತ, ಶ್ರೀ ಅಂಬಾ ಭವಾನಿ ದೇವಸ್ಥಾನ ಮಾರ್ಗದಿಂದ ಕತ್ರಿಬಜಾರ, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ ಸಿಂಹ ಸರ್ಕಲ್, ಬಸ್ ನಿಲ್ದಾಣ ಮುಂಭಾಗದ ಮಾರ್ಗದಿಂದ ಹಾದು ಶ್ರೀ ಬಸವೇಶ್ವರ ವೃತ್ತಕ್ಕೆ ಆಗಮಿಸಿ ಅಲ್ಲಿ ಬೃಹತ್ ಸಭೆಯಾಗಿ ಮಾರ್ಪಟ್ಟಿತು. ಈ ಸಂದರ್ಭದಲ್ಲಿ ಎಸ್ಎಸ್ ಜಿಲ್ಲಾ ಸಂಚಾಲಕ ಚಂದ್ರಕಾಂತ ಸಿಂಘೆ, ವಿಭಾಗೀಯ ಸಂಚಾಲಕ ದೇವೇಂದ್ರ ಹಾದಿಮನಿ, ಮುಖಂಡರಾದ ಸಿದ್ದಪ್ಪ ಕಟ್ಟಿಮನಿ ಜೈ ಭೀಮ ಮುತ್ತಗಿ ಹಾಗೂ ಸಿದ್ದು ಬಾರಿಗಿಡದ ಮಾತನಾಡಿ ಸಿಜೆಐ ಗವಾಯಿ ಅವರಿಗೆ ವಕೀಲ ರಾಕೇಶ್ ಕಿಶೋರ ಮಾಡಿದ ಅಪಮಾನ ಸಂವಿಧಾನ ಹಾಗೂ ನ್ಯಾಯಾಂಗ ವ್ಯವಸ್ಥೆ ಮೇಲಿನ ದಾಳಿಯಾಗಿದೆ ಈ ಹೇಯ ಕೃತ್ಯ ಎಸಿಗಿದ ವಕೀಲರನ್ನು ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ದಲಿತ ಬಾಲಕಿಯ ಮೇಲೆ ಅತ್ಯಾಚಾರ ವೆಸಗಿ ಕೊಲೆಗೈದ ಆರೋಪಿಗಳಿಗೆ ಗಲ್ಲು ಶಿಕ್ಷೆ ಹಾಗೂ ಪ್ರಿಯಾಂಕ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿದ ವ್ಯಕ್ತಿಗೆ ಗಡಿಪಾರು ಆಗಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದರು. ನಂತರ ತಹಸಿಲ್ದಾರ್ ಡಾ.ವಿನಯಾ ಹೂಗಾರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು. ಈ ಸಮಯದಲ್ಲಿ ಒಕ್ಕೂಟದ ಗೌರವಾಧ್ಯಕ್ಷ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್. ಬಿ.ಕಟ್ಟಿಮನಿ,ಅಧ್ಯಕ್ಷ ಮುತ್ತಪ್ಪ ಚಮಲಾಪೂರ,ಪತ್ರಕರ್ತ ಜಿ.ಟಿ.ಘೋರ್ಪಡೆ, ಅಂಜುಳಾದೇವಿ ಹರಿಜನ, ಒಕ್ಕೂಟದ ಪದಾಧಿಕಾರಿಗಳಾದ ನಾಗೇಶ ಕಟ್ಟಿಮನಿ,ಮಹೇಶ ಚಲವಾದಿ,ಮಹಾಂತೇಶ ಕಟ್ಟಿಮನಿ, ಶಂಕ್ರಪ್ಪ ಕಟ್ಟಿಮನಿ, ಕಾಶಿನಾಥ್ ಕಾರಗನೂರ, ಶಂಕರ ಪಡಸಾಲಿ, ಅಲ್ಪಸಂಖ್ಯಾತ ಮುಖಂಡರಾದ ಮಾಸೂಮಸಾಬ ಕೆಂಭಾವಿ, ಶಫೀಕ್ ಇನಾಮದಾರ, ಮೋದಿನಸಾ ನಗಾರ್ಚಿ, ನಿಸಾರ್ ಬೇಫಾರಿ,ಮಶಾಕ್ ನಗಾರ್ಚಿ, ಮೈನೂ ಬೇಪಾರಿ, ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಜುಮ್ಮಣ್ಣ ನಾಲತವಾಡ, ಅಂಬೇಡ್ಕರ್ ಸೇನೆ ಜಿಲ್ಲಾ ಉಪಾಧ್ಯಕ್ಷ ಬಸ್ಸು ಮಾದರ,ತಾಲೂಕ ಅಧ್ಯಕ್ಷ ಗೋಪಾಲ ಕಟ್ಟಿಮನಿ, ರಾಮಣ್ಣ ಮಾದರ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ಅಂಬೇಡ್ಕರ ಅಭಿಮಾನಿಗಳು ಇದ್ದರು.

# ಕೋಟೆಕಲ್‌ನಲ್ಲಿ ಸಂಭ್ರಮದ ಕಾರ್ತಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ಜಿಲ್ಲೆಯ ಗುಳೇದಗುಡ್ಡ ಸಮೀಪ ಕೋಟೆಕಲ್ ಗ್ರಾಮದಲ್ಲಿ ಅಮರೇಶ್ವರ ಮಠದ ಕಾರ್ತಿಕೋತ್ಸವ ಸಂಭ್ರಮದಿಂದ ಜರುಗಿತು. ಶ್ರೀಮಠದ ಪೀಠಾಧಿಪತಿ ಡಾ.ನೀಲಕಂಠ ಶಿವಾಚಾರ್ಯ ಮಹಾಸ್ವಾಮಿಗಳ ಅಧ್ಯಕ್ಷತೆಯಲ್ಲಿ ಕಡಪಟ್ಟಿ ಕೋಟೆಕಲ್ಲ ಹಾಗೂ ಗುಳೇದಗುಡ್ಡದ ಬಳಿಗಾರ ಬಂಧುಗಳಿಂದ ಕಾರ್ತಿಕೋತ್ಸವ ಇಳಿಸುವ ಕಾರ್ಯಕ್ರಮ ಜರಗಿತು.

ಲಿಂಗಕ್ಕೆ ಆರತಿ, ಮಂಗಳಾರತಿ ಮಾಡಿ ನೈವೇದ್ಯ ಸಮರ್ಪಿಸಲಾಯಿತು. ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಶ್ರೀಕಾಂತ ಬಳಿಗೇರ, ಮಹಾಂತೇಶ ಕಡಪಟ್ಟಿ, ಮಾಗುಂಡಪ್ಪ ಕಮತರ, ಮುತ್ತು ಮರಬದ, ಗುಂಡಪ್ಪ ಕೋಟಿ, ಹುಚ್ಚೇಶ ಕಮತರ, ಮಾಗುಂಡಪ್ಪ ಸುಂಕದ, ರಾಜಣ್ಣ ಕೆರೂರು, ಸಂತೋಷ ಬಂಗಿ, ಹನುಮಂತ ಹಂಸನೂರ ಹಾಗೂ ತೋಗುಣಶಿ ಕೊಂಕನಕೊಪ್ಪ, ಕೋಟೆಕಲ್ಲ, ಗುಳೇದಗುಡ್ಡ ಸದ್ಭಕ್ತರು ಪಾಲ್ಗೊಂಡಿದರು.

# ಶಿವರುದ್ರ ಪಠಣದ ಮೂಲಕ ಸನಾತನ ಸಂಸ್ಕೃತಿಯ ಅರಿವು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29– ಸನಾತನ ಹಿಂದೂ ಧರ್ಮದ ಮೌಲ್ಯಗಳನ್ನು ಉಳಿಸಿ ಬೆಳೆಸುವ ದೃಷ್ಟಿಯಿಂದ ಮಹಿಳೆಯರಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನಗರದ ರುದ್ರಂ ಆಧ್ಯಾತ್ಮಿಕ ಸಂಸ್ಥೆ ಶಿವರುದ್ರ ಪಠಣ ಅಭಿಯಾನ ಕೈಗೊಂಡಿದೆ ಎಂದು ಸಂಸ್ಥೆಯ ಅಧ್ಯಕ್ಷೆ ವಿದ್ಯಾವತಿ ಹೆಬ್ಬಾಳ ಹೇಳಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳೆಯರು ಧಾರ್ಮಿಕ ವಿಷಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡರೆ ಕುಟುಂಬ ಮತ್ತು ಸಮಾಜದಲ್ಲಿ ಸನಾತನ ಮೌಲ್ಯಗಳು ಮತ್ತಷ್ಟು ಬಲಪಡುತ್ತವೆ. ಈ ಉದ್ದೇಶದಿಂದ ಧರ್ಮಗ್ರಂಥಗಳು, ಪುರಾಣಗಳು ಹಾಗೂ ಶ್ಲೋಕಗಳ ಪಾಠ ತರಗತಿಗಳನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡೂ ರೀತಿಯಲ್ಲಿ ಪ್ರಾರಂಭಿಸಲಾಗಿದೆ ಎಂದರು.

ಕಳೆದ ಎರಡು ತಿಂಗಳಲ್ಲಿ 200 ಕ್ಕೂ ಹೆಚ್ಚು ಮಹಿಳೆಯರು ಶಿವರುದ್ರ ಪಠಣ ಕಲಿತು ಧಾರ್ಮಿಕ ಶಕ್ತಿಯನ್ನು ಅಂತರಂಗದಲ್ಲಿ ಬೆಳೆಸಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಈ ತರಗತಿಗಳನ್ನು ಜಿಲ್ಲೆಯ ಬೇರೆಬೇರೆ ತಾಲೂಕುಗಳಲ್ಲಿಯೂ ವಿಸ್ತರಿಸುವ ಉದ್ದೇಶವಿದೆ ಎಂದು ಹೆಬ್ಬಾಳ ತಿಳಿಸಿದರು.

ಸೀಮಾ ಮನ್ನೂರ ಮಾತನಾಡಿ, ನವೆಂಬರ 3ರಂದು ಮಧ್ಯಪ್ರದೇಶದ ಉಜ್ಜೈನಿಯಲ್ಲಿ ನಡೆಯಲಿರುವ ಮಹಾ ಮಂತ್ರಪಠಣ ಹಾಗೂ ಧಾರ್ಮಿಕ ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲೆಯಿಂದ ಸುಮಾರು 200 ಮಹಿಳೆಯರು ಭಾಗವಹಿಸಲಿದ್ದಾರೆ. ಇದರಿಂದ ಸನಾತನ ಧರ್ಮದ ಪಾಠ ಹಾಗೂ ತತ್ವಗಳು ಮಹಿಳೆಯರ ಜೀವನದ ಭಾಗವಾಗಲಿವೆ. ಭವಿಷ್ಯದಲ್ಲಿ ಸಮಾಜ ಸೇವೆ, ಧಾರ್ಮಿಕ ಅಧ್ಯಯನ ಮತ್ತು ಕಾಲಾನುಗುಣ ವಿಷಯಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಗಳು ನಡೆಯಲಿವೆ. ನಮ್ಮ ಉದ್ದೇಶ ಧರ್ಮವನ್ನು ಪಾಠವಾಗಿ ಅಲ್ಲ, ಜೀವನ ಶೈಲಿಯಾಗಿ ಬೆಳೆಸುವುದಾಗಿದೆ ಎಂದು ಹೇಳಿದರು.

ಮೀರಾ ಕಾಂಬಳೆ, ಸರೋಜಾ ಪಾಟೀಲ, ಲತಾ ಜೋಳದ ಸೇರಿದಂತೆ ಇತರರು ಇದ್ದರು.

# ಕಸಾಪಕ್ಕೆ ಆಡಳಿತಾಧಿಕಾರಿ ನೇಮಕ ಸಾಹಿತಿ ಪ್ರಕಾಶ ಖಾಡೆ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29– ಕನ್ನಡ ಸಾಹಿತ್ಯ ಪರಿಷತ್ತಿಗೆ ಆಡಳಿತಾಧಿಕಾರಿ ನೇಮಕ ಮಾಡಿರುವುದನ್ನು ಸಾಹಿತಿ ಪ್ರಕಾಶ ಖಾಡೆ ಸ್ವಾಗತಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಹುತೇಕ ಈಚಿನ ದಿನಗಳಲ್ಲಿ ಸಾಹಿತ್ಯ ಕಾರ್ಯಕ್ರಮಗಳಿಂದ ದೂರವೇ ಉಳಿದಿದ್ದ ಪರಿಷತ್ತು ತನ್ನ ಮೂಲ ಉದ್ದೇಶಗಳಾದ ದತ್ತಿ ಕಾರ್ಯಕ್ರಮಗಳ ಆಯೋಜನೆ, ನಿಯಮಿತವಾಗಿ ತಾಲೂಕು, ಜಿಲ್ಲಾ ಸಮ್ಮೇಳನಗಳನ್ನು ಜರುಗಿಸುವುದನ್ನು ಮರೆತು ಬಿಟ್ಟಿದೆ.

ಗತ ಸಾಹಿತಿಗಳ ಸ್ಮರಣೆ, ಕಥೆ, ಕಾವ್ಯ ಕಮ್ಮಟಗಳನ್ನು ಜರುಗಿಸಿ ಯುವ ಬರಹಗಾರರನ್ನು ಉತ್ತೇಜಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವುದನ್ನು ಬಿಟ್ಟು ಬರೀ ವಿವಾದಗಳಲ್ಲಿಯೇ ಕಳೆದು ಹೋದ ಪರಿಷತ್ತನ್ನು ಮರು ಕಟ್ಟಬೇಕಾಗಿದ ಅಗತ್ಯತೆಯಿದೆ ಎಂದಿರುವ ಖಾಡೆ, ಇನ್ನಾದರೂ ಸಾಹಿತಿಗಳು ಪರಿಷತ್ತಿನ ಕಡೆಗೆ ಬರುವಂತಾಗಲಿ ಎಂದಿದ್ದಾರೆ.

# ನ.4 ಜಿ.ಪಂ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ 2025–26ನೇ ಸಾಲಿನ ದ್ವಿತೀಯ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನವೆಂಬರ್ 4 ಬೆಳಿಗ್ಗೆ 10.30 ಗಂ–ಟೆಗೆ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿ.ಪಂ ಸಿಇಓ ಶಶಿಧರ ಕುರೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಸಂಪರ್ಕಿಸಿರಿ:
9449732000

# ಮುಧೋಳದಲ್ಲಿ ಶ್ರೀಶೈಲ ಶ್ರೀಗಳ ನುಡಿ

## ಬಾಗಲಕೋಟೆ ಬಿವಿವಿ ಶಿಕ್ಷಣ ಸಂಸ್ಥೆಯಿಂದ ಸಂಸ್ಕಾರಯುತ ವಿದ್ಯೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ಬಾಗಲಕೋಟೆಯ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಸ್ಥೆ ಶೈಕ್ಷಣಿಕ ಹಾಗೂ ಧಾರ್ಮಿಕ ಸೇವೆಯೊಂದಿಗೆ ಸಂಸ್ಕಾರಯುತ ವಿದ್ಯೆಯನ್ನು ದಾರೆಯೆರೆಯುತ್ತಿದ್ದು, ರಾಜ್ಯದಲ್ಲಿಯೇ ಮಾದರಿ ಶಿಕ್ಷಣ ಸಂಸ್ಥೆಯಾಗಿದೆ ಎಂದು ಶ್ರೀಶೈಲ ಜಗದ್ಗುರು ಡಾ. ಚೆನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಅಂಗ ಸಂಸ್ಥೆಯಾಗಿರುವ ಮುಧೋಳದ ಬಿಪ್ಸ್ ಶಾಲಾ ಕಟ್ಟಡದ ಉದ್ಘಾಟನೆ ನೆರವೇರಿಸಿ ವಾಸ್ತು ಶಾಂತಿ ಪೂಜಾ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಪೂಜ್ಯರು, ಆರ್ಥಿಕ ಸಂಪತ್ತಿಗಿಂತ ಜ್ಞಾನ ಸಂಪತ್ತು ಬಹಳ ದೊಡ್ಡದು. ಜ್ಞಾನಕ್ಕಿಂತ ಮಿಗಿಲಾದ ವಸ್ತು ಈ ಜಗದಲ್ಲಿ ಮತ್ತೊಂದಿಲ್ಲ. ಮನುಷ್ಯ ಏನನ್ನು ಬೇಕಾದರೂ ಕಳೆದುಕೊಳ್ಳಬಹುದು ಆದರೆ ಗಳಿಸಿದ ಜ್ಞಾನ ಎನ್ನುವ ಸಂಪತ್ತನ್ನು ಕಳೆದುಕೊಳ್ಳಲು ಆಗುವುದಿಲ್ಲ ಅಥವಾ ಅದನ್ನು ಯಾರು ಅಪಹರಿಸಲು ಸಾಧ್ಯವಿಲ್ಲ ಎಂದರು.

ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ಅಗಾಧ ಜ್ಞಾನವನ್ನು ಗಳಿಸುತ್ತಿದ್ದಾರೆ. ಅದರ ಜೊತೆಗೆ ಸಂಸ್ಕಾರವನ್ನು ಪಡೆದುಕೊಳ್ಳುವುದು ಅವಶ್ಯವಾಗಿದೆ. ಈ ನಿಟ್ಟಿನಲ್ಲಿ ಬಿವಿವಿ ಸಂಘವು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ಜೊತೆಗೆ ಸಂಸ್ಕಾರಯುತ ವಿದ್ಯೆಯನ್ನು ನೀಡುತ್ತಿರುವುದು ಸ್ತುತ್ಯಾರ್ಹವಾಗಿದೆ ಸ್ವಾಮೀಜಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಮಾತನಾಡಿ, ಸಂಘದ ಎಲ್ಲ ಬಿಪ್ಸ್ ಶಾಲೆಗಳಲ್ಲಿ 8400 ಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳು ಶಿಕ್ಷಣ ಪಡೆದುಕೊಳ್ಳುತ್ತಿದ್ದಾರೆ. ಇದನ್ನು ಮುಂಬರುವ ದಿನಗಳಲ್ಲಿ 10,000 ವರೆಗೆ ಕೊಂಡಯ್ಯುವ ಗುರಿಯನ್ನು ಹೊಂದಿದ್ದೇವೆ. ಕೇವಲ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಗೆ ಮಾಡುವುದು ಮಾತ್ರವಲ್ಲ ಅವರಿಗೆ ಉತ್ತಮವಾದ ಸಂಸ್ಕಾರಯುತ ಶಿಕ್ಷಣ ನೀಡುವುದು ಧ್ಯೇಯವಾಗಿದೆ ಎಂದರು.

ಬಿಪ್ಸ್ ಬಾಗಲಕೋಟೆ ಶಾಲೆಯ ಪ್ರಾಂಶುಪಾಲ ಸಿ.ಸಿ.ಸುರೇಶ ಹೆಗಡೆ ಪ್ರಾಸ್ತಾವಿಕವಾಗಿ ಮಾತನಾಡಿ, ಬಿಪ್ಸ್ ಸಂಸ್ಥೆಗಳು ಬೆಳೆದು ಬಂದ ರೀತಿಯನ್ನು ವಿವರಿಸಿದರು. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಸಂಘದ ಹೈಸ್ಕೂಲಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ ಉಪಸ್ಥಿತರಿದ್ದರು.

ಬಿಪ್ಸ್ ಮುಧೋಳ ಶಾಲೆಯ ಪ್ರಾಂಶುಪಾಲ ಶಶಿಧರ್ ಕುಲಕರ್ಣಿ ಸ್ವಾಗತಿಸಿದರು. ದಿಪ್ಸ್ ಮುಧೋಳ್ ಶಾಲೆಯ ಉಪ ಪ್ರಾಂಶುಪಾಲ ಸಂಗಪ್ಪ ಬಿಜ್ಜರಿಗೆ ವಂದಿಸಿದರು. ರಮ್ಯಾ ನಾಯಕ ಹಾಗೂ ಸಂಧ್ಯಾ ಸರ್ವದೆ ನಿರೂಪಿಸಿದರು.

# ರಾಜ್ಯ ಸರ್ಕಾರಿ ನೌಕರರಿಗೆ ರಾಜ್ಯಮಟ್ಟದ ವಿವಿಧ ಸ್ಪರ್ಧೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಸರ್ಕಾರಿ ನೌಕರರಿಗೆ ರಾಜ್ಯಮಟ್ಟದ ಜನಪದ, ಕನ್ನಡ ಗೀತೆಗಳ ನೃತ್ಯ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಸರ್ಕಾರಿ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರು ಮಾತ್ರ ಭಾಗವಹಿಸಬೇಕು. ಒಂದು ತಂಡದಲ್ಲಿ 8–12 ಜನರು ಭಾಗವಹಿಸಬೇಕು. ಪ್ರಥಮ ಬಹುಮಾನ 1 ಲಕ್ಷ ರೂ, ದ್ವಿತೀಯ ಬಹುಮಾನ 75,000 ರೂ, ತೃತೀಯ ಬಹುಮಾನ 50,000 ರೂ, ಹಾಗೂ ಸಮಾಧಾನಕರ ಬಹುಮಾನ 20,000 ರೂ. ನಿಗದಿಪಡಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ನೌಕರರು ನ.2 ರೊಳಗೆ ಆನ್‌ಲೈನ್ ಮೂಲಕ ಹೆಸರು ನೋಂದಣಿ ಮಾಡಿಕೊಳ್ಳಬೇಕು. ಸ್ಪರ್ಧೆಗಳು ನಡೆಯುವ ಸ್ಥಳ ಮತ್ತು ಕಾರ್ಯಕ್ರಮದ ವಿವರಗಳನ್ನು ನೋಂದಣಿಯ ಅಂತಿಮ ದಿನಾಂಕದ ಬಳಿಕ ತಿಳಿಸಲಾಗುವುದು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಬಾಗಲಕೋಟೆ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವ-ಉದ್ಯೋಗದಿಂದ ಯುವಕರು ಯಶಸ್ವಿ ಉದ್ಯಮಿಗಳಾಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29– ಪ್ರತಿ ವರ್ಷ ಸಾವಿರಾರು ವಿದ್ಯಾರ್ಥಿಗಳು ಪದವಿ ಪೂರ್ಣಗೊಳಿಸುತ್ತಿರುವ ಈ ದಿನಗಳಲ್ಲಿ ಸರ್ಕಾರ ಮತ್ತು ಖಾಸಗಿ ಕಚೇರಿಗಳಲ್ಲಿ ಎಲ್ಲರಿಗೂ ಉದ್ಯೋಗ ಸಿಗುವುದು ಅನುಮಾನವಾಗಿದೆ. ಆದ್ದ–ರಿಂದ ವಿದ್ಯಾರ್ಥಿಗಳು ಪದವಿ ಹಂತದಲ್ಲೇ ವ್ಯವಹಾರಿಕ ಜ್ಞಾನವನ್ನು ಪಡೆದುಕೊಂಡು ಸ್ವಉದ್ಯೋಗದ ಕೌಶಲ್ಯವನ್ನು ಬೆಳಸಿಕೊಂಡು ಉದ್ಯಮ ಆರಂಭಿಸಬೇಕಾದ ಅಗತ್ಯತೆಯಿದೆ ಎಂದು ಬಿ.ಇ.ಸಿ–ಸ್ಟೆಪ್ ಕಾರ್ಯನಿರ್ವಾಹಕ ನಿರ್ದೇಶಕ ಬಿ.ಎಸ್. ಅಂಗಡಿ ಹೇಳಿದರು.

ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನಲ್ಲಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಶನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಬೆಂಗಳೂರು ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಖಂಒಕ ಯೋಜನೆ ಅಡಿ ಇಂಕ್ಯುಬೇಶನ್' ವಿಷಯದ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬೇರೆಯವರ ಬಳಿ ಕೆಲಸ ಮಾಡುವುದರಿಂದ ನಿಮ್ಮ ಸಾಮರ್ಥ್ಯ ಗುರುತಿಸಿಕೊಳ್ಳುವ ಅವಕಾಶ ಕಡಿಮೆಯಾಗುತ್ತದೆ. ಸ್ವತಃ ಒಂದು ಉತ್ತಮ ಉದ್ಯಮ ಆಯ್ಕೆ ಮಾಡಿಕೊಂಡು ಶ್ರದ್ಧೆ ಹಾಗೂ ಪರಿಶ್ರಮದಿಂದ ಯಶಸ್ಸು ಸಾಧಿಸಬೇಕು ಎಂದು ಸಲಹೆ ನೀಡಿದರು.

ಒಖಒಇ ಕ್ಷೇತ್ರವು ಭಾರತದ ಆರ್ಥಿಕತೆಯ ಬೆನ್ನೆಲುಬಾಗಿ ಕೆಲಸ ಮಾಡುತ್ತಿದ್ದು, ದೇಶದ ಒಟ್ಟು ರಫ್ತು ವ್ಯವಹಾರದಲ್ಲಿ 45 ಶೇಕಡಾ ಪಾಲು ಹೊಂದಿದೆ. ಕೊರೋನಾ ಸಮಯದಲ್ಲಿ ಒಖಒಇ ಹಿನ್ನಡೆ ಅನುಭವಿಸಿದಾಗ, ಭಾರತ ಸರ್ಕಾರವು ಖಂಒಕ ಯೋಜನೆಯನ್ನು ಪ್ರಾರಂಭಿಸಿತು. ಇದರ ಉದ್ದೇಶ ಒಖಒಇ ಚಟುವಟಿಕೆಗೆ ವೇಗ ನೀಡುವುದು. ಇಂದಿನ ಯುವಕರು 'ಮೇಕ್ ಇನ್ ಇಂಡಿಯಾ' ಸೇರಿದಂತೆ ವಿವಿಧ ಯೋಜನೆಗಳ ಸದುಪಯೋಗ ಪಡೆದು ತಮ್ಮ ಉದ್ಯಮವನ್ನು ಬಲಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಕಾಲೇಜಿನ ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ವಿಭಾಗದ ಮುಖ್ಯಸ್ಥೆ ಜೆ.ಡಿ. ಮಲ್ಲಾಪೂರ ಮಾತನಾಡಿ, ಉದ್ಯಮದ ಕುರಿತ ಅರಿವು ಪಡೆಯಲು ವಿದ್ಯಾರ್ಥಿಗಳು ಬೆಂಗಳೂರಿನಂತಹ ಮಹಾನಗರಗಳಿಗೆ ತೆರಳಬೇಕಾಗುತ್ತಿತ್ತು. ಆದರೆ ಈ ಕಾರ್ಯಾಗಾರದಿಂದ ಅಲ್ಲಿ ಕಲಿಯಬೇಕಾದ ವಿಷಯಗಳನ್ನು ಇಲ್ಲಿ ತಿಳಿದುಕೊಳ್ಳಲು ವಿದ್ಯಾರ್ಥಿಗಳಿಗೆ ಅವಕಾಶ ಸಿಕ್ಕಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಉಪ ನಿರ್ದೇಶಕ ಮಂಜುನಾಥ ಹೊಸಮನಿ, ಸಹಾಯಕ ನಿರ್ದೇಶಕಿ ರತ್ನಾ ಅಂಗಡಿ, ಗ್ರಾಮೀಣ ಕೈಗಾರಿಕೆ ಉಪ ನಿರ್ದೇಶಕ ಸಿದ್ದರಾಯ ಬಳೂರಗಿ, ಜಿಲ್ಲಾ ಕೈಗಾರಿಕಾ ಇಲಾಖೆ ಸಹಾಯಕ ನಿರ್ದೇಶಕ ಅತಿಫ್ ಜಮಾದಾರ, ಒಖಒಇ ವ್ಯವಸ್ಥಾಪಕ ದೀಪಕ್ ಡಿ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಜ್ಜಲಶ್ರೀ ಕಾಲೇಜಿನಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.29–ನಗರದ ಬ.ವಿ.ವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಮಾನಸಿಕ ಆರೋಗ್ಯ ಶುಶ್ರೂಷಾ ವಿಭಾಗದ ವತಿಯಿಂದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಅಂಗವಾಗಿ ಬುಧವಾರ ವಿಪತ್ತು ಮತ್ತು ತುರ್ತು ಸಂದರ್ಭಗಳಲ್ಲಿ ಮಾನಸಿಕ ಆರೋಗ್ಯ ಸೇವೆಗಳ ಅವಕಾಶಗಳು ಎಂಬ ಧ್ಯೇಯ ವಾಕ್ಯದ ಮೇಲೆ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಅತಿಥಿ ಉಪನ್ಯಾಸಕರಾಗಿ ಆಗಮಿಸಿದ್ದ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋರೋಗ ತಜ್ಞೆ ಡಾ.ಅಪೇಕ್ಷಾ ಕುಲಕರ್ಣಿ, ಸಮುದಾಯದಲ್ಲಿ ಕಂಡುಬರುವ ವಿವಿಧ ಮಾನಸಿಕ ತೊಂದರೆಗಳು ಹಾಗೂ ಅವುಗಳ ಬಗ್ಗೆ ಜನಸಾಮಾನ್ಯರಲ್ಲಿ ಇರುವ ಮೌಢ್ಯಗಳ ಬಗ್ಗೆ ವಿಸ್ತೃತವಾಗಿ ಮಾಹಿತಿ ನೀಡಿದರು. ವಿಪತ್ತು ಮತ್ತು ತುರ್ತು ಸಂಧರ್ಭಗಳಲ್ಲಿ ಬಾಧಿತರಲ್ಲಿ ಉಂಟಾಗುವ ಮಾನಸಿಕ ತೊಂದರೆಗಳು ಮತ್ತು ಅವುಗಳ ನಿರ್ವಹಣೆಯಲ್ಲಿ ಶುಶ್ರೂಷಕರ ಪಾತ್ರದ ಬಗ್ಗೆ ಅವರು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ದಿಲೀಪ್ ನಾಟೇಕರ್ ಮಾತನಾಡಿ, ದೈಹಿಕ ತೊಂದರೆಗಳಿಗೆ ಒಳಗಾದಾಗ ನಾವು ವೈದ್ಯಕೀಯ ಚಿಕಿತ್ಸೆಯನ್ನು ಹೇಗೆ ಪಡೆಯುತ್ತೇವೆಯೋ ಹಾಗೆಯೇ ಮಾನಸಿಕ ತೊಂದರೆಗಳು ಕೂಡಾ ಸರ್ವೆಸಾಮಾನ್ಯವಾಗಿದ್ದು, ಯಾವುದೇ ಹಿಂಜರಿಕೆ ಇಲ್ಲದೆ ಮನೋವೈದ್ಯಕೀಯ ಚಿಕಿತ್ಸೆಯನ್ನು ಪಡೆದು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಹಾಗೂ ಶುಶ್ರೂಷಕರಾಗಿ ಈ ಬಗ್ಗೆ ಸಾಮಾನ್ಯ ಜನರಲ್ಲಿ ಅರಿವು ಮೂಡಿಸುವ ಬಹುದೊಡ್ಡ ಜವಾಬ್ದಾರಿ ನಮ್ಮ ಮೇಲಿದೆ ಎಂದು ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಉದಾಹರಣೆಗಳ ಸಮೇತ ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಾನಸಿಕ ಆರೊಗ್ಯ ಶುಶ್ರೂಷಾ ವಿಭಾಗದ ಮುಖ್ಯಸ್ಥೆ ಡಾ.ಶ್ರೀಹರ್ಷ ಸಿ., ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ವೃದ್ಧಿಸಿಕೊಳ್ಳುವುದರಲ್ಲಿ ಜೀವನಶೈಲಿ, ಉತ್ತಮ ಹವ್ಯಾಸಗಳು ಹಾಗೂ ದೈಹಿಕ ಚಟುವಟಿಕೆಗಳು ಹೇಗೆ ಮಹತ್ವದ್ದಾಗಿರುತ್ತದೆ ಎಂಬುದರ ಬಗ್ಗೆ ಸ್ವಾರಸ್ಯಕರವಾಗಿ ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ವಿಶ್ವ ಆತ್ಮಹತ್ಯಾ ತಡೆಗಟ್ಟುವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕಥೆ ಮತ್ತು ಪದ್ಯಗಳ ವಾಚಕ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ತುಳಸಪ್ಪ ಸ್ವಾಗತಿಸಿದರು. ವಿದ್ಯಾವತಿ ಮತ್ತು ಹರ್ಷಿಣಿ ನಿರೂಪಿಸಿದರು. ತುಳಸಪ್ಪ ಸ್ವಾಗತಿಸಿದರು. ಸಂಜೀವರಡ್ಡಿ ವಂದಿಸಿದರು. ಪ್ರೊ.ಟ್ರೇಸಾ ಜೋಸೆಫ್, ಪ್ರೊ.ವಾಣಿಶ್ರೀ ಪೂಜಾರಿ, ವಿಜಯ ಬಸರಕೋಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

